ಲಿಖಿತ ಮೂಲಕ
ಉತ್ತರಿಸುವ ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೦೨

# ಪಟ್ಟಿ – ೦೨

# ಕರ್ನಾಟಕ ವಿಧಾನ ಪರಿಷತ್ತು

ನೂರ ಐವತ್ತ ಮೂರನೇ ಅಧಿವೇಶನ

ಮಂಗಳವಾರ, ದಿನಾಂಕ : ೧೬ನೇ ಜುಲೈ, ೨೦೨೪

---

## ಸಮೂಹ – II

೧. ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು

೨. ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು

೩. ಸಣ್ಣ ಕೈಗಾರಿಕೆ ಹಾಗೂ ಸಾರ್ವಜನಿಕ ವಲಯ ಉದ್ಯಮಗಳ ಸಚಿವರು

೪. ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು

೫. ಪೌರಾಡಳಿತ ಹಾಗೂ ಹಜ್ ಸಚಿವರು

೬. ಸಹಕಾರ ಸಚಿವರು

೭. ನಗರಾಭಿವೃದ್ಧಿ ಹಾಗೂ ನಗರ ಯೋಜನೆ ಸಚಿವರು

---

## ಸಹಕಾರ ಸಂಘಗಳಲ್ಲಿ ಮಹಿಳೆಯರ ಪಾತ್ರದ ಕುರಿತು

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೩೫ (೨೬೫) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಹಕಾರ ಸಂಘಗಳಲ್ಲಿ ಮಹಿಳೆಯರ ಪಾತ್ರವನ್ನು ಹೆಚ್ಚಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು;

(ಆ) ಹಿಂದುಳಿದ ವರ್ಗಗಳ ವಿಶೇಷವಾಗಿ ಮಹಿಳೆಯರ ಆದಾಯ ಉತ್ಪಾದನೆಗೆ ಅವಕಾಶಗಳನ್ನು ಸೃಷ್ಟಿಸಲಾಗಿದೆಯೇ;

(ಇ) ಗ್ರಾಮೀಣ ಮಹಿಳೆಯರ ಸಬಲೀಕರಣಕ್ಕಾಗಿ ಸರ್ಕಾರವು ಯಾವುದಾದರೂ ಯೋಜನೆಗಳನ್ನು ರೂಪಿಸಿದೆಯೇ; (ವಿವರ ಒದಗಿಸುವುದು)

(ಈ) ಸರ್ಕಾರವು ಸಹಕಾರ ಸಂಘಗಳ ಮೂಲಕ ಮಹಿಳೆಯರಿಗೆ ಕೌಶಲ್ಯ ಅಭಿವೃದ್ಧಿಯನ್ನು ನೀಡುತ್ತಿದೆಯೇ; ಹಾಗಿದ್ದಲ್ಲಿ, ವಿವರ ಒದಗಿಸುವುದು;

(ಉ) ಇಲ್ಲದಿದ್ದಲ್ಲಿ, ಭವಿಷ್ಯದಲ್ಲಿ ಸಹಕಾರ ಸಂಘಗಳ ಮೂಲಕ ಮಹಿಳೆಯರ ಕೌಶಲ್ಯಾಭಿವೃದ್ಧಿಗೆ ಸರ್ಕಾರ ಪರಿಗಣಿಸಿ ಕ್ರಮ ಕೈಗೊಳ್ಳುವುದೇ ?

## ನಗರಾಭಿವೃದ್ಧಿ ಪ್ರಾಧಿಕಾರಗಳ ನೌಕರರುಗಳಿಗೆ ಏಕರೂಪ ವೃಂದ ಮತ್ತು ನೇಮಕಾತಿ ಕುರಿತು

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೩೬ (೨೬೬) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯ ನಗರಾಭಿವೃದ್ಧಿ ಪ್ರಾಧಿಕಾರಿಗಳ ನೌಕರರುಗಳಿಗೆ ಏಕರೂಪ ವೃಂದ ಮತ್ತು ನೇಮಕಾತಿ ನಿಯಮಗಳನ್ನು ರಚಿಸಲು ಸರ್ಕಾರ ಚಿಂತಿಸಿದೆಯೇ;

(ಆ) ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ ಅಧಿನಿಯಮ ೧೯೮೭ ರಂತೆ ಪ್ರಾಧಿಕಾರಗಳಲ್ಲಿ ಖಾಯಂ ಕರ್ತವ್ಯನಿರತ ನೌಕರರುಗಳಿಗೆ ವೃಂದ ಮತ್ತು ನೇಮಕಾತಿ ನಿಯಮದಲ್ಲಿ ಮುಂಬಡ್ತಿಯಿಲ್ಲದೆ ಮತ್ತು ವರ್ಗಾವಣೆಯಿಲ್ಲದೆ ಪ್ರಾಧಿಕಾರಗಳಲ್ಲೇ ಕರ್ತವ್ಯ ನಿರ್ವಹಿಸುತ್ತಾ ಅಲ್ಲಿಯೇ ನಿವೃತ್ತರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಈ ಹಿಂದೆ ದಿನಾಂಕ:೧೫.೦೩.೨೦೨೨ ರಂದು ಎಲ್ಲಾ ನಗರಾಭಿವೃದ್ಧಿ ಪ್ರಾಧಿಕಾರಗಳಿಗೆ ಏಕರೂಪದ ಸಮಿತಿ ರಚಿಸಿ ಮುಂದಿನ ಆರು ತಿಂಗಳ ಒಳಗಾಗಿ ಸರ್ಕಾರ ಅನುಮೋದನೆ ನೀಡಿ ಅಳವಡಿಸಿಕೊಳ್ಳಲಾಗುವುದೆಂದು ಕಳೆದ ಅಧಿವೇಶನದಲ್ಲಿ ಭರವಸೆ ನೀಡಿದ್ದು, ಈ ಬಗ್ಗೆ ಸರ್ಕಾರದ ನಿಲುವೇನು?

## ಕೇಂದ್ರ ಸರ್ಕಾರದ ಒಂದು ಜಿಲ್ಲೆ ಒಂದು ಉತ್ಪನ್ನ ಯೋಜನೆ ಕುರಿತು

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೩೭ (೨೬೪) ಮಾನ್ಯ ಸಣ್ಣ ಕೈಗಾರಿಕೆ ಹಾಗೂ ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೇಂದ್ರ ಸರ್ಕಾರದ ಒಂದು ಜಿಲ್ಲೆ, ಒಂದು ಉತ್ಪನ್ನ ಯೋಜನೆಯನ್ನು ರಾಜ್ಯದಲ್ಲಿ ಜಾರಿಗೊಳಿಸಲಾಗಿದೆಯೇ;

(ಆ) ಜಾರಿಗೊಳಿಸಿದ್ದಲ್ಲಿ, ಯೋಜನೆಯ ಅನುಷ್ಠಾನವನ್ನು ಸಾಧಿಸಲು ಸರ್ಕಾರವು ನಿಗದಿತ ಸಮಯವನ್ನು ನಿಗದಿಪಡಿಸಲಾಗಿದೆಯೇ;

(ಇ) ಯೋಜನೆಯ ಮೂಲಕ ಜಿಲ್ಲೆಯ ನಿರ್ದಿಷ್ಟ ಉತ್ಪನ್ನಗಳನ್ನು, ನಿರ್ದಿಷ್ಟವಾಗಿ ಜಿಲ್ಲೆಯ ಕಲೆ ಮತ್ತು ಕರಕುಶಲ ಉತ್ಪನ್ನಗಳನ್ನು ಮಾರಾಟ ಮಾಡಲು ಡಿಜಿಟಲ್ ಪರಿಸರ ವ್ಯವಸ್ಥೆಯನ್ನು ರಚಿಸಲು ಸರ್ಕಾರವು ತೆಗೆದುಕೊಳ್ಳುತ್ತಿರುವ ಕ್ರಮಗಳೇನು?

## ಪಟ್ಟಣ ಪಂಚಾಯಿತಿ ಹಾಗೂ ಪುರಸಭೆಗಳನ್ನು ಮೇಲ್ದರ್ಜೆಗೇರಿಸುವ ಬಗ್ಗೆ

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೮ (೨೪೦) ಮಾನ್ಯ ಪೌರಾಡಳಿತ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ನಗರಸಭೆ, ಪುರಸಭೆ ಹಾಗೂ ಪಟ್ಟಣ ಪಂಚಾಯಿತಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು/ತಾಲ್ಲೂಕುವಾರು ವಿವರ ನೀಡುವುದು)

(ಆ) ಸರ್ಕಾರವು ಜನಸಂಖ್ಯೆವಾರು ಪಟ್ಟಣ ಪಂಚಾಯಿತಿಗಳನ್ನು ಪುರಸಭೆಗಳಾಗಿ ಹಾಗೂ ಪುರಸಭೆಗಳನ್ನು ನಗರಸಭೆಗಳನ್ನಾಗಿ ಮೇಲ್ದರ್ಜೆಗೇರಿಸಲು ಕ್ರಮ ಕೈಗೊಳ್ಳಲಾಗುತ್ತಿದೆಯೆ; (ವಿವರ ನೀಡುವುದು)

(ಇ) ಹೌದಾದಲ್ಲಿ, ಕಳೆದ ಎರಡು ವರ್ಷಗಳಲ್ಲಿ ಶಿವಮೊಗ್ಗ ಜಿಲ್ಲೆಯ ಎಷ್ಟು ಪಟ್ಟಣ ಪಂಚಾಯಿತಿಗಳನ್ನು ಪುರಸಭೆಗಳಾಗಿ ಹಾಗೂ ಪುರಸಭೆಗಳನ್ನು ನಗರಸಭೆಗಳನ್ನಾಗಿ ಮೇಲ್ದರ್ಜೆಗೇರಿಸಲಾಗಿದೆಯೇ ? (ವಿವರ ನೀಡುವುದು)

## ಭದ್ರಾವತಿಯ ಎಂಪಿಎಂ ಕಾರ್ಖಾನೆಯನ್ನು ಪುನಃ ಪ್ರಾರಂಭಿಸುವ ಕುರಿತು

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :-**

೧೩೯ (೨೪೧) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಶಿವಮೊಗ್ಗ ಜಿಲ್ಲೆಯ ಭದ್ರಾವತಿಯಲ್ಲಿರುವ ಎಂ.ಪಿ.ಎಂ ಕಾರ್ಖಾನೆಯು ಸಂಪೂರ್ಣವಾಗಿ ಮುಚ್ಚಲ್ಪಟ್ಟಿರುವುದು ನಿಜವೇ;

(ಆ) ಹಾಗಿದ್ದಲ್ಲಿ, ಈ ಕಾರ್ಖಾನೆಯನ್ನು ಪುನರ್ ಪ್ರಾರಂಭಿಸುವ ಕುರಿತು ಉದ್ದೇಶಿಸಿದೆಯೇ; ಉದ್ದೇಶಿಸಿದ್ದಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳಾವುವು ? (ವಿವರ ನೀಡುವುದು)

## ನಗರಾಭಿವೃದ್ಧಿ ಪ್ರಾಧಿಕಾರಗಳ ಕುರಿತು

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :-**

೧೪೦ (೨೩೯) ಮಾನ್ಯ ನಗರಾಭಿವೃದ್ಧಿ ಹಾಗೂ ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಒಟ್ಟು ನಗರಾಭಿವೃದ್ಧಿ ಪ್ರಾಧಿಕಾರಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು/ತಾಲ್ಲೂಕುವಾರು ವಿವರ ನೀಡುವುದು)

(ಆ) ನಗರ ಪ್ರದೇಶಗಳ ಸಂಪೂರ್ಣ ಅಭಿವೃದ್ಧಿಗಾಗಿ ನಗರಾಭಿವೃದ್ಧಿ ಪ್ರಾಧಿಕಾರಗಳನ್ನು ಹೆಚ್ಚಿಸಲು ಸರ್ಕಾರ ಚಿಂತಿಸಿದೆಯೇ;

(ಇ) ಹೌದಾದಲ್ಲಿ ಈ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ಸಹಕಾರ ಇಲಾಖೆಯಲ್ಲಿ ಅಲ್ಪಸಂಖ್ಯಾತರಿಗೆ ಜಾಗೃತಿ ಮೂಡಿಸುವ ಯೋಜನೆಗಳ ಕುರಿತು

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :-**

೧೪೧ (೨೩೮) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಹಕಾರ ಇಲಾಖೆಯಲ್ಲಿ ಅಲ್ಪಸಂಖ್ಯಾತರ ಸಮುದಾಯದವರುಗಳಿಗೆ ಜಾಗೃತಿ ಮೂಡಿಸಲು ರೂಪಿಸಲಾದ ಯೋಜನೆಗಳಾವುವು; (ವಿವರ ನೀಡುವುದು)

(ಆ) ಸರ್ಕಾರ ಸಂಸ್ಥೆ/ಬ್ಯಾಂಕುಗಳಲ್ಲಿ ಅಲ್ಪಸಂಖ್ಯಾತರ ಸಮುದಾಯದವರಿಗೆ ಷೇರು ಸಹಾಯಧನ ಹಾಗೂ ಷೇರು ಧನ ಹೆಚ್ಚಿಸುವ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ಶಿವಮೊಗ್ಗ ವಿಮಾನ ನಿಲ್ದಾಣಕ್ಕೆ ಸ್ವಾಧೀನ ಪಡಿಸಿಕೊಂಡ ಭೂಮಿ ಕುರಿತು

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :-**

೧೪೨ (೨೩೭) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಶಿವಮೊಗ್ಗದಲ್ಲಿ ವಿಮಾನ ನಿಲ್ದಾಣ ನಿರ್ಮಿಸಲು ಸರ್ಕಾರ ನೀಡಿರುವ ಒಟ್ಟು ಜಾಗವೆಷ್ಟು;

(ಆ) ವಿಮಾನ ನಿಲ್ದಾಣ ನಿರ್ಮಿಸಲು ಜಾಗವನ್ನು ನೀಡಿದ ರೈತರಿಗೆ ಅಥವಾ ಅವರ ಅವಲಂಬಿತ ಕುಟುಂಬಗಳಿಗೆ ನೀಡಲಾದ ಪರಿಹಾರ ಮೊತ್ತವೆಷ್ಟು;

(ಇ) ಈ ಕುಟುಂಬದ ಎಷ್ಟು ಜನರಿಗೆ ಉದ್ಯೋಗ ನೀಡಲಾಗಿದೆ; ನೀಡದಿದ್ದಲ್ಲಿ, ಕಾರಣಗಳೇನು; ಈ ಬಗ್ಗೆ ಸರ್ಕಾರದ ನಿಲುವೇನು;

(ಈ) ಸರ್ಕಾರ ನೀಡಿರುವ ಜಾಗದಲ್ಲಿ ಸಂಪೂರ್ಣವಾಗಿ ಎಷ್ಟು ಬಳಕೆ ಮಾಡಲಾಗಿದೆ; ಬಳಕೆಯಾಗದೇ ಬಾಕಿ ಉಳಿದಿರುವ ಜಾಗವೆಷ್ಟು;

(ಉ) ಬಾಕಿ ಉಳಿದಿರುವ ಜಾಗವನ್ನು ಸ್ವಾಧೀನಪಡಿಸಿಕೊಂಡು ಅದನ್ನು ಯಾವುದಾದರೂ ಸಾರ್ವಜನಿಕ ಉದ್ದೇಶಗಳಿಗಾಗಿ ಬಳಸಲು ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ; ಇದ್ದರೆ, ಈ ಬಗ್ಗೆ ಯಾವ ಕಾಲಮಿತಿಯೊಳಗೆ ಸರ್ಕಾರ ಕ್ರಮ ಕೈಗೊಳ್ಳುವುದು? (ಸಂಪೂರ್ಣವಾದ ಮಾಹಿತಿ ನೀಡುವುದು)

## MSCL ಕೈಗೊಂಡ ಯೋಜನೆಯ ಬಗ್ಗೆ

**ಶ್ರೀ ಎಸ್.ಎಲ್.ಭೋಜೇಗೌಡ (ಶಿಕ್ಷಕರ ಕ್ಷೇತ್ರ) :-**

೧೪೩ (೧೮೪) ಮಾನ್ಯ ನಗರಾಭಿವೃದ್ಧಿ ಹಾಗೂ ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಗಳೂರು ಸ್ಮಾರ್ಟ ಸಿಟಿ ಲಿಮಿಟೆಡ್ ಕಂಪನಿ MSCL ಕೈಗೊಂಡ ನೇತ್ರಾವತಿ ವಾಟರ್‌ಫ್ರಂಟ್ (ಜಲಾಭಿಮುಖ) ಯೋಜನೆಯು ಪ್ರಾರಂಭವಾದ ವರ್ಷ ಯಾವುದು ಮತ್ತು ಯೋಜನೆ ಪೂರ್ಣಗೊಳಿಸಲು ತೆಗೆದುಕೊಂಡ ಕಾಲಮಿತಿ ಎಷ್ಟು;

(ಆ) ಈ ಯೋಜನೆಯಲ್ಲಿ ಹಲವಾರು ರಸ್ತೆಗಳು, ಫುಟ್‌ಪಾತ್‌ಗಳು, ಉದ್ಯಾನವನಗಳು, ಕೆರೆಗಳು, ಸ್ಮಾರ್ಟ್ ಬಸ್ ನಿಲ್ದಾಣಗಳು, ಇ-ಶೌಚಾಲಯಗಳು ಇತ್ಯಾದಿ ಅವೈಜ್ಞಾನಿಕ ಮತ್ತು ಕಳಪೆ ಕಾಮಗಾರಿಗಳಿಂದ ಕೂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು; ಸರ್ಕಾರದ ಗಮನಕ್ಕೆ ಬಾರದಿದ್ದಲ್ಲಿ ಮುಂದೆ ತೆಗೆದುಕೊಳ್ಳುವ ಕ್ರಮಗಳೇನು ;

(ಇ) ಈ ಸದರಿ ಯೋಜನೆಯಲ್ಲಿ ಖರ್ಚು ಮಾಡಿದ ಅನುದಾನವೆಷ್ಟು; ಹಾಗೂ ಸದರಿ ಅನುದಾನಕ್ಕೆ ಅನುಗುಣವಾಗಿ ಕಾಮಗಾರಿಯ ಗುಣಮಟ್ಟವನ್ನು ಸಮರ್ಪಕವಾಗಿ ಪರಿಶೀಲಿಸಲಾಗಿದೆಯೇ; (ಕಿ.ಮೀ.ವಾರು ಅನುದಾನದ ವಿವರ ನೀಡುವುದು ಮತ್ತು ಗುಣಮಟ್ಟ ಪರಿಶೀಲನೆಯ ಸಂಪೂರ್ಣ ಮಾಹಿತಿ ನೀಡುವುದು)

(ಈ) ಈ ಯೋಜನೆಯ ಜೊತೆಗೆ, ಸದರಿ ಕಂಪನಿಯು ಕೈಗೊಂಡ ಹಲವಾರು ಯೋಜನೆಗಳು ಇಲ್ಲಿಯವರಿಗೆ ಅಪೂರ್ಣವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಸದರಿ ಕಂಪನಿಗೆ ನೇತ್ರಾವತಿ ವಾಟರ್ ಫ್ರಂಟ್ (ಜಲಾಭಿಮುಖ) ಯೋಜನೆಯನ್ನು ಒದಗಿಸಿರುವುದು ಸರಿಯೇ ಇದಕ್ಕೆ ಹೊಣೆ ಯಾರು; (ಸಂಪೂರ್ಣ ಮಾಹಿತಿ ನೀಡುವುದು)

(ಉ) ಇದಕ್ಕೆ ಅನುಗುಣವಾಗಿ ಸಹಕರಿಸಿದ ಅಧಿಕಾರಿಗಳ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಂಡಿದೆ; ಇಲ್ಲದಿದ್ದಲ್ಲಿ, ಯಾವ ರೀತಿ ಕ್ರಮ ಕೈಗೊಳ್ಳಲಿದೆ; ಯೋಜನೆಯನ್ನು ಅಪೂರ್ಣಗೊಳಿಸಿದ MSCL ವಿರುದ್ಧ ಸರ್ಕಾರ ಕೈಗೊಳ್ಳಲಿರುವ ಕಠಿಣ ಕ್ರಮಗಳೇನು; (ವಿವರವಾರು ಮಾಹಿತಿ ನೀಡುವುದು)

(ಊ) ಈ ರೀತಿ ಅಕ್ರಮಗಳು ಕಾರ್ಯವಿಧಾನದ ಲೋಪಗಳಿಂದ ಸ್ಥಳೀಯರ ಜೀವನೋಪಾಯದ ಮೇಲೆ ಪರಿಣಾಮ ಬೀರುತ್ತದೆಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಸರ್ಕಾರದ ಗಮನಕ್ಕೆ ಬಾರದಿದ್ದಲ್ಲಿ ಈ ರೀತಿ ಕೆಲಸಗಳು ಜರುಗುವುದು ಸಮಂಜಸವೇ;

(ಋ) ಅವೈಜ್ಞಾನಿಕ ಕಾಮಗಾರಿಯಿಂದ ಸರ್ಕಾರದ ಬೊಕ್ಕಸಕ್ಕೆ ನಷ್ಟ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಎ) ಬಂದಿದ್ದಲ್ಲಿ, ಅಂತಹವರುಗಳ ವಿರುದ್ಧ ಸರ್ಕಾರ ಕೈಗೊಳ್ಳುವ ಕ್ರಮಗಳೇನು; ಇದಕ್ಕೆ ಯಾರನ್ನೊ ಹೊಣೆ ಮಾಡಿ, ನಿಜವಾದ ತಪ್ಪಿತಸ್ಥರನ್ನು ಕೈಬಿಡುವ ಸಂಬಂಧ ಸರ್ಕಾರ ಯಾವ ರೀತಿ ಕ್ರಮ ಕೈಗೊಳ್ಳಲಿದೆ ? (ಸಂಪೂರ್ಣ ವಿವರ ನೀಡುವುದು)

## ಹಾಲಿನ ಪ್ರೋತ್ಸಾಹಧನದ ಬಾಕಿ ಕುರಿತು

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೪೪ (೨೦೧) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಹಾಲು ಉತ್ಪಾದಕರ ಒಕ್ಕೂಟಗಳ ಒಟ್ಟು ಸಂಖ್ಯೆ ಎಷ್ಟು; ಹಾಲು ಉತ್ಪಾದಕರ ಸಹಕಾರ ಸಂಘಗಳ ಒಟ್ಟು ಸಂಖ್ಯೆ ಎಷ್ಟು; ಎಷ್ಟು ಜನ ನೊಂದಾಯಿತ ಹಾಲು ಉತ್ಪಾದಕರಿದ್ದಾರೆ; ದಿನಪ್ರತಿ ಎಷ್ಟು ಜನ ರೈತರು ಹಾಲು ಸರಬರಾಜು ಮಾಡುತ್ತಿದ್ದಾರೆ; ಹಾಲಿನ ಪ್ರೋತ್ಸಾಹಧನವನ್ನು ಪಡೆಯುತ್ತಿರುವ ರೈತರ ಸಂಖ್ಯೆ ಎಷ್ಟು; ಸಾಮಾನ್ಯ ಪರಿಶಿಷ್ಟ ಜಾತಿ/ಪಂಗಡಗಳ ರೈತರ ಸಂಖ್ಯೆ ಎಷ್ಟು;

(ಆ) ಹೈನುಗಾರಿಕೆ ನಡೆಸುವ ರೈತರಿಗೆ ಅನೂಕೂಲವಾಗುವ ಉದ್ದೇಶದಿಂದ ಕ್ಷೀರಧಾರೆ ಯೋಜನೆಯಡಿ ಪ್ರತಿ ಲೀಟರ್ ಹಾಲಿಗೆ ಎಷ್ಟು ಪ್ರೋತ್ಸಾಹಧನವನ್ನು ನೀಡಲಾಗುತ್ತಿದೆ; ೨೦೨೩–ಏಪ್ರಿಲ್ ತಿಂಗಳಿನಿಂದ ೨೦೨೪–ಜೂನ್ ತಿಂಗಳ ಅಂತ್ಯದವರೆಗೆ ಎಷ್ಟು ಮೊತ್ತವನ್ನು ರೈತರಿಗೆ ಪ್ರೋತ್ಸಾಹಧನದ ಯೋಜನೆಯಡಿ ಪಾವತಿ ಮಾಡಲಾಗಿದೆ; ಪ್ರೋತ್ಸಾಹಧನವನ್ನು ಪಾವತಿ ಮಾಡದೇ ಬಾಕಿ ಉಳಿಸಿಕೊಂಡಿರುವ ಮೊತ್ತವೆಷ್ಟು; ಯಾವ ಕಾರಣಕ್ಕಾಗಿ ಬಾಕಿ ಉಳಿಸಿಕೊಳ್ಳಲಾಗಿದೆ; ಪ್ರೋತ್ಸಾಹಧನ ಬಾಕಿ ಉಳಿಸಿಕೊಂಡಿರುವುದು ರೈತರಿಗೆ ಮಾಡಿರುವ ಅನ್ಯಾಯವಾಗುವುದಿಲ್ಲವೇ;

(ಇ) ರೈತರಿಂದ ಸಂಗ್ರಹಿಸಿದ ಹಾಲು ನಂದಿನಿ ಹಾಗೂ ಇತರೆ ಜಿಲ್ಲಾ ಮಟ್ಟದ ಸಹಕಾರಿ ಹಾಲು ಮಾರಾಟ ಮಂಡಳಿ ಮೂಲಕ ಹಾಲು ವಿತರಣೆ ಹಾಗೂ ಮಾರಾಟವಾಗುತ್ತಿದ್ದು, ಹಾಲು ಮತ್ತು ಹಾಲಿನ ಇತರೆ ಉತ್ಪನ್ನಗಳ ಮಾರಾಟದಿಂದ ಅಪಾರವಾಗಿ ಹಣ ಸಂಗ್ರಹವಾಗುತ್ತಿದ್ದು ಹಾಲಿನ ಖರೀದಿ ದರ ಹಾಗೂ ಮಾರಾಟದ ದರವೂ ಒಂದೇ ಆಗಿರದೇ ಮಾರಾಟ ಮಾಡುವಾಗ ಹೆಚ್ಚಿನ ದರದಲ್ಲಿ ಮಾರಾಟವಾಗುತ್ತಿರುವುದರಿಂದ ಹಾಲಿನ ಪ್ರೋತ್ಸಾಹಧನವನ್ನು ರೈತರಿಗೆ ನಿಗದಿತ ಸಮಯದಲ್ಲಿ ನೀಡಲು ಸರ್ಕಾರಕ್ಕೆ ಇರುವ ತೊಂದರೆಯೇನು ?

## ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ನಡೆಸುತ್ತಿರುವ ಅಕ್ರಮ ಗಣಿಗಾರಿಕೆಗಳ ಕುರಿತು.

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೪೫ (೨೦೦) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ಕಲ್ಲು ಗಣಿಗಾರಿಕೆ ಮತ್ತು ಕ್ರಷರ್ ಮಷಿನ್‌ಗಳನ್ನು ನಡೆಸುವ ಸಲುವಾಗಿ ಸರ್ಕಾರದಿಂದ ಅನುಮತಿ ಪಡೆದು ಕಾರ್ಯನಿರ್ವಹಿಸುತ್ತಿರುವ ಘಟಕಗಳೆಷ್ಟು; ಸದರಿ ಘಟಕಗಳಲ್ಲಿ ಸರ್ಕಾರದ ನಿಯಮಾವಳಿಗಳನ್ನು ಪಾಲಿಸಲಾಗುತ್ತಿದೆಯೇ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಸರ್ಕಾರದ ಅನುಮತಿ ಪಡೆಯದೆ ಅನಧೀಕೃತವಾಗಿ ಕೆಲವೊಂದು ಘಟಕಗಳು ಕಲ್ಲು ಗಣಿಗಾರಿಕೆ ನಡೆಸುತ್ತಿರುವುದು ಸರ್ಕಾರ ಗಮನಕ್ಕೆ

ಬಂದಿದೆಯೇ; ಎಷ್ಟು ಘಟಕಗಳು ಅನಧಿಕೃತವಾಗಿ ಕಾರ್ಯನಿರ್ವಹಿಸುತ್ತಿವೆ; ಸದರಿ ಘಟಕಗಳಲ್ಲಿ ಸಾವು-ನೋವಿನ ಅವಗಡಗಳು ಸಂಭವಿಸಿವೆಯೇ; ಹಾಗಿದ್ದಲ್ಲಿ ಅಂತಹವರುಗಳ ವಿರುದ್ಧ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು;

(ಇ) ಸದರಿ ಕಲ್ಲು ಗಣಿಗಾರಿಕೆಯಿಂದ ಮತ್ತು ಕ್ರಷರ್ ಮಷಿನ್ ನಿಂದ ಸರ್ಕಾರದ ಬೊಕ್ಕಸಕ್ಕೆ ಬರುವ ವಾರ್ಷಿಕ ಆದಾಯವೆಷ್ಟು; ಅನಧಿಕೃತ ಗಣಿಗಾರಿಕೆಯಿಂದ ಸರ್ಕಾರದ ಬೊಕ್ಕಸಕ್ಕೆ ಆಗುವ ವಾರ್ಷಿಕ ನಷ್ಟದ ಪ್ರಮಾಣವೆಷ್ಟು; ಅಕ್ರಮ ಗಣಿಗಾರಿಕೆಯಲ್ಲಿ ತೊಡಗಿರುವ ವ್ಯಕ್ತಿಗಳನ್ನು ಪತ್ತೆಹಚ್ಚಲು ಹಾಗೂ ಶಿಸ್ತು ಪಾಲಿಸಲು ಸರ್ಕಾರದ ನಿಯಮಾವಳಿಗಳು ಮತ್ತು ಶಿಕ್ಷೆಗಳು ಏನು;

(ಈ) ಅಕ್ರಮ ಗಣಿಗಾರಿಕೆಯಿಂದಾದ ಆರ್ಥಿಕ ನಷ್ಟವನ್ನು ತಡೆಯಲು ಸರ್ಕಾರವು ಏನಾದರೂ ಪರಿಹಾರಗಳನ್ನು ಹೊಂದಿದೆಯೇ; ಸದರಿ ಆರ್ಥಿಕ ನಷ್ಟಕ್ಕೆ ಯಾರು ಹೊಣೆಗಾರರು ಅಕ್ರಮ ಗಣಿಗಾರಿಕೆಯನ್ನು ತಡೆಗಟ್ಟಲು ಕಾನೂನುಗಳನ್ನು ಎಷ್ಟು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲಾಗಿದೆ; ಈ ಕಾನೂನುಗಳ ಪರಿಣಾಮಕಾರಿತ್ವವನ್ನು ಸರಿಯಾಗಿ ಮೌಲ್ಯಮಾಪನ ಮಾಡಲಾಗುತ್ತಿದೆಯೇ ? (ಸಂಪೂರ್ಣ ಮಾಹಿತಿ ನೀಡುವುದು)

## ಯಶಸ್ವಿನಿ ಯೋಜನೆಯ ಕುರಿತು

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೧೪೬ (೧೬೧)) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಪ್ರಸ್ತುತ ಯಶಸ್ವಿ ಯೋಜನೆ ಜಾರಿಯಲ್ಲಿದೆಯೇ ; ಹಾಗಿದ್ದಲ್ಲಿ, ಪ್ರಸ್ತುತ ಎಷ್ಟು ಜನರು ತಮ್ಮ ಹೆಸರನ್ನು ನೋಂದಾಯಿಸಿ ಕೊಂಡಿದ್ದಾರೆ ; (ಜಿಲ್ಲಾವಾರು ವಿವರಗಳನ್ನು ಒದಗಿಸುವುದು)

(ಆ) ಯೋಜನೆಯಡಿಯಲ್ಲಿ ಎಷ್ಟು ರೂಪಾಯಿಯವರೆಗೂ ಚಿಕಿತ್ಸೆಯನ್ನು ಪಡೆಯಬಹುದು ;

(ಇ) ವಿಮೆ ಹಣ ತುಂಬಿದರೂ ಆರೋಗ್ಯ ಚೀಟಿ ಸಿಗದ ಕಾರಣ ಪರದಾಡುವಂತ ಸ್ಥಿತಿ ಎದುರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹೆಸರು ನೋಂದಾಯಿಸಿದವರ ಪೈಕಿ ಶೇಕಡಾ ೪೫ ಜನರಿಗೆ ಯುನಿಕ್ ಐಡಿ ಸಂಖ್ಯೆಯುಳ್ಳ ಪ್ಲಾಸ್ಟಿಕ್ ಕಾರ್ಡ್‌ಗಳನ್ನು ಈವರೆಗೂ ನೀಡಿಲ್ಲದಿರುವುದು ಅಧಿಕಾರಿಗಳ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಇದರ ಬಗ್ಗೆ ತೆಗೆದುಕೊಂಡ ಕ್ರಮಗಳಾವುವು ;

(ಉ) ಆರೋಗ್ಯ ಕಾರ್ಡ್ ಇಲ್ಲದಿರುವುದರಿಂದ ರೋಗಿಗಳು ಚಿಕಿತ್ಸೆ ಪಡೆದುಕೊಳ್ಳಲು ಪರದಾಡುವಂತ ಪರಿಸ್ಥಿತಿ ಎದುರಾಗಿರುವುದು ನಿಜವೇ ;

(ಊ) ಯಶಸ್ವಿನಿ ಯೋಜನೆಯಡಿಯಲ್ಲಿ ರೈತರಲ್ಲದೆ, ನಗರ ಭಾಗದಲ್ಲಿ ಸಹಕಾರ ಸಂಘಗಳಲ್ಲಿ ಷೇರ್‌ನ್ನು ಹೊಂದಿರುವವರಿಗೂ ಸಹ ಈ ಯೋಜನೆಯ ಫಲಾನುಭವಿಗಳಾಗಲು ಅವಕಾಶವಿದೆಯೇ ?

## ಕೋಲಾರ ನಗರ ಸಭೆಯಲ್ಲಿ ನಡೆದಿರುವ ಅವ್ಯವಹಾರದ ಕುರಿತು

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೪೭ (೧೬೨) ಮಾನ್ಯ ಪೌರಾಡಳಿತ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋಲಾರ ನಗರಸಭೆಯಲ್ಲಿ ಕಳೆದ ಮೂರು ವರ್ಷಗಳ ಅವಧಿಯಿಂದ ಇಲ್ಲಿಯವರೆಗೂ ಎಷ್ಟು ಕಾಮಗಾರಿಗಳಿಗೆ ಅನುಮೋದನೆ ದೊರಕಿದೆ ; ಅದರಲ್ಲಿ ಎಷ್ಟು ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ ; ಹಾಗೂ ಬಾಕಿ ಇರುವ ಕಾಮಗಾರಿಗಳ ಸಂಖ್ಯೆಯೆಷ್ಟು ; (ಪೂರ್ಣ ವಿವರ ಒದಗಿಸುವುದು)

(ಆ) ಕಾಮಗಾರಿಗಳು ಯಾವ ಯಾವ ಯೋಜನೆಯಡಿಯಲ್ಲಿ ಮಂಜೂರಾಗಿದೆ ; ಮಂಜೂರಾಗಿರುವ ಅನುದಾನವನ್ನು ಪ್ರತ್ಯೇಕವಾಗಿ ತಿಳಿಸುವುದು ;

(ಇ) ಗುತ್ತಿಗೆದಾರರಿಗೆ ಹಣವನ್ನು ಬಿಡುಗಡೆ ಮಾಡುವ ಸಂದರ್ಭದಲ್ಲಿ ಸರ್ಕಾರ ಅನುಸರಿಸುತ್ತಿರುವ ಮಾನದಂಡಗಳು ಯಾವುವು ;

(ಈ) ಗುತ್ತಿಗೆದಾರರಿಗೆ ಹಣ ಬಿಡುಗಡೆ ಮಾಡುವ ಸಂದರ್ಭದಲ್ಲಿ ಅವ್ಯವಹಾರ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ಬೆಂಗಳೂರು ನಗರ ಜಿಲ್ಲೆಗಳಲ್ಲಿ ಭೂ ಸ್ವಾಧೀನಗೊಂಡ ಭೂಮಿಗೆ ಪರಿಹಾರದ ಬಗ್ಗೆ

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೪೮ (೨೬೦) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೩-೨೪ ರಲ್ಲಿ KIADB ವತಿಯಿಂದ ಬೆಂಗಳೂರು ನಗರ ಜಿಲ್ಲೆಯಲ್ಲಿ ಕೈಗಾರಿಕೆ ಇತರ ಅಭಿವೃದ್ಧಿ ಕಾಮಗಾರಿಗಳ ಸಲುವಾಗಿ ಎಷ್ಟು ಎಕರೆ ಭೂಮಿಯನ್ನು ಸ್ವಾಧೀನ ಪಡಿಸಿಕೊಳ್ಳಲು ಉದ್ದೇಶಿಸಿದೆ ; (ಗ್ರಾಮವಾರು ವಿವರ ನೀಡುವುದು)

(ಆ) ಸದರಿ ಭೂಮಿಯ ಪ್ರಸ್ತುತ ಮಾರುಕಟ್ಟೆ ಬೆಲೆಯ ಎಷ್ಟು ಪಟ್ಟು ಹಣವನ್ನು ರೈತರಿಗೆ/ಭೂ ಮಾಲೀಕರಿಗೆ ನೀಡಲಾಗಿದೆ ;

(ಇ) ಕೃಷಿ ಭೂಮಿಯಲ್ಲಿ ಈಗಾಗಲೇ ಬೆಳೆದಿರುವ ಮರಗಳಿಗೆ ನೀಡುವ ಪರಿಹಾರದ ಮೊತ್ತ ಎಷ್ಟು ?

## ಅಕ್ರಮ ಮರಳು ದಂಧೆಯ ಕುರಿತು

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೪೯ (೨೫೮) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಅಕ್ರಮ ಮರಳು ದಂಧೆಗೆ ಕಡಿವಾಣ ಹಾಕಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಅಕ್ರಮ ಮರಳು ದಂಧೆಯಿಂದ ರಾಜ್ಯದ ನದಿ ತೀರಗಳು ಹಾಗೂ ಅರಣ್ಯ ಪ್ರದೇಶ ಬರಡು ಭೂಮಿಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ನದಿ ಹಾಗೂ ಅರಣ್ಯ ರಕ್ಷಣೆಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಅಕ್ರಮ ಮರಳು ದಂಧೆಯಿಂದ ರಾಜ್ಯ ಸರ್ಕಾರಕ್ಕೆ ದೊಡ್ಡ ಮೊತ್ತದ ಆದಾಯ ನಷ್ಟವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಕುರಿತು ಸರ್ಕಾರದ ನಿಲುವೇನು ?

## ಹಾಲು ಉತ್ಪಾದಕರಿಗೆ ಪ್ರೋತ್ಸಾಹಧನ ಪಾವತಿ ಆಗದಿರುವ ಬಗ್ಗೆ

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೫೦ (೨೬೨) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ಜಿಲ್ಲೆಯಲ್ಲಿರುವ ಹಾಲು ಉತ್ಪಾದಕರ ಸಹಕಾರ ಸಂಘಗಳ ಸಂಖ್ಯೆ ಹಾಗೂ ಹಾಲು ಉತ್ಪಾದಕರ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಬೆಂಗಳೂರು ಜಿಲ್ಲೆಯಲ್ಲಿ ಹಾಲು ಉತ್ಪಾದಕರಿಗೆ ಪ್ರತಿ ಲೀಟರ್ ಹಾಲಿಗೆ ನೀಡುತ್ತಿರುವ ದರ ಹಾಗೂ ಪ್ರೋತ್ಸಾಹಧನದ ಮೊತ್ತವೆಷ್ಟು ;

(ಇ) ಎಷ್ಟು ತಿಂಗಳಿಂದ ಪ್ರೋತ್ಸಾಹಧನ ಬಾಕಿ ಇದೆ ; ಬಾಕಿ ಇರುವುದಕ್ಕೆ ಕಾರಣಗಳೇನು ; ಪಾವತಿಸಬೇಕಿರುವ ಬಾಕಿ ಮೊತ್ತವೆಷ್ಟು ; (ವಿವರ ನೀಡುವುದು)

(ಈ) ರಾಜ್ಯದ ವಿವಿಧ ಒಕ್ಕೂಟಗಳು ಹಾಲು ಉತ್ಪಾದಕರಿಗೆ ಪ್ರತಿ ಲೀಟರ್ ಹಾಲಿಗೆ ನೀಡುತ್ತಿರುವ ದರ ಎಷ್ಟು ? (ಒಕ್ಕೂಟವಾರು ಮಾಹಿತಿ ನೀಡುವುದು)

## ರಾಜ್ಯದಲ್ಲಿ ಸಣ್ಣ ಕೈಗಾರಿಕೆ ವ್ಯಾಪ್ತಿಗೆ ಬರುವ ಉದ್ದಿಮೆಗಳ ಬಗ್ಗೆ

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೫೧ (೨೫೯) ಮಾನ್ಯ ಸಣ್ಣ ಕೈಗಾರಿಕೆ ಹಾಗೂ ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಸಣ್ಣ ಕೈಗಾರಿಕೆ ವ್ಯಾಪ್ತಿಗೆ ಬರುವ ಉದ್ದಿಮೆಗಳಾವುವು ;

(ಆ) ಸಣ್ಣ ಕೈಗಾರಿಕೆ ಇಲಾಖೆ ಅಧೀನಕ್ಕೆ ಬರುವ ಸಾರ್ವಜನಿಕ ನಿಗಮಗಳು/ಕಂಪನಿಗಳು, ಶಾಸನಬದ್ಧ ಮಂಡಳಿಗಳು, ಉದ್ದಿಮೆಗಳು, ಸೊಸೈಟಿಗಳು ಹಾಗೂ ಇತರೆ ಅಂಗ ಸಂಸ್ಥೆಗಳು ಯಾವುವು ;

(ಇ) ಇವುಗಳಿಗೆ ಸರ್ಕಾರ ವಿಧಿಸಿರುವ ಮಾನದಂಡಗಳೇನು ;

(ಈ) ಸಣ್ಣ ಕೈಗಾರಿಕೆಗಳಿಗೆ ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ಸಿಗುತ್ತಿರುವ ಸಾಲ ಸೌಲಭ್ಯಗಳಾವುವು ;

(ಉ) ಕಳೆದ ಎರಡು ವರ್ಷಗಳಿಂದ ಯಾವ ಯಾವ ಸೌಲಭ್ಯಗಳು ಎಷ್ಟೆಷ್ಟು ಕೈಗಾರಿಕೆ ಉದ್ಯಮಗಳಿಗೆ ತಲುಪಿವೆ ?

## ಕೊಪ್ಪಳ ನಗರಸಭೆಯ ವ್ಯಾಪ್ತಿಯಲ್ಲಿ ಬರುವ ಕೊಳವೆ ಬಾವಿಗಳ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೫೨ (೨೪೨) ಮಾನ್ಯ ಪೌರಾಡಳಿತ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೊಪ್ಪಳ ನಗರಸಭೆಯ ವ್ಯಾಪ್ತಿಯಲ್ಲಿ ಸರ್ಕಾರದ ಒಡೆತನದಲ್ಲಿರುವ ಕೊಳವೆ ಬಾವಿಗಳ ಸಂಖ್ಯೆ ಎಷ್ಟು ಹಾಗೂ ಇವುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಮತ್ತು ಕಾರ್ಯನಿರ್ವಹಿಸದಿರುವ ಕೊಳವೆ ಬಾವಿಗಳ ಸಂಖ್ಯೆ ಎಷ್ಟು ; (ವಾರ್ಡ್‌ಗಳವಾರು ವಿವರ ನೀಡುವುದು)

(ಆ) ಕಳೆದ ೨ ವರ್ಷಗಳಲ್ಲಿ ಕೊಳವೆ ಬಾವಿಗಳಿಗೋಸ್ಕರ ಖರ್ಚು ಮಾಡಲಾದ ಅನುದಾನ ಎಷ್ಟು ; (ಸಂಪೂರ್ಣ ವಿವರ ನೀಡುವುದು)

(ಇ) ಕೊಪ್ಪಳ ನಗರಸಭೆಯ ವ್ಯಾಪ್ತಿಯಲ್ಲಿ ಸುಮಾರು ಕಡೆಗಳಲ್ಲಿ ಕೊಳಚೆ ಚರಂಡಿ ನೀರು ಹೊರ ಹಾದು ಹೋಗದೇ ಬಾವಿಗಳಲ್ಲಿ ಸೇರುತ್ತಿದ್ದು, ಈ ಬಗ್ಗೆ ಯಾವುದೇ ಕ್ರಮ ಕೈಗೊಳ್ಳದ ಅಧಿಕಾರಿಗಳ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

# ತೋಟಗಾರಿಕಾ ಇಲಾಖೆಯಿಂದ ರೈತರ ಅನುಕೂಲಕ್ಕಾಗಿ ರೂಪಿಸಿರುವ ಯೋಜನೆ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೩ (೨೪೩) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರವು ಯಾವ ಯಾವ ಬೆಳೆಗಳನ್ನು ತೋಟಗಾರಿಕಾ ಬೆಳೆಗಳೆಂದು ಪರಿಗಣಿಸಿದೆ ಕೊಪ್ಪಳ ಜಿಲ್ಲೆಯಲ್ಲಿ ತೋಟಗಾರಿಕೆ ಬೆಳೆ ಉತ್ಪಾದಿಸುವ ಪ್ರದೇಶದ ವಿಸ್ತೀರ್ಣವೆಷ್ಟು ; (ಪ್ರದೇಶಗಳಲ್ಲಿ ಯಾವ ಯಾವ ಬೆಳೆಗಳನ್ನು ಎಷ್ಟು ಪ್ರಮಾಣದಲ್ಲಿ ಉತ್ಪಾದಿಸಲಾಗುತ್ತಿದೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಕಳೆದ ೨ ವರ್ಷಗಳಲ್ಲಿ ತೋಟಗಾರಿಕಾ ಇಲಾಖೆಯಿಂದ ರೈತರ ಅನುಕೂಲಕ್ಕಾಗಿ ರೂಪಿಸಿರುವ ಯೋಜನೆಗಳು ಯಾವುವು ; ಈ ಯೋಜನೆಗಳಿಗಾಗಿ ಕೊಪ್ಪಳ ಜಿಲ್ಲೆಗೆ ಬಿಡುಗಡೆಯಾಗಿರುವ ಅನುದಾನವೆಷ್ಟು ಮತ್ತು ಖರ್ಚಾದ ಅನುದಾನವೆಷ್ಟು ; (ಈ ಯೋಜನೆಗಳ ಫಲಾನುಭವಿಗಳ ವಿವರಗಳೊಂದಿಗೆ ಯೋಜನೆವಾರು ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ರೈತರು ಬೆಳೆಯುತ್ತಿರುವ ತೋಟಗಾರಿಕಾ ಬೆಳೆಗಳ ಸಂರಕ್ಷಣೆಗಾಗಿ ಕೊಪ್ಪಳ ಜಿಲ್ಲೆಯಲ್ಲಿ ಶೀತಲೀಕರಣ ಸಂಗ್ರಹಗಾರಗಳ ನಿರ್ಮಾಣ ಮಾಡಲಾಗಿದೆಯೇ ; (ವಿವರ ನೀಡುವುದು)

(ಈ) ಕೊಪ್ಪಳ ಜಿಲ್ಲೆಯಲ್ಲಿ ಕಳೆದ ೨ ವರ್ಷಗಳಲ್ಲಿ ತೋಟಗಾರಿಕೆ ಇಲಾಖೆಯಿಂದ ಎಷ್ಟು ಕೃಷಿ ಹೊಂಡಗಳನ್ನು ನಿರ್ಮಾಣ ಮಾಡಲಾಗಿದೆ ; ಇದಕ್ಕಾಗಿ ಫಲಾನುಭವಿಗಳಿಗೆ ವಿತರಿಸಿರುವ ಅನುದಾನವೆಷ್ಟು ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ರಾಜ್ಯದಲ್ಲಿ ಸಹಕಾರ ಇಲಾಖೆಯಿಂದ ರೈತರಿಗಿರುವ ಯೋಜನೆಗಳ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೫೪ (೨೪೪) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಸಹಕಾರ ಇಲಾಖೆಯಿಂದ ರೈತರಿಗಾಗಿ ಇರುವ ವಿವಿಧ ಸಾಲದ ಯೋಜನೆಗಳು ಯಾವುವು ; (ಈ ಸಾಲ ಯೋಜನೆಗಳ ನಿಯಮಗಳ ಸಂಪೂರ್ಣ ಮಾಹಿತಿ ನೀಡುವುದು)

(ಆ) ಈ ಯೋಜನೆಗಳಲ್ಲಿ ಸಹಾಯಧನ ಹೊಂದಿರುವ ಯೋಜನೆಗಳು ಯಾವುವು ;

(ಇ) ಈ ಸಾಲ ಯೋಜನೆಗಳ ಲಾಭ ಪಡೆಯಲು ರೈತರು ಅನುಸರಿಸಬೇಕಾಗಿರುವ ನಿಯಮಗಳೇನು ; (ಸಂಪೂರ್ಣ ವಿವರ ನೀಡುವುದು)

(ಈ) ರೈತರಿಗಾಗಿ ಸಹಕಾರ ಇಲಾಖೆಯಿಂದ ವಾಹನ ಸಾಲ ಯೋಜನೆ ಜಾರಿಯಲ್ಲಿದೆಯೇ ; ಹಾಗಿದ್ದಲ್ಲಿ, ಯಾವ ಯಾವ ವಾಹನಗಳಿಗೆ ಸಾಲ ನೀಡಲಾಗುತ್ತದೆ ; ಸಬ್ಸಿಡಿಯನ್ನು ಎಷ್ಟು ನೀಡಲಾಗುತ್ತಿದೆ ? (ವಿವರ ನೀಡುವುದು)

## ರಾಯಚೂರು ಮತ್ತು ಕೊಪ್ಪಳ ಜಿಲ್ಲೆಗಳಲ್ಲಿ ಕೆ.ಐ.ಎ.ಡಿ.ಬಿ ವತಿಯಿಂದ ನಿರ್ಮಾಣ ಮಾಡಲಾದ ಕೈಗಾರಿಕೆಗಳ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೫೫ (೨೪೫) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಯಚೂರು ಮತ್ತು ಕೊಪ್ಪಳ ಜಿಲ್ಲೆಗಳಲ್ಲಿ ಕೆ.ಐ.ಎ.ಡಿ.ಬಿ ವತಿಯಿಂದ ನಿರ್ಮಾಣ ಮಾಡಲಾದ ಕೈಗಾರಿಕಾ ಪ್ರದೇಶಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಆ) ಸದರಿ ಕೈಗಾರಿಕಾ ಪ್ರದೇಶಗಳಲ್ಲಿ ಎಷ್ಟು ಎಕರೆ ಜಮೀನು ಭೂಸ್ವಾಧೀನ ಮಾಡಿಕೊಳ್ಳಲಾಗಿದೆ ; ಭೂ ಸ್ವಾಧೀನ ಮಾಡಿಕೊಂಡ ನಂತರ ಅದನ್ನು ಮಂಡಳಿ ವಶಕ್ಕೆ ಪಡೆಯಲಾಗಿದೆಯೇ ; (ಹಾಗಿದ್ದಲ್ಲಿ ವಿವರ ನೀಡುವುದು)

(ಇ) ಸದರಿ ಕೈಗಾರಿಕಾ ಪ್ರದೇಶಗಳಲ್ಲಿ ಮೂಲಭೂತ ಸೌಕರ್ಯ ಒದಗಿಸಲಾಗಿದೆಯೇ ; ಹಾಗಿದ್ದಲ್ಲಿ, ಕಳೆದ ಐದು ವರ್ಷಗಳಲ್ಲಿ ಸದರಿ ಕೈಗಾರಿಕಾ ಪ್ರದೇಶಗಳಲ್ಲಿ ಕೈಗೊಂಡ ಕಾಮಗಾರಿಗಳು ಎಷ್ಟು; ಸದರಿ ಕಾಮಗಾರಿಗಳು ಯಾವ ಹಂತದಲ್ಲಿವೆ ; (ವಿವರ ನೀಡುವುದು)

(ಈ) ಸದರಿ ಕೈಗಾರಿಕಾ ಪ್ರದೇಶಗಳಲ್ಲಿ ರಚಿಸಲಾಗಿರುವ ಕೈಗಾರಿಕಾ ನಿವೇಶನಗಳೆಷ್ಟು ; ಅವುಗಳನ್ನು ಹಂಚಿಕೆ ಮಾಡಲಾಗಿದೆಯೇ; ಹಾಗಿದ್ದಲ್ಲಿ, ನಿವೇಶನಗಳನ್ನು ಪಡೆದ ಮಾಲೀಕರ ವಿವರ, ಉದ್ದೇಶ, ವಿಸ್ತೀರ್ಣ, ನಿವೇಶನದ ಬೆಲೆ, ವರ್ಷ, ಕರಾರು ಸೇರಿದಂತೆ ಇನ್ನಿತರ ವಿವರ ನೀಡುವುದು ;

(ಉ) ಸದರಿ ಕೈಗಾರಿಕಾ ಪ್ರದೇಶಗಳಲ್ಲಿ ನಿವೇಶನ ಪಡೆದಿರುವ ಮಾಲೀಕರು ಮೂಲ ಉದ್ದೇಶಕ್ಕೆ ಬಳಸದೇ ಇದ್ದಲ್ಲಿ, ಸರ್ಕಾರ ಕೈಗೊಳ್ಳುವ ಕ್ರಮವೇನು ; ನಿವೇಶನಗಳನ್ನು ಹಂಚಿಕೆ ಮಾಡಿದ ನಂತರ ಅವುಗಳನ್ನು ಮೂಲ ಉದ್ದೇಶಕ್ಕೆ ಬಳಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಮೂಲ ಉದ್ದೇಶಕ್ಕೆ ಬಳಸದಿರುವವರ ನಿವೇಶನದ ವಿವರ ನೀಡುವುದು ;

(ಊ) ಸದರಿ ಕೈಗಾರಿಕಾ ಪ್ರದೇಶಗಳಲ್ಲಿ ನಿವೇಶನ ಪಡೆದಿರುವ ಮಾಲೀಕರು ಇತರರಿಗೆ ಬಾಡಿಗೆಗೆ ನೀಡಲು ಅವಕಾಶವಿದೆಯೇ ; ಯಾವ ಯಾವ ಪ್ರದೇಶಗಳಲ್ಲಿ ಮೂಲ ಮಾಲೀಕರು ನಿವೇಶನವನ್ನು ಬಾಡಿಗೆಗೆ ನೀಡಿದ್ದಾರೆ ಎನ್ನುವ ಮಾಹಿತಿ ಸರ್ಕಾರಕ್ಕೆ ಇದೆಯೇ ; ಹಾಗಿದ್ದಲ್ಲಿ, ರಿಯಾಯಿತಿ ದರದಲ್ಲಿ ನಿವೇಶನ ಪಡೆದು ಬಾಡಿಗೆಗೆ ನೀಡುವುದು ಸರಿಯೇ ; ಇಲ್ಲದಿದ್ದಲ್ಲಿ, ಅಂತಹ ಮಾಲೀಕರ ಮೇಲೆ ಯಾವ ಕ್ರಮ ಜರುಗಿಸಲಾಗುತ್ತದೆ ;

(ಋ) ಸದರಿ ಕೈಗಾರಿಕಾ ಪ್ರದೇಶಗಳಲ್ಲಿ ನಿವೇಶನ ಪಡೆದಿರುವ ಮಾಲೀಕರು ಮೂಲ ಉದ್ದೇಶಕ್ಕೆ ಬಳಸದೇ ಇದ್ದಲ್ಲಿ, ಸದರಿ ನಿವೇಶನಗಳನ್ನು ವಾಪಸ್ ಪಡೆಯಲು ನಿಯಮಗಳಲ್ಲಿ ಅವಕಾಶವಿದೆಯೇ ; ಇದ್ದಲ್ಲಿ, ಅವುಗಳನ್ನು ಯಾವಾಗ ವಾಪಸ್ ಪಡೆಯಲಾಗುವುದು ? (ವಿವರ ನೀಡುವುದು)

## MRPL & ONGC ೪ ನೇ ಹಂತದ ಬಗ್ಗೆ

**ಶ್ರೀ ಐವನ್ ಡಿ'ಸೋಜ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೫೬ (೨೧೭) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೬ರಲ್ಲಿ ಎಂಆರ್‌ಪಿಎಲ್ ಮತ್ತು ಓಎನ್‌ಜಿಸಿ ೪ನೇ ಹಂತದಲ್ಲಿ ಸುಮಾರು ೮೧೧ ಎಕರೆ ಭೂಮಿಯನ್ನು ಕುತ್ತೆತ್ತೂರು/ಪೆರ್ಮುದೆ, ತೆಂಕ ಎಕ್ಕಾರು ಗ್ರಾಮಗಳಲ್ಲಿ ಸ್ವಾಧೀನ ಪಡಿಸಿಕೊಂಡಿದ್ದು, ಈವರೆಗೂ ಪುನರ್ ವಸತಿ ಹಾಗೂ ಪುನರ್ ಸೌಲಭ್ಯವನ್ನು ಒದಗಿಸದಿರುವುದಕ್ಕೆ ಕಾರಣಗಳೇನು ; (ವಿವರ ನೀಡುವುದು)

(ಆ) ಭೂ ಸ್ವಾಧೀನ ನಿಯಮದಂತೆ ನಿವಾಸಿತರಿಗೆ ನೀಡುವ ಸೌಲಭ್ಯವನ್ನು ನೀಡದಿರುವುದರಿಂದ ನಿರ್ವಸಿತರು ಬೀದಿಪಾಲು ಆಗಿದ್ದು ಈ ಬಗ್ಗೆ ಸರ್ಕಾರದ ನಿಲುವೇನು ;

(ಇ) ನಿರ್ವಸಿತರ ಮಕ್ಕಳು ಉದ್ಯೋಗಕ್ಕಾಗಿ ಕಾಯುತ್ತಿದ್ದರೂ ಈ ಬಗ್ಗೆ ಯಾವುದೇ ಗಮನ ನೀಡದಿರುವುದರಿಂದ ಸರ್ಕಾರದ ಮೇಲೆ ಕೆಟ್ಟ ಅಭಿಪ್ರಾಯ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಈ ಬಗ್ಗೆ ಕೂಡಲೇ ಆರ್ & ಆರ್ ಸಮಿತಿಯ ಸಭೆ ಕರೆದು ಈ ಮೇಲಿನ ಸೌಲಭ್ಯಗಳನ್ನು ನಿಯಮದಂತೆ ಕಲ್ಪಿಸಲು ಎಂಆರ್‌ಪಿಎಲ್ ಮತ್ತು ಓಎನ್‌ಜಿಸಿ ಗೆ ಸರ್ಕಾರ ನಿರ್ದೇಶನ ನೀಡುವುದೇ ;

(ಉ) ನಿರ್ವಸಿತರಿಗೆ ಭೂಮಿಯನ್ನು ಯೋಗ್ಯವಲ್ಲದ ಸ್ಥಳದಲ್ಲಿ ನೀಡಲು ನಿರ್ಧರಿಸಿರುವುದು ಸರಿಯೇ ? (ವಿವರ ನೀಡುವುದು)

## ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಬೃಹತ್ ಕೈಗಾರಿಕೆ ಸ್ಥಾಪಿಸುವ ಬಗ್ಗೆ

**ಶ್ರೀ ಐವನ್ ಡಿ'ಸೋಜ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೫೭ (೨೨೦) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರು ತಾಲ್ಲೂಕಿನ ಎಂಆರ್‌ಪಿಎಲ್ ಮತ್ತು ಇತರ ಉದ್ದಿಮೆಗಳಲ್ಲಿ ಸ್ಥಳೀಯರಿಗೆ ಉದ್ಯೋಗ ನೀಡದೆ ರಾಷ್ಟ್ರ ಮಟ್ಟದಲ್ಲಿ ಉದ್ಯೋಗ ಅರ್ಜಿಗಳನ್ನು ಕರೆದು ಸ್ಥಳೀಯರಿಗೆ ಉದ್ಯೋಗ ನೀಡದಿರುವುದರ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಆ) ಬೃಹತ್ ಕೈಗಾರಿಕೆ ಸ್ಥಾಪಿಸಲು ಭೂಮಿಯನ್ನು ನೀಡಿರುವ ನಿರ್ವಸತಿಗರ ಕಾಲೋನಿಯಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸಲು ವಿಫಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಬೃಹತ್ ಕೈಗಾರಿಕೆ ಸ್ಥಾಪಿಸುವ ಸಂದರ್ಭದಲ್ಲಿ ವಶಪಡಿಸಿಕೊಂಡಿರುವ ಜಾಗದ ಬಗ್ಗೆ ಮತ್ತು ಸ್ಥಳ ನೀಡಿದವರಿಗೆ ನೀಡುವ ಸವಲತ್ತುಗಳನ್ನು ನೀಡದಿರುವುದರ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ಪುರಸಭೆ, ನಗರಸಭೆ ಮತ್ತು ಪಟ್ಟಣ ಪಂಚಾಯತ್‌ಗಳಿಗೆ ಅಧ್ಯಕ್ಷರು ಮತ್ತು ಉಪಾಧ್ಯಕ್ಷರನ್ನು ನೇಮಿಸುವ ಬಗ್ಗೆ

**ಶ್ರೀ ಐವನ್ ಡಿ'ಸೋಜ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೫೮ (೨೨೧) ಮಾನ್ಯ ಪೌರಾಡಳಿತ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪುರಸಭೆ ನಗರಸಭೆ ಮತ್ತು ಪಟ್ಟಣ ಪಂಚಾಯತ್‌ಗಳಿಗೆ ಚುನಾವಣೆಗಳು ನಡೆದರು ಅಧ್ಯಕ್ಷರು, ಉಪಾಧ್ಯಕ್ಷರುಗಳ ಚುನಾವಣೆ ನಡೆಯದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು)

(ಆ) ರಾಜ್ಯದಲ್ಲಿ ಎಷ್ಟು ಪುರಸಭೆ, ನಗರಸಭೆ ಮತ್ತು ಪಟ್ಟಣ ಪಂಚಾಯತ್‌ಗಳಿಗೆ ಅಧ್ಯಕ್ಷರು, ಉಪಾಧ್ಯಕ್ಷರನ್ನು ನೇಮಕ ಮಾಡದೇ ಇರುವುದರ ಬಗ್ಗೆ ಸರ್ಕಾರದ ನಿಲುವೇನು ;

(ಇ) ದಕ್ಷಿಣ ಕನ್ನಡ ಜಿಲ್ಲೆಯ ಬಜ್ಪೆ, ಕಿನ್ನಿಗೋಳಿ ನಗರ ಪಂಚಾಯತ್‌ಗಳನ್ನು ಮೇಲ್ದರ್ಜೆಗೇರಿಸಿದ್ದು, ಚುನಾವಣೆ ನಡೆಸದಿರಲು ಕಾರಣಗಳೇನು ; (ವಿವರ ನೀಡುವುದು)

(ಈ) ರಾಜ್ಯದಲ್ಲಿ ಎಷ್ಟು ಪುರಸಭೆ, ನಗರಸಭೆ ಮತ್ತು ಪಟ್ಟಣ ಪಂಚಾಯತ್‌ಗಳನ್ನು ಮಾರ್ಪಾಡು ಮಾಡಲು ಸರ್ಕಾರದ ಮುಂದಿರುವ ಪ್ರಸ್ತಾವನೆಗಳಾವುವು ; (ವಿವರ ನೀಡುವುದು)

(ಉ) ಉಡುಪಿ ಜಿಲ್ಲೆಯ ಕಾಪು ತಾಲ್ಲೂಕಿನ ಶಿರ್ವ ಗ್ರಾಮಪಂಚಾಯತ್/ ಪುರಸಭೆಯನ್ನು ಮೇಲ್ದರ್ಜೆಗೇರಿಸದಿರಲು ಕಾರಣಗಳೇನು ? (ವಿವರ ನೀಡುವುದು)

## ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ನಿರ್ಮಿಸಲಾದ ಮಾರುಕಟ್ಟೆಯ ಕಾಮಗಾರಿಗಳ ಬಗ್ಗೆ

**ಶ್ರೀ ಐವನ್ ಡಿ'ಸೋಜ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೫೯ (೨೧೯) ಮಾನ್ಯ ನಗರಾಭಿವೃದ್ಧಿ ಹಾಗೂ ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ನಿರ್ಮಿಸಲಾದ ಮಾರುಕಟ್ಟೆಗಳ ಕಾಮಗಾರಿಗಳನ್ನು ಅರ್ಧದಲ್ಲಿ ನಿಲ್ಲಿಸಲು ಕಾರಣವೇನು ;

(ಆ) ನಗರಪಾಲಿಕೆ ವ್ಯಾಪ್ತಿಯಲ್ಲಿ ಮಾರುಕಟ್ಟೆಗಳಿಗೆ ವಿನಿಯೋಗಿಸಿದ ಹಣವು ಯಾವುದೇ ನಿಯಮ ಬದ್ಧವಾದ ಯೋಜನೆ ಇಲ್ಲದೆ ಸರ್ಕಾರದ ಹಣ ಪೋಲು ಮಾಡಲಾಗುತ್ತಿದ್ದು, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು ;

(ಇ) ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ೬ ಮಾರುಕಟ್ಟೆಗಳು ಸ್ಥಳಾವಕಾಶವನ್ನು ಗ್ರಾಹಕರಿಗೆ ವಹಿಸಿಕೊಡದೆ ಕಾಮಗಾರಿಗಳನ್ನು ನಿಲ್ಲಿಸಿ ಸಾರ್ವಜನಿಕರ ಹಣ ಪೋಲು ಮಾಡುತ್ತಿರುವುದು ಸರಿಯೇ ; (ವಿವರ ನೀಡುವುದು)

(ಈ) ಮಾರುಕಟ್ಟೆ ನಿರ್ಮಿಸುವಾಗ ೭, ೪ ಮತ್ತು ೫ ಅಂತಸ್ತಿನ ಮಾರುಕಟ್ಟೆ ನಿರ್ಮಾಣ ಮಾಡಿ ಯಾವುದೇ ಗ್ರಾಹಕರಿಗೆ ನೀಡದೆ ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ? (ವಿವರ ನೀಡುವುದು)

## ಮಂಗಳೂರಿನ ಸ್ಮಾರ್ಟ್ ಸಿಟಿ ಯೋಜನೆಯ ಕಾಮಗಾರಿಗಳ ಬಗ್ಗೆ

**ಶ್ರೀ ಐವನ್ ಡಿ'ಸೋಜ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೬೦ (೨೧೮) ಮಾನ್ಯ ನಗರಾಭಿವೃದ್ಧಿ ಹಾಗೂ ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸ್ಮಾರ್ಟ್ ಸಿಟಿ ಯೋಜನೆಯ ಕಾಮಗಾರಿಗಳು ಕಳಪೆ ಮಟ್ಟದ್ದಾಗಿದ್ದು, ಅನೇಕ ಕಾಮಗಾರಿಗಳು ಮಳೆಗಾಲದಲ್ಲಿ ಕುಸಿದುಬಿದ್ದು ಉಂಟಾದ ಅಪಾರ ಹಾನಿಗಳ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಸ್ಮಾರ್ಟ್ ಸಿಟಿ ಯೋಜನೆ ಅನ್ವಯ ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕೈಗೊಂಡಿರುವ ಯೋಜನೆಗಳಾವುವು ; ಅವುಗಳಿಗೆ ವಿನಿಯೋಗಿಸಿದ ಮೊತ್ತ ಎಷ್ಟು ;

(ಇ) ಸ್ಮಾರ್ಟ್ ಸಿಟಿ ಯೋಜನೆಯ ಬಂದರು ಅಭಿವೃದ್ಧಿಗೆ ಸ್ಮಾರ್ಟ್ ಸಿಟಿ ಯೋಜನೆಯಿಂದ ಕೈಗೊಂಡ ಕ್ರಮಗಳೇನು ;

(ಈ) ಸ್ಮಾರ್ಟ್ ಸಿಟಿ ಮೂಲ ಉದ್ದೇಶವನ್ನು ಬಿಟ್ಟು ರಸ್ತೆ ಮತ್ತು ಚರಂಡಿಗಳಿಗೆ ಹಣ ವಿನಿಯೋಗಿಸಲಾಗಿದೆ ಎಂಬ ದೂರುಗಳಿದ್ದು, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಸಹಕಾರಿ ಸಂಘಗಳಿಂದ ಸಾಲ ಹಂಚಿಕೆ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೬೧ (೨೩೪) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಸಣ್ಣ ರೈತರು ಸಹಕಾರಿ ಬ್ಯಾಂಕ್ ಹಾಗೂ ಸಹಕಾರಿ ಸಂಘಗಳಿಂದ ಇಲ್ಲಿಯವರೆಗೆ ಸಾಲ ಪಡೆದ ರೈತರ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಸಹಕಾರಿ ಬ್ಯಾಂಕ್ ಹಾಗೂ ಸಹಕಾರಿ ಸಂಘಗಳಿಂದ ಸಣ್ಣ ಮತ್ತು ಅತಿ ಸಣ್ಣ ರೈತರಿಗೆ ನೀಡಲಾಗುವ ಕನಿಷ್ಠ ಹಾಗೂ ಗರಿಷ್ಠ ಪ್ರಮಾಣದ ಸಾಲವೆಷ್ಟು ;

(ಇ) ಸರ್ಕಾರದ ಈ ಸಾಲ ಯೋಜನೆಯಿಂದ ಇಲ್ಲಿಯವರೆಗೂ ಪ್ರಯೋಜನ ಪಡೆದ ರೈತರು ಆರ್ಥಿಕ ಪ್ರಗತಿ ಹೊಂದಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ; (ಜಿಲ್ಲಾವಾರು ವಿವರ ನೀಡುವುದು)

(ಈ) ಈ ಸಾಲ ಯೋಜನೆಯ ಪ್ರಯೋಜನೆ ಪಡೆದು ಕೃಷಿಯಲ್ಲಿ ಸಾಧನೆ ಮಾಡಿ ಸರ್ಕಾರವು ಕೊಡುವ ರೈತ ಪ್ರಶಸ್ತಿಯನ್ನು ಪಡೆದುಕೊಂಡಿರುವ ಸಣ್ಣ ಮತ್ತು ಅತಿ ಸಣ್ಣ ರೈತರ ಸಂಖ್ಯೆ ಎಷ್ಟು ? (ತಾಲ್ಲೂಕುವಾರು ವಿವರ ನೀಡುವುದು)

## ಸಾರ್ವಜನಿಕ ಉದ್ಯಮಗಳ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೬೨ (೨೩೫) ಮಾನ್ಯ ಸಣ್ಣ ಕೈಗಾರಿಕೆ ಹಾಗೂ ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಒಟ್ಟು ಸಾರ್ವಜನಿಕ ಉದ್ಯಮೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ಉದ್ಯಮವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ರಾಜ್ಯದ ಒಟ್ಟು ಸಾರ್ವಜನಿಕ ಉದ್ಯಮಗಳಲ್ಲಿರುವ ಉದ್ಯೋಗಿಗಳ ಸಂಖ್ಯೆ ಎಷ್ಟು ; ಇದರಲ್ಲಿ ಕನ್ನಡಿಗರ ಸಂಖ್ಯೆ ಎಷ್ಟು ;

(ಇ) ಸಣ್ಣ ಕೈಗಾರಿಕೆ ವತಿಯಿಂದ ಹೊಸದಾಗಿ ಪ್ರಾರಂಭ ಮಾಡುವ ಕೈಗಾರಿಕೆಗಳಿಗೆ ಇರುವ ಮಾನದಂಡಗಳೇನು ಹಾಗೂ ಪ್ರೋತ್ಸಾಹಗಳೇನು ; (ವಿವರವಾದ ಮಾಹಿತಿ ನೀಡುವುದು)

(ಈ) ರಾಜ್ಯದಲ್ಲಿ ಸಣ್ಣ ಕೈಗಾರಿಕೆಗಳಿಂದ ಇಲ್ಲಿಯವರೆಗೆ ಎಷ್ಟು ಜನರಿಗೆ ಉದ್ಯೋಗ ಲಭಿಸಿದೆ ; (ವಿವರ ನೀಡುವುದು)

(ಉ) ಸಣ್ಣ ಕೈಗಾರಿಕೆ ಇಲಾಖೆಯಲ್ಲಿರುವ ಒಟ್ಟು ಸಿಬ್ಬಂದಿಗಳ ಸಂಖ್ಯೆಗಳೆಷ್ಟು; ಖಾಲಿಯಿರುವ ಹುದ್ದೆಗಳೆಷ್ಟು ; ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಸ್ಮಾರ್ಟ್ ಸಿಟಿ ಯೋಜನೆಯ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೬೩ (೨೩೬) ಮಾನ್ಯ ನಗರಾಭಿವೃದ್ಧಿ ಹಾಗೂ ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಎಷ್ಟು ನಗರಗಳನ್ನು ಸ್ಮಾರ್ಟ್ ಸಿಟಿ ಯೋಜನೆಯ ಅಡಿಯಲ್ಲಿ ಪರಿಗಣಿಸಲಾಗಿದೆ ;

(ಆ) ರಾಜ್ಯದ ಸ್ಮಾರ್ಟ್ ಸಿಟಿ ಯೋಜನೆಗೆ ಕೇಂದ್ರ ಸರ್ಕಾರದಿಂದ ಬಿಡುಗಡೆಯಾದ ಮೊತ್ತವೆಷ್ಟು ; (ಸ್ಮಾರ್ಟ್ ಸಿಟಿಗೆ ಆಯ್ಕೆಯಾದ ನಗರವಾರು ವಿವರ ನೀಡುವುದು, ಈ ಯೋಜನೆಗೆ ರಾಜ್ಯ ಸರ್ಕಾರವು ನೀಡಿರುವ ಅನುದಾನವೆಷ್ಟು)

(ಇ) ಸ್ಮಾರ್ಟ್ ಸಿಟಿ ಯೋಜನೆಯು ಯಾವಾಗ ಪ್ರಾರಂಭವಾಯಿತು ; ಯಾವ ಅವಧಿಯಲ್ಲಿ ಈ ಯೋಜನೆಯು ಪೂರ್ಣಗೊಳ್ಳಬೇಕಿದೆ ; (ವಿವರ ನೀಡುವುದು)

(ಈ) ಸ್ಮಾರ್ಟ್ ಸಿಟಿ ಯೋಜನೆಯ ಅನ್ವಯ ಕಡ್ಡಾಯವಾಗಿ ಯಾವ ಯಾವ ಸೌಲಭ್ಯಗಳನ್ನು ನಗರದ ಜನತೆಗೆ ನೀಡಬೇಕಾಗಿದೆ ? (ವಿವರ ನೀಡುವುದು)

## ಗೃಹ ನಿರ್ಮಾಣ ಸಹಕಾರ ಸಂಘಗಳ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :-**

೧೬೪ (೨೪೪) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಡ್ಯ, ಮೈಸೂರು, ಹಾಸನ ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ನೋಂದಣಿಯಾಗಿರುವ ಕಾರ್ಯನಿರತ ಸ್ಥಗಿತ ಮತ್ತು ಸಮಾಪನೆಗೊಂಡಿರುವ ಸರ್ಕಾರಿ ನೌಕರರ ಹಾಗೂ ಸರ್ಕಾರಿ ನೌಕರರೇತರ ಗೃಹ ನಿರ್ಮಾಣ ಸಹಕಾರ ಸಂಘಗಳ ಸಂಖ್ಯೆ ಎಷ್ಟು, ಯಾವುವು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಈ ಪೈಕಿ ರೇರಾ ಪ್ರಾಧಿಕಾರದಲ್ಲಿ ನೋಂದಣಿ ಆಗಿರುವ ಗೃಹ ನಿರ್ಮಾಣ ಸಹಕಾರ ಸಂಘಗಳ ಸಂಖ್ಯೆ ಎಷ್ಟು ; ಅವು ಯಾವುವು ; ಸಾಕಷ್ಟು ಯೋಜನೆಗಳು ಅನುಮೋದನೆ ಆಗುತ್ತಿದ್ದರೂ ಕೆಲವೇ ಯೋಜನೆಗಳು ಮಾತ್ರ ರೇರಾ ಪ್ರಾಧಿಕಾರದಲ್ಲಿ ನೋಂದಣಿಯಾಗುತ್ತಿದ್ದು, ನೋಂದಣಿಯನ್ನು ಕಡ್ಡಾಯಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ನಿವೇಶನ ಹಂಚಿಕೆ ಮತ್ತು ನೋಂದಣಿಗೆ ಸಂಬಂಧಿಸಿದಂತೆ ಸ್ವೀಕಾರಗೊಂಡ ದೂರುಗಳ ಸಂಖ್ಯೆ ಎಷ್ಟು ; ಇದರಲ್ಲಿ ಸರ್ಕಾರದ ಸೇವೆಗೆ ಸೇರಿದ ನೌಕರರ ಗೃಹ ನಿರ್ಮಾಣ ಸಹಕಾರ ಸಂಘಗಳಿವೆಯೇ ; (ವಿವರ ನೀಡುವುದು)

(ಈ) ಈ ಪೈಕಿ ಎಷ್ಟು ಪ್ರಕರಣಗಳು ಇತ್ಯರ್ಥಗೊಂಡಿವೆ ಮತ್ತು ಈ ರೀತಿಯ ಪ್ರಕರಣಗಳಲ್ಲಿ ಸಾರ್ವಜನಿಕರ ಹಿತಾಸಕ್ತಿಯನ್ನು ಕಾಪಾಡಲು ಇಲಾಖೆ ಕೈಗೊಂಡಿರುವ ಕ್ರಮಗಳೇನು ;

(ಉ) ಸದಸ್ಯರು ನಿವೇಶನ ಹಂಚಿಕೆ ಮತ್ತು ನೋಂದಣಿಗೆ ಸಂಬಂಧಿಸಿದಂತೆ ವಿಳಂಬ/ತೊಂದರೆಗೊಳಗಾಗಿದ್ದಲ್ಲಿ, ಯಾವ ರೀತಿಯ ಪರಿಹಾರ ಪಡೆಯಬಹುದು ? (ಸಂಪೂರ್ಣ ಮಾಹಿತಿ ನೀಡುವುದು)

## ಇಂದಿರಾ ಕ್ಯಾಂಟೀನ್‌ಗಳ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :-**

೧೬೫ (೨೪೬) ಮಾನ್ಯ ನಗರಾಭಿವೃದ್ಧಿ ಹಾಗೂ ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಇಂದಿರಾ ಕ್ಯಾಂಟೀನ್‌ಗಳ ಒಟ್ಟು ಸಂಖ್ಯೆ ಎಷ್ಟು; ಇದರಲ್ಲಿ ಮಂಜೂರಾದ, ಕಾರ್ಯನಿರ್ವಹಿಸುತ್ತಿರುವ ಕ್ಯಾಂಟೀನ್‌ಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಹೊಸ ಮೆನುವಿನಂತೆ ಆಹಾರ ವಿತರಣೆ ಅನುಷ್ಠಾನಗೊಳಿಸಿರುವ/ ಅನುಷ್ಠಾನಗೊಳಿಸಬೇಕಿರುವ ಜಿಲ್ಲೆಗಳು ಯಾವುವು ; ಹೊಸ ಮೆನುವಿನಂತೆ ಆಹಾರ ಅನುಷ್ಠಾನಗೊಳಿಸಲು ವಿಳಂಬವಾಗಿರುವುದಕ್ಕೆ ಕಾರಣಗಳೇನು ; ಯಾವ ಕಾಲಮಿತಿಯೊಳಗೆ ಅನುಷ್ಠಾನಗೊಳಿಸಲಾಗುವುದು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಕಳೆದ ೦೩ ವರ್ಷಗಳಲ್ಲಿ ಇಂದಿರಾ ಕ್ಯಾಂಟೀನ್‌ಗಳಿಗಾಗಿ ಬಿಡುಗಡೆ ಮಾಡಲಾದ ಅನುದಾನವೆಷ್ಟು ; ಬಿಡುಗಡೆಗೆ ಬಾಕಿ ಇರುವ ಮೊತ್ತವೆಷ್ಟು ; (ವರ್ಷವಾರು ಮಾಹಿತಿ ನೀಡುವುದು)

(ಈ) ಹೊಸದಾಗಿ ಇಂದಿರಾ ಕ್ಯಾಂಟೀನ್‌ಗಳನ್ನು ಆರಂಭಿಸಲು ಬೇಡಿಕೆ ಇದೆಯೇ ; ಎಲ್ಲೆಲ್ಲಿ ಪ್ರಸಕ್ತ ಸಾಲಿನಲ್ಲಿ ಹೊಸದಾಗಿ ಎಷ್ಟು,

ಎಲ್ಲೆಲ್ಲಿ ಇಂದಿರಾ ಕ್ಯಾಂಟೀನ್‌ಗಳನ್ನು ಆರಂಭಿಸಲು ಸರ್ಕಾರ ಉದ್ದೇಶಿಸಿದೆ ; ಇದಕ್ಕಾಗಿ ಬೇಕಾಗಬಹುದಾದ ಅನುದಾನ ಎಷ್ಟು? (ಸಂಪೂರ್ಣ ಮಾಹಿತಿ ನೀಡುವುದು)

## ಮಂಡ್ಯ ಜಿಲ್ಲೆಯಲ್ಲಿ ಹೊಸ ಕೈಗಾರಿಕಾ ಪ್ರದೇಶಾಭಿವೃದ್ಧಿಗಾಗಿ ಸ್ಥಳ ಗುರುತಿಸುವ ಬಗ್ಗೆ

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :-**

೧೬೬ (೨೪೯) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ (ಕೆ.ಐ.ಎ.ಡಿ.ಬಿ) ವತಿಯಿಂದ ಮಂಡ್ಯ ಜಿಲ್ಲೆಯಲ್ಲಿ ಹೊಸದಾಗಿ ಕೈಗಾರಿಕಾ ಪ್ರದೇಶಾಭಿವೃದ್ಧಿಗಾಗಿ ಗುರುತಿಸಲಾಗಿರುವ ಸ್ಥಳಗಳಾವುವು ಹಾಗೂ ಅವುಗಳ ವಿಸ್ತೀರ್ಣ ಎಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಒಂದು ವೇಳೆ ಕೈಗಾರಿಕಾ ಪ್ರದೇಶಾಭಿವೃದ್ಧಿ ಸ್ಥಳಗಳನ್ನು ಗುರುತಿಸಿದ್ದಲ್ಲಿ ಭೂಸ್ವಾಧೀನಪಡಿಸಿಕೊಳ್ಳುವ ಪ್ರಕ್ರಿಯೆ ಯಾವ ಹಂತದಲ್ಲಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಯೋಜನೆಗಾಗಿ ಭೂಮಿ ಕಳೆದುಕೊಳ್ಳುವ ರೈತರಿಗೆ ಪರಿಹಾರ ಪಾವತಿ ಆಗಿದೆಯೇ, ಹಾಗಿದ್ದಲ್ಲಿ ಈವರೆವಿಗೂ ಪಾವತಿಸಿರುವ ಪರಿಹಾರ ಮೊತ್ತ ಎಷ್ಟು ಮತ್ತು ಬಾಕಿಯಿರುವ ಮೊತ್ತ ಎಷ್ಟು ; (ವಿವರ ನೀಡುವುದು)

(ಈ) ಕೆ.ಐ.ಎ.ಡಿ.ಬಿ ವತಿಯಿಂದ ಮಂಡ್ಯ ಜಿಲ್ಲೆಯಲ್ಲಿ ಅಭಿವೃದ್ಧಿಪಡಿಸಲಾದ ಅಥವಾ ಅಭಿವೃದ್ಧಿಪಡಿಸಲಾಗುತ್ತಿರುವ ಕೈಗಾರಿಕಾ ಪ್ರದೇಶಗಳಾವುವು ; (ಸಂಪೂರ್ಣ ಮಾಹಿತಿ ನೀಡುವುದು)

(ಉ) ಅಭಿವೃದ್ಧಿಪಡಿಸಲಾದ ಪ್ರದೇಶಗಳಲ್ಲಿ ನಿವೇಶನ ಪಡೆದು ಕೈಗಾರಿಕೆಗಳನ್ನು ಸ್ಥಾಪಿಸಿರುವ ಹಾಗೂ ಸ್ಥಾಪಿಸದಿರುವ ಸಂಸ್ಥೆಗಳು ಯಾವುವು ; (ವಿವರ ನೀಡುವುದು)

(ಊ) ಕಳೆದ ೫ ವರ್ಷಗಳಲ್ಲಿ ಮಂಡ್ಯ ಜಿಲ್ಲೆಯಲ್ಲಿ ಖಾಸಗಿ ಕೈಗಾರಿಕೆಗಳನ್ನು ಸ್ಥಾಪಿಸುವ ಎಷ್ಟು ಯೋಜನೆಗಳಿಗೆ ಅನುಮೋದನೆ ನೀಡಲಾಗಿದೆ ಹಾಗೂ ಅವುಗಳು ಯಾವುವು ; ಇವುಗಳಿಂದ ಹೂಡಿಕೆ ಮಾಡಲಾದ ಬಂಡವಾಳ ಮತ್ತು ಲಭ್ಯವಾಗಬಹುದಾದ ಉದ್ಯೋಗಗಳ ಸಂಖ್ಯೆ ಎಷ್ಟು ? (ಸಂಪೂರ್ಣ ವಿವರ ನೀಡುವುದು)

## ರಾಜ್ಯದಲ್ಲಿ ನಗರ ಅನಿಲ ವಿತರಣೆ ಯೋಜನೆ ಅನುಷ್ಠಾನ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :-**

೧೬೭ (೨೪೭) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರವು ಎಷ್ಟು ಜಿಲ್ಲೆಗಳಲ್ಲಿ ನಗರ ಅನಿಲ ವಿತರಣೆ ಯೋಜನೆಯನ್ನು ಜಾರಿಗೆ ತರಲಾಗಿದೆ ; ಎಷ್ಟು ಹಂತದಲ್ಲಿ ಜಾರಿಗೆ ಬಂದಿದೆ ; ಯೋಜನೆಯ ಅವಧಿ ಮತ್ತು ಅಂದಾಜು ಮೊತ್ತ ಎಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ನಗರ ಅನಿಲ ಯೋಜನೆ ಪ್ರಾಥಮಿಕ ಉದ್ದೇಶವೇನು ; (ವಿವರ ನೀಡುವುದು)

(ಇ) ರಾಜ್ಯದಲ್ಲಿ ನಗರ ಅನಿಲ ವಿತರಣೆ (ಸಿಜಿಡಿ)ಗೆ ಸಂಬಂಧಿಸಿದ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಗುರುತಿಸಲಾಗಿರುವ ಸಂಸ್ಥೆಗಳು ಯಾವುವು ; ಯಾವ ಜಿಲ್ಲೆಗಳಲ್ಲಿ ಯಾವ ಸಂಸ್ಥೆಗಳು ಕೆಲಸ ನಿರ್ವಹಿಸುತ್ತಿವೆ ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಪ್ರತಿ ಜಿಲ್ಲೆಯಲ್ಲಿ ಅಂದಾಜು ಎಷ್ಟು ಪಿಎನ್‌ಜಿ ಸಂಪರ್ಕಗಳು ಮತ್ತು ಸಿಎನ್‌ಜಿ ಘಟಕಗಳು ಹಾಗೂ ಎಷ್ಟು ಉದ್ದದ ಪೈಪ್‌ಲೈನ್ ಜಾಲವನ್ನು ಅನುಷ್ಠಾನಗೊಳಿಸಲಾಗುತ್ತಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಉ) ಎಷ್ಟು ಜಿಲ್ಲೆಗಳಲ್ಲಿ ಕಾಮಗಾರಿಗಳ ಅನುಷ್ಠಾನಗೊಳಿಸುವ ಕೆಲಸ ಪ್ರಗತಿಯಲ್ಲಿದೆ ; (ಶೇಕಡವಾರು ಪ್ರಗತಿ ನೀಡುವುದು) ಇನ್ನೂ ಎಷ್ಟು ಜಿಲ್ಲೆಗಳಲ್ಲಿ ಕಾಮಗಾರಿ ಆರಂಭಿಸಬೇಕಿದೆ ? (ವಿವರ ನೀಡುವುದು)

## ನಗರ ಸ್ಥಳೀಯ ಸದಸ್ಯರ ಗೌರವಧನ ಪರಿಷ್ಕರಿಸುವ ಬಗ್ಗೆ

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :-**

೧೬೮ (೨೫೦) ಮಾನ್ಯ ಪೌರಾಡಳಿತ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ನಗರ ಸ್ಥಳೀಯ ಸಂಸ್ಥೆಗಳ ಮಹಾಪೌರರು/ಉಪ ಮಹಾಪೌರರು/ ಅಧ್ಯಕ್ಷ/ಉಪಾಧ್ಯಕ್ಷ ಮತ್ತು ಸದಸ್ಯರಿಗೆ ಪ್ರಸ್ತುತ ಪಾವತಿಸುತ್ತಿರುವ ಮಾಸಿಕ ಗೌರವಧನ ಎಷ್ಟು; ಗೌರವಧನವನ್ನು ಪರಿಷ್ಕರಿಸುವ ಕುರಿತು ಸರ್ಕಾರ ಕೈಗೊಂಡ ನಿಲುವೇನು; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಮಹಾನಗರಪಾಲಿಕೆ, ನಗರಸಭೆಗಳು, ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳ ಸ್ಥಾಯಿ ಸಮಿತಿ ಸದಸ್ಯರಿಗೆ ಪ್ರಸ್ತುತ ನೀಡುತ್ತಿರುವ ಸಭಾ ಭತ್ಯೆಯನ್ನು ಪರಿಷ್ಕರಿಸಲು ಸರ್ಕಾರ ಉದ್ದೇಶಿಸಿದೆಯೇ; ಇದ್ದಲ್ಲಿ, ಈ ಬಗ್ಗೆ ಸಂಪೂರ್ಣ ಮಾಹಿತಿ ನೀಡುವುದು;

(ಇ) ಸರ್ಕಾರದ ಆದೇಶ ಸಂಖ್ಯೆ:ನಇ:೧೫೬:ಎಂಎಲ್‌ಆರ್:೨೦೧೫, ದಿ:೧೫.೦೯.೨೦೧೬ರಲ್ಲಿ ಮುಂದಿನ ಐದು ವರ್ಷದವರೆಗೆ ಗೌರವಧನವನ್ನು/ಭತ್ಯೆಗಳನ್ನು ಹೆಚ್ಚಿಸುವ ಅಥವಾ ಪರಿಷ್ಕರಿಸುವ ಬಗ್ಗೆ ಪರಿಗಣಿಸುವಂತಿಲ್ಲ ಎಂಬ ಷರತ್ತಿನ ಅವಧಿಯು ಈಗಾಗಲೇ ಮುಕ್ತಾಯಗೊಂಡಿರುವುದರಿಂದ ಗೌರವಧನ/ಭತ್ಯೆಗಳನ್ನು ಪರಿಷ್ಕರಿಸುವ ಬಗ್ಗೆ ಸರ್ಕಾರದ ನಿಲುವೇನು;

(ಈ) ಆಡಳಿತದಲ್ಲಿ ಪಾರದರ್ಶಕತೆ, ಜನರ ಸಹಭಾಗಿತ್ವ ತರಲು ಗ್ರಾಮ ಪಂಚಾಯಿತಿಗಳಲ್ಲಿ ವಾರ್ಡ್ ಸಭೆ ಮತ್ತು ಗ್ರಾಮ ಸಭೆಗಳನ್ನು ನಡೆಸುವಂತೆ ನಗರ ಸ್ಥಳೀಯ ಸಂಸ್ಥೆಗಳಲ್ಲಿಯೂ ಈ ರೀತಿಯ ಸಭೆಗಳಲ್ಲಿಯೂ ಈ ರೀತಿಯ ಸಭೆಗಳನ್ನು ಆಯೋಜಿಸುವ ಬಗ್ಗೆ ಸರ್ಕಾರದ ನಿಲುವೇನು ? (ಸಂಪೂರ್ಣ ವಿವರ ನೀಡುವುದು)

## ಕರ್ನಾಟಕ ಕೈಗಾರಿಕಾ ಪ್ರದೇಶದ ಕಟ್ಟಡಗಳ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೬೯ (೨೫೫) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕೈಗಾರಿಕಾ ಪ್ರದೇಶದ ಕಟ್ಟಡ ಹಾಗೂ ಇತರೆ ಸ್ಥಾವರ ನಿರ್ಮಾಣಗಳಿಗೆ ಸ್ಥಳೀಯ ಸಂಸ್ಥೆಗಳು ತೆರಿಗೆ ವಿಧಿಸಲು ಅವಕಾಶ ಇದೆಯೇ; ಈ ಕುರಿತ ನಿಯಮಗಳು ಯಾವುವು ; ಪ್ರಸ್ತುತ ಕೈಗಾರಿಕಾ ಪ್ರದೇಶ ಹಾಗೂ ಕೆಐಎಡಿಬಿ ಮೂಲಕ ವಿವಿಧ ಕೈಗಾರಿಕೆಗಳಿಗೆ ನೀಡಿದ ಕಟ್ಟಡ ಸ್ಥಳ ಹಾಗೂ ಶೆಡ್ಡುಗಳಿಗೆ ತೆರಿಗೆಯನ್ನು ವಸೂಲು ಮಾಡಲಾಗುತ್ತಿದೆಯೇ ; ಆ ತೆರಿಗೆಯಲ್ಲಿ ಎಷ್ಟು ಪಾಲನ್ನು ಸ್ಥಳೀಯ ಸಂಸ್ಥೆಗಳಿಗೆ ನೀಡಲಾಗುತ್ತಿದೆ ; ಕೆಲವು ಕೈಗಾರಿಕೆಗಳು ನಗರ ಹಾಗೂ ಗ್ರಾಮೀಣ ಸ್ಥಳೀಯ ಸಂಸ್ಥೆಗಳಿಗೆ ಕಟ್ಟಡ ತೆರಿಗೆ ಪಾವತಿಸದಿರುವ ಬಗ್ಗೆ ಸ್ಥಳೀಯ ಸಂಸ್ಥೆಗಳಿಂದ ದೂರುಗಳು ಬಂದಿದೆಯೇ ; (ವಿವರ ನೀಡುವುದು)

(ಆ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿರುವ ಕೆಐಎಡಿಬಿ ಯ ಕೈಗಾರಿಕಾ ಪ್ರದೇಶಗಳು ಯಾವುವು; ಸದರಿ ಕೈಗಾರಿಕೆಗಳು ಹಾಗೂ ಕೈಗಾರಿಕಾ ಪ್ರದೇಶಗಳು ಸ್ಥಳೀಯ ಸಂಸ್ಥೆಗಳಾದ ಗ್ರಾಮ ಪಂಚಾಯಿತಿಗಳು ಇತ್ಯಾದಿಗಳಿಂದ ಕಟ್ಟಡ ಪರವಾನಿಗೆ ಇತ್ಯಾದಿಗಳನ್ನು ಪಡೆದು ತೆರಿಗೆ ಪಾವತಿ ಮಾಡಲಾಗುತ್ತಿದೆಯೇ; ಉಭಯ ಜಿಲ್ಲೆಗಳಲ್ಲಿ ಇಂತಹ ಕೈಗಾರಿಕಾ ಪ್ರದೇಶಗಳ ಶೆಡ್‌ಗಳ ಹಾಗೂ ಕಾರ್ಖಾನೆಗಳಿಂದ ವಸೂಲಿಯಾದ ತೆರಿಗೆಯ ಎಷ್ಟು ಭಾಗವನ್ನು ಸ್ಥಳೀಯ ಸಂಸ್ಥೆಗಳಿಗೆ ನೀಡಲಾಗುತ್ತಿದೆಯೇ ;

(ಇ) ಕೈಗಾರಿಕೆಗಳು ಕಟ್ಟಡ ತೆರಿಗೆ ಸ್ಥಳೀಯ ಸಂಸ್ಥೆಗಳಿಗೆ ಪಾವತಿಸದಿರುವುದರಿಂದ ಈ ಕಟ್ಟಡಗಳ ಮೇಲೆ ನಿಯಂತ್ರಣ ಹೊಂದಿಲ್ಲದಿರುವುದರಿಂದ ಯಾವುದೇ ಸಮಸ್ಯೆಗಳಾದಾಗ ಕ್ರಮ ಕೈಗೊಳ್ಳಲು ಅವಕಾಶ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಕುರಿತು ಸರ್ಕಾರದ ನಿಯಮಗಳು ಯಾವುವು;

(ಈ) ಎಸ್‌ಇರುಡ್ ವ್ಯಾಪ್ತಿಯ ಕೈಗಾರಿಕಾ ಕಟ್ಟಡಗಳಿಗೆ ತೆರಿಗೆ ವಿನಾಯಿತಿ ಇದೆಯೇ ; ಈ ಕುರಿತ ನಿಯಮಗಳೇನು ; ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲಾ ವ್ಯಾಪ್ತಿಯಲ್ಲಿ ಎಸ್‌ಇರುಡ್ ವ್ಯಾಪ್ತಿಯ ಕೈಗಾರಿಕಾ ಕಟ್ಟಡಗಳಿಗೆ ತೆರಿಗೆ ವಿಧಿಸಲಾಗುತ್ತಿದೆಯೇ ಅಥವಾ ಇಲ್ಲವೇ ? (ವಿವರ ನೀಡುವುದು)

## ಕರ್ನಾಟಕ ರಾಜ್ಯದಲ್ಲಿ ಕೃಷಿ ಉತ್ಪನ್ನ ಮಾರುಕಟ್ಟೆಗಳ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೭೦ (೨೫೪) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಇರುವ ಕೃಷಿ ಉತ್ಪನ್ನ ಮಾರುಕಟ್ಟೆಗಳ ಸಂಖ್ಯೆ ಎಷ್ಟು; ಯಾವ ಯಾವ ಜಿಲ್ಲೆಗಳಲ್ಲಿ ಎಪಿಎಂಸಿ ಕಟ್ಟಡಗಳು ಇವೆ; ಅಲ್ಲಿರುವ ಸೌಲಭ್ಯಗಳು ಯಾವುವು ; ನಿರ್ವಹಣೆ ಯಾರು ಮಾಡುತ್ತಿದ್ದಾರೆ; ಈ ಎಪಿಎಂಸಿ ಕಟ್ಟಡಗಳಲ್ಲಿ ಕೃಷಿ ಉತ್ಪನ್ನಗಳನ್ನು ಗ್ರಾಹಕರಿಗೆ ರೈತರಿಂದ ನೇರ ಖರೀದಿಸಲು ಅವಕಾಶ ನೀಡಲಾಗುತ್ತಿದೆಯೇ ; (ವಿವರ ನೀಡುವುದು)

(ಆ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಎಷ್ಟು ಎಪಿಎಂಸಿ ಕಟ್ಟಡಗಳು ಹಾಗೂ ಮಾರುಕಟ್ಟೆಗಳು ಇವೆ ; ಅವುಗಳಲ್ಲಿ ವ್ಯವಹಾರ ನಡೆಸಲಾಗುತ್ತಿದೆಯೇ ; (ವಿವರಗಳನ್ನು ನೀಡುವುದು)

(ಇ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಹಲವಾರು ಗ್ರಾಮಾಂತರ ಪ್ರದೇಶಗಳಲ್ಲಿ ಎಪಿಎಂಸಿ ಮಾರುಕಟ್ಟೆಗಳನ್ನು ನಿರ್ಮಿಸಿದ್ದು, ಅವುಗಳಲ್ಲಿ ಯಾವುದೇ ಮಾರುಕಟ್ಟೆ ವ್ಯವಹಾರಗಳು

ನಡೆಯುತ್ತಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಅವುಗಳನ್ನು ಬಹುಪಯೋಗಿ ಕಟ್ಟಡಗಳನ್ನಾಗಿ ಪರಿವರ್ತಿಸಲು ಸರ್ಕಾರ ಕ್ರಮವಹಿಸಲು ಯೋಚಿಸಿದೆಯೇ ; (ವಿವರ ನೀಡುವುದು)

(ಈ) ಗ್ರಾಮಾಂತರ ಪ್ರದೇಶದಲ್ಲಿ ರೈತರಿಂದ ಬೆಳೆದ ಹಣ್ಣು-ಹಂಪಲು ತರಕಾರಿಗಳನ್ನು ಇಂತಹ ಮಾರುಕಟ್ಟೆ ಕಟ್ಟಡಗಳಲ್ಲಿ ನೇರವಾಗಿ ಗ್ರಾಹಕರಿಗೆ ಸಂತೆಯ ಮೂಲಕ ಮಾರಲು ಕ್ರಮ ಕೈಗೊಳ್ಳಲಾಗಿದೆಯೇ ; ಈ ಕುರಿತು ಸರ್ಕಾರ ಯಾವುದಾದರೂ ಯೋಜಿತ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆಯೇ ;

(ಉ) ಸರಿಯಾದ ಮಾರುಕಟ್ಟೆಗಳು ಇಲ್ಲದ ಕಾರಣ ಹೆಚ್ಚಿನ ಕೃಷಿಕರು ತಾವು ಬೆಳೆದ ಹಣ್ಣು ಹಂಪಲು ತರಕಾರಿ ಇತ್ಯಾದಿಗಳನ್ನು ವರ್ತಕರಿಗೆ ಮಾರುತ್ತಿದ್ದು ರೈತರಿಗೆ ಸರಿಯಾದ ಬೆಲೆ ಸಿಗದೆ ಸಾರ್ವಜನಿಕರಿಗೂ ಒಳ್ಳೆಯ ಗುಣಮಟ್ಟದ ಆಹಾರ/ತರಕಾರಿ/ ಹಣ್ಣು-ಹಂಪಲು ಇತ್ಯಾದಿಗಳು ಕಡಿಮೆ ದರದಲ್ಲಿ ಲಭ್ಯವಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಕುರಿತು ಸರ್ಕಾರ ಯಾವ ಕಾರ್ಯಕ್ರಮ ಯೋಜಿಸಿದೆ ? (ವಿವರ ನೀಡುವುದು)

## ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ ನಿಯಮಗಳ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೭೧ (೨೫೨) ಮಾನ್ಯ ನಗರಾಭಿವೃದ್ಧಿ ಹಾಗೂ ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಗಳ ಮೂಲಕ ನಿವೇಶನಗಳ ಏಕ/ಬಹು ನಿವೇಶನ ವಿನ್ಯಾಸಗಳ ಅನುಮೋದನೆಗೆ ಇರುವ ನಿಯಮಗಳು ಯಾವುವು ; ಭೂಪರಿವರ್ತಿತ ನಿವೇಶನ ವಸತಿ ಯೋಜನೆ ಮನೆ ಮತ್ತು ನಿವೇಶನ ಹಕ್ಕು ಪತ್ರ ೯೪ಸಿ, ೯೪ಸಿಸಿ ಸಹಿತ ಇತರ ನಿವೇಶನಗಳಿಗೆ ಅನ್ವಯಿಸುವ ನಿಯಮಗಳ ವಿವರ ನೀಡುವುದು ;

(ಆ) ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಗೆ ಸಲ್ಲಿಕೆಯಾಗುವ ವಿನ್ಯಾಸಗಳ ಅನುಮೋದನೆಯ ಅರ್ಜಿಗೆ ವಿಲೆವಾರಿ ಮಾಡಲು ಅಗತ್ಯವಿರುವ ಅವಧಿ ಎಷ್ಟು; ಇದಕ್ಕೆ ಅಗತ್ಯವಿರುವ ಸಿಬ್ಬಂದಿ ಮತ್ತು ಕಛೇರಿ ವ್ಯವಸ್ಥೆಯ ಬಗ್ಗೆ ಇಲಾಖೆ ಏನು ಮುಂಜಾಗ್ರತೆ ಕ್ರಮಗಳನ್ನು ಕೈಗೊಳ್ಳಲಾಗಿದೆ ; ಈ ಸಮಸ್ಯೆಯನ್ನು ಸರ್ಕಾರದ ಗಮನಕ್ಕೆ ತರಲಾಗಿದೆಯೇ ; ತಂದಿದ್ದರೆ ಸರ್ಕಾರ ಕೈಗೊಂಡ ಕ್ರಮಗಳು ಯಾವುವು ; ತಾಲ್ಲೂಕು ಮಟ್ಟದಲ್ಲಿ ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ ಕಛೇರಿ ತೆರೆಯಲು ಕಾಯಿದೆಗೆ ತಿದ್ದುಪಡಿ ತರಲು ಸರ್ಕಾರ ಚಿಂತಿಸಿದೆಯೇ ;

(ಇ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ನ್ಯಾಯಾಲಯದ ಆದೇಶವಾದ ನಂತರ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳ ಗ್ರಾಮ ಪಂಚಾಯಿತಿಗಳಿಂದ ಕ್ರಮವಾಗಿ ಸಲ್ಲಿಕೆಯಾಗಿರುವ ಏಕ ನಿವೇಶನ ಹಾಗೂ ಬಹುನಿವೇಶನ ಬಡಾವಣೆ ಅನುಮೋದನೆಯ ಅರ್ಜಿಗಳ ಸಂಖ್ಯೆ ಎಷ್ಟು ; ಅವುಗಳಲ್ಲಿ ವಿಲೇವಾರಿಯಾದ ಅರ್ಜಿಗಳ ಸಂಖ್ಯೆ ಎಷ್ಟು; ತಿರಸ್ಕೃತವಾದ ಅರ್ಜಿಗಳೆಷ್ಟು ; ತಿರಸ್ಕೃತೆಗೆ ಕಾರಣವೇನು ; (ವಿವರ ನೀಡುವುದು)

(ಈ) ಕರಾವಳಿ ಜಿಲ್ಲೆಗಳಲ್ಲಿ ಕಂದಾಯ ಇಲಾಖೆಯು ಭೂ ಪರಿವರ್ತನೆಯ ಹಿಂಬರಹದಲ್ಲಿ ನಿವೇಶನಕ್ಕೆ ಸಂಪರ್ಕ ರಸ್ತೆಯೆಂದು ದಾಖಲಿಸುತ್ತಿದ್ದು, ರಸ್ತೆ ಯಾವುದೇ ಸಕ್ಷಮ ಪ್ರಾಧಿಕಾರಕ್ಕೆ ಹಸ್ತಾಂತರವಾಗದ ಮತ್ತು ಕಿರಿದಾದ ರಸ್ತೆಯ ಹಿನ್ನೆಲೆಯಲ್ಲಿ ಬಡಾವಣೆ ಅನುಮೋದನೆ ಅರ್ಜಿಗಳು ತಿರಸ್ಕೃತವಾಗುತ್ತಿರುವುದು ಮತ್ತು ಜನ ಸಾಮಾನ್ಯರು ತೊಂದರೆಗೀಡಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ? (ವಿವರ ನೀಡುವುದು)

## ಸಹಕಾರ ಸಂಘಗಳ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೭೨ (೨೫೩) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಇರುವ ಸಹಕಾರ ಸಂಘಗಳ ನಿಯಮಗಳು ಯಾವುವು; ಯಾವ ರೀತಿಯ ಸಹಕಾರಿ ಸಂಘಗಳು ಇವೆ; ಈ ಸಹಕಾರಿ ಸಂಘಗಳಲ್ಲಿ ಇರುವ ನೇಮಕಾತಿ ನಿಯಮಗಳು ಯಾವುವು ; ವಿವರ ನೀಡುವುದು ;

(ಆ) ಸಹಕಾರಿ ಸಂಘಗಳ ಸದಸ್ಯತನಕ್ಕೆ ಹಾಗೂ ನಾಮನಿರ್ದೇಶನಕ್ಕೆ ಇರುವ ಮಾನದಂಡಗಳು ಯಾವುವು; ಸಹಕಾರಿ ಸಂಘಗಳ ನಾಮನಿರ್ದೇಶಿತ ಸದಸ್ಯರುಗಳಿಗೆ ಮತದಾನದ ಹಕ್ಕಿದೆಯೇ ; (ವಿವರ ನೀಡುವುದು)

(ಇ) ದಕ್ಷಿಣ ಕನ್ನಡ ಜಿಲ್ಲೆಯ ಪ್ರಾಥಮಿಕ ಕೃಷಿ ಪತ್ತಿನ ಹಾಗೂ ಇತರ ಸಹಕಾರ ಸಂಘಗಳಿಗೆ ದಕ್ಷಿಣ ಕನ್ನಡ ಕೇಂದ್ರ ಜಿಲ್ಲಾ ಸಹಕಾರಿ

ಸಂಘದ ನಾಮನಿರ್ದೇಶಿತ ಸದಸ್ಯರನ್ನು ನಾಮನಿರ್ದೇಶನ ಮಾಡಲಾಗಿದೆಯೇ; ನಾಮನಿರ್ದೇಶಿತ ಸದಸ್ಯರಿಗೆ ಮತದಾನಕ್ಕೆ ಅವಕಾಶವಿದೆಯೇ ; (ವಿವರ ನೀಡುವುದು)

(ಈ) ಕೆಲವು ಸಹಕಾರಿ ಸಂಘಗಳಿಂದ ಈ ರೀತಿ ಜಿಲ್ಲಾ ಸಹಕಾರಿ ಸಂಘಗಳ ನಾಮನಿರ್ದೇಶಿತ ಸದಸ್ಯರನ್ನು ನಾಮನಿರ್ದೇಶನ ಮಾಡುವುದರ ವಿರುದ್ಧ ಆಕ್ಷೇಪಣೆ ವ್ಯಕ್ತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಉ) ದಕ್ಷಿಣ ಕನ್ನಡ ಕೇಂದ್ರ ಜಿಲ್ಲೆ ಸಹಕಾರಿ ಬ್ಯಾಂಕಿನ ಎಲ್ಲಾ ಶಾಖೆಗಳಲ್ಲಿ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯನ್ನು ಬಿಟ್ಟು ಬೇರೆ ಜಿಲ್ಲೆಗಳ ಎಷ್ಟು ಜನರಿಗೆ ಈ ಬ್ಯಾಂಕಿನಿಂದ ಸಾಲ ನೀಡಲಾಗಿದೆ ; ಸಾಲದ ಮೊತ್ತ ಹಾಗೂ ಅಡಮಾನ ಆಸ್ತಿಗಳು ಯಾವುವು ? (ಕಳೆದ ೩ ವರ್ಷಗಳ ವಾರ್ಷಿಕ ನಿವ್ವಳ ಲಾಭ, ಮತ್ತು ಒಟ್ಟು ಠೇವಣಿ ಬ್ಯಾಂಕಿನ ಮೂರು ವರ್ಷಗಳಲ್ಲಿ ನೀಡಿದ ಸಾಲಗಳ ಡೊನೆಷನ್ ಹಾಗೂ ಇತರೆ ಖರ್ಚು ಮಾಡಿದ ವಿವರ ನೀಡುವುದು)

## ಕರ್ನಾಟಕ ರಾಜ್ಯ ಮಹಾನಗರ ಪಾಲಿಕೆಗಳ ವಾಣಿಜ್ಯ ಸಂಕೀರ್ಣಗಳ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೭೩ (೨೫೧) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಎಲ್ಲಾ ಮಹಾನಗರ ಪಾಲಿಕೆಗಳ ಅಧೀನದಲ್ಲಿರುವ ವಾಣಿಜ್ಯ ಸಂಕೀರ್ಣಗಳ ಸಂಖ್ಯೆ ಎಷ್ಟು ; ಅಂಗಡಿಗಳು ಎಷ್ಟು; ಅಂಗಡಿಗಳಲ್ಲಿ

ಟೆಂಡರ್/ ಏಲಂ ಆದ ಅಂಗಡಿಗಳೆಷ್ಟು ; ಖಾಲಿಯಿರುವ ಅಂಗಡಿಗಳ ಸಂಖ್ಯೆಯೆಷ್ಟು ; ವಾರ್ಷಿಕವಾಗಿ ವಾಣಿಜ್ಯ ಸಂಕೀರ್ಣ/ ಅಂಗಡಿ ಬಾಡಿಗೆಯಿಂದ ಬರುವ ಆದಾಯವೆಷ್ಟು ; (ಪಾಲಿಕೆವಾರು ವಿವರ ನೀಡುವುದು)

(ಆ) ರಾಜ್ಯದ ಎಲ್ಲಾ ಮಹಾನಗರ ಪಾಲಿಕೆಗಳ ಅಧೀನದಲ್ಲಿರುವ ವಾಣಿಜ್ಯ ಸಂಕೀರ್ಣಗಳ ನಿರ್ಮಾಣಕ್ಕಾಗಿ ಹೂಡಿದ ಬಂಡವಾಳವೆಷ್ಟು; ಸರ್ಕಾರ/ಪಾಲಿಕೆಯ ಹೂಡಿಕೆ ಮೊತ್ತವೆಷ್ಟು ; ವಾಣಿಜ್ಯ ಸಂಕೀರ್ಣಗಳ ನಿರ್ಮಾಣಕ್ಕಾಗಿ ಯಾವ್ಯಾವ ಸಂಸ್ಥೆಗಳಿಂದ ಎಷ್ಟೆಷ್ಟು ಸಾಲ ಮಾಡಲಾಗಿದೆ ; ಈ ಸಾಲವನ್ನು ಕ್ಲಿಪ್ತ ಸಮಯದಲ್ಲಿ ಮರು ಪಾವತಿಸಲಾಗುತ್ತಿದೆಯೇ ; (ಪಾಲಿಕೆವಾರು ವಿವರ ನೀಡುವುದು)

(ಇ) ಮಹಾನಗರ ಪಾಲಿಕೆಗಳ ಅಧೀನದಲ್ಲಿರುವ ವಾಣಿಜ್ಯ ಸಂಕೀರ್ಣ/ ಅಂಗಡಿಗಳ ಟೆಂಡರ್/ ಏಲಂ ನಿಯಮಗಳೇನು ವಾಣಿಜ್ಯ ಸಂಕೀರ್ಣ/ಅಂಗಡಿಗಳ ಬಾಡಿಗೆ ಶುಲ್ಕವನ್ನು ನಿಗದಿಪಡಿಸುವ ಮಾನದಂಡಗಳೇನು ; ಮಹಡಿವಾರು ಅಂಗಡಿಗಳ ಬಾಡಿಗೆ ಶುಲ್ಕವನ್ನು ಹೇಗೆ ನಿಗಧಿಪಡಿಸಲಾಗುತ್ತದೆ ; (ವಿವರ ನೀಡುವುದು)

(ಈ) ಮಂಗಳೂರು ಮಹಾನಗರ ಪಾಲಿಕೆಯ ಅಧೀನದಲ್ಲಿರುವ ಒಟ್ಟು ವಾಣಿಜ್ಯ ಸಂಕೀರ್ಣಗಳ ಸಂಖ್ಯೆ ಎಷ್ಟು ; ಅಂಗಡಿಗಳು ಎಷ್ಟು ; ಅಂಗಡಿಗಳಲ್ಲಿ ಟೆಂಡರ್/ಏಲಂ ಆದ ಅಂಗಡಿಗಳೆಷ್ಟು ; ಖಾಲಿಯಿರುವ ಅಂಗಡಿಗಳ ಸಂಖ್ಯೆಯೆಷ್ಟು ; ವಾರ್ಷಿಕವಾಗಿ ವಾಣಿಜ್ಯ ಸಂಕೀರ್ಣ/ಅಂಗಡಿ ಬಾಡಿಗೆಯಿಂದ ಬರುವ ಆದಾಯವೆಷ್ಟು ; (ವಿವರ ನೀಡುವುದು)

(ಉ) ಮಂಗಳೂರು ಮಹಾನಗರ ಪಾಲಿಕೆಯ ಅಧೀನದಲ್ಲಿರುವ ಎಷ್ಟು ವಾಣಿಜ್ಯ ಸಂಕೀರ್ಣಗಳು ಯಾವ್ಯಾವ ದಿನಾಂಕಗಳಂದು ಪೂರ್ಣಗೊಂಡಿವೆ; ಈ ವಾಣಿಜ್ಯ ಸಂಕೀರ್ಣ/ಅಂಗಡಿಗಳಲ್ಲಿ ಟೆಂಡರ್/ ಏಲಂ ಆದ ಅಂಗಡಿಗಳೆಷ್ಟು ; ಈ ಏಲಂ ನಿಂದ ನಿರೀಕ್ಷಿಸಿದ ಆದಾಯವೆಷ್ಟು; ಖಾಲಿಯಿರುವ ಅಂಗಡಿಗಳ ಸಂಖ್ಯೆಯೆಷ್ಟು ;

(ಊ) ಮಂಗಳೂರು ಮಹಾನಗರ ಪಾಲಿಕೆಯ ಅಧೀನದಲ್ಲಿರುವ ವಾಣಿಜ್ಯ ಸಂಕೀರ್ಣ/ಅಂಗಡಿಗಳ ಟೆಂಡರ್/ ಏಲಂ ನಿಯಮಗಳೇನು ; ಮಂಗಳೂರು ಮಹಾನಗರ ಪಾಲಿಕೆಯಲ್ಲಿ ಮಹಡಿವಾರು ಅಂಗಡಿಗಳ ಬಾಡಿಗೆ ಶುಲ್ಕವನ್ನು ಹೇಗೆ ನಿಗಧಿಪಡಿಸಲಾಗಿದೆ ? (ವಿವರ ನೀಡುವುದು)

## ಭೂ ಪರಿಹಾರದ ಬಗ್ಗೆ

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೭೪ (೨೧೨) ಮಾನ್ಯ ನಗರಾಭಿವೃದ್ಧಿ ಹಾಗೂ ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದವರು ಶೇಕಡ ೫೦/೫೦ ರ ಅನುಪಾತದಲ್ಲಿ ಮೊದಲು ಭೂಮಿಯನ್ನು ಸ್ವಾಧೀನ ಪಡಿಸಿಕೊಂಡು ನಂತರ ಅದನ್ನು ಭೂ ಮಾಲೀಕರಿಗೆ ಹಿಂದಿರುಗಿಸಿ ಪುನಃ ಅದೇ ಜಮೀನುಗಳಲ್ಲಿ ಅತಿಕ್ರಮವಾಗಿ ಬಡಾವಣೆ ನಿರ್ಮಿಸಿರುವ ಜಾಗಗಳ ಸರ್ವೆ ನಂಬರ್, ಅವುಗಳ ವಿಸ್ತೀರ್ಣ, ಗ್ರಾಮದ ಹೆಸರು ಹಾಗೂ ಭೂ ಮಾಲೀಕರುಗಳ ಹೆಸರು ಸಮೇತ ಮಾಹಿತಿ ಒದಗಿಸುವುದು ;

(ಆ) ಸದರಿ ಪ್ರಾಧಿಕಾರವು ಭೂ ಸ್ವಾಧೀನ ಪಡಿಸಿಕೊಳ್ಳದೆ ಹಾಗೂ ಈವರೆವಿಗೂ ಭೂ ಮಾಲೀಕರುಗಳಿಗೆ ಪರಿಹಾರ ನೀಡದೆ ರಚಿಸಿರುವ ಬಡಾವಣೆಗಳು ಯಾವುವು ; ಇವುಗಳನ್ನು ಯಾವ ಯಾವ ವರ್ಷಗಳಲ್ಲಿ ನಿರ್ಮಿಸಲಾಗಿದೆ ಹಾಗೂ ಈ ಬಡಾವಣೆಗಳ ಭೂ ಮಾಲೀಕರಿಗೆ ಶೇಕಡ ೫೦/೫೦ರ ಅನುಪಾತದಲ್ಲಿ ಯಾವ ಯಾವ ಬಡಾವಣೆಗಳಲ್ಲಿ ನಿವೇಶನ ನೀಡಲಾಗಿರುತ್ತದೆ ; (ಪೂರ್ಣ ವಿವರ ನೀಡುವುದು)

(ಇ) ೨೦೨೧ ರಿಂದ ಈವರೆವಿಗೂ ಮೂಲ ಬಡಾವಣೆಗಳಿಗೆ ಬದಲಾಗಿ ಬೇರೆ ಯಾವ ಬಡಾವಣೆಗಳಲ್ಲಿ ಯಾರ್ಯಾರಿಗೆ ಎಷ್ಟೆಷ್ಟು ಬದಲಿ ನಿವೇಶನ ನೀಡಲಾಗಿದೆ ;

(ಈ) ಭೂ ಸ್ವಾಧೀನಪಡಿಸಿಕೊಳ್ಳದೆ ವಶಪಡಿಸಿಕೊಂಡಿರುವ ಬಡಾವಣೆಗಳ ಯಾವ ಯಾವ ಭೂ ಮಾಲೀಕರಿಗೆ ಪರಿಹಾರ ನೀಡಲಾಗಿದೆ ಹಾಗೂ ಪರಿಹಾರ ನೀಡದ ಭೂ ಮಾಲೀಕರುಗಳಿಗೆ ಕೂಡಲೇ ಪರಿಹಾರ ನೀಡಲು ಕೈಗೊಳ್ಳಲಿರುವ ಕ್ರಮವೇನು ;

(ಉ) ನ್ಯಾಯಾಲಯದಲ್ಲಿರುವ ಇಂತಹ ಪ್ರಕರಣಗಳೆಷ್ಟು ಹಾಗೂ ಅವು ಯಾವ ಹಂತದಲ್ಲಿರುತ್ತವೆ ? (ವಿವರ ನೀಡುವುದು)

## ಸಿ.ಎ ನಿವೇಶನಗಳ ಬಗ್ಗೆ

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೭೫ (೨೧೩) ಮಾನ್ಯ ನಗರಾಭಿವೃದ್ಧಿ ಹಾಗೂ ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಿಂದ ಕಳೆದ ೧೦ ವರ್ಷಗಳಿಂದ ಸಿ.ಎ. ನಿವೇಶನಗಳನ್ನು ಮಂಜೂರಾತಿ ಮಾಡಲು

ಯಾವ ಯಾವ ದಿನಾಂಕಗಳಲ್ಲಿ ಎಷ್ಟೆಷ್ಟು ನಿವೇಶನಗಳಿಗೆ ಪ್ರಕಟಣೆ ಹೊರಡಿಸಲಾಗಿತ್ತು ಹಾಗೂ ಅವುಗಳಿಗೆ ಅರ್ಜಿ ಸಲ್ಲಿಸಿ, ನಿವೇಶನ ಪಡೆದಿರುವ ಫಲಾನುಭವಿಗಳ ಸಂಖ್ಯೆ ಎಷ್ಟು; ನಿವೇಶನ ನೀಡಬೇಕಾಗಿರುವ ಅರ್ಜಿದಾರರ ಸಂಖ್ಯೆ ಎಷ್ಟು ; ಇವುಗಳಲ್ಲಿ ಸಂಘ-ಸಂಸ್ಥೆಗಳಿಂದ ಬಂದ ಅರ್ಜಿಗಳೆಷ್ಟು;

(ಆ) ಪ್ರಾಧಿಕಾರವು ಸಿ.ಎ. ನಿವೇಶನಗಳನ್ನು ಯಾರು ಯಾರಿಗೆ ಯಾವ ಯಾವ ಉದ್ದೇಶಕ್ಕಾಗಿ ಮಂಜೂರಾತಿ ನೀಡಲಾಗಿದೆ ಹಾಗೂ ನಿವೇಶನ ಪಡೆದ ನಂತರ, ಪ್ರಕಟಿತ ಉದ್ದೇಶಕ್ಕೆ ಬಳಸದೆ ಬೇರೆ ಉದ್ದೇಶಕ್ಕೆ ಬಳಸಿ, ನಿಯಮ ಉಲ್ಲಂಘನೆ ಮಾಡಿರುವವರ ಪೂರ್ಣ ಮಾಹಿತಿ ಒದಗಿಸುವುದು ;

(ಇ) ಉಲ್ಲಂಘನೆ ಮಾಡಿದವರ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮವೇನು ?

## ರೈತರ ಸಾಲದ ಬಗ್ಗೆ

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೭೬ (೨೧೪) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಸಹಕಾರ ಸಂಘಗಳ ಮೂಲಕ ರೈತರಿಗೆ ಯಾವ ಯಾವ ಮಾದರಿಯ ಸಾಲಗಳನ್ನು ನೀಡಲಾಗುತ್ತಿದೆ ; (ಪೂರ್ಣ ವಿವರ ನೀಡುವುದು)

(ಆ) ಮೈಸೂರು ಜಿಲ್ಲೆಯ ಯಾವ ಯಾವ ತಾಲ್ಲೂಕುಗಳಲ್ಲಿ ಎಷ್ಟೆಷ್ಟು ರೈತರು ಸದರಿ ಸಾಲಗಳನ್ನು ಪಡೆದು ಕೊಂಡಿರುತ್ತಾರೆ ಹಾಗೂ ಸುಸ್ಥಿದಾರರಾಗಿರುತ್ತಾರೆ ;

(ಇ) ಇಂತಹ ಸಾಲ ಸೌಲಭ್ಯಗಳನ್ನು ಪಡೆದು ಸುಸ್ಥಿದಾರರಾಗಿರುವ ರಾಜ್ಯದ ಎಲ್ಲಾ ರೈತರ ಸಾಲ ಮನ್ನಾ ಮಾಡಿ ಬಡ ರೈತರಿಗೆ ಅನುಕೂಲ ಮಾಡಲು ಸರ್ಕಾರ ಕೈಗೊಳ್ಳುವ ಕ್ರಮವೇನು ?

## ಕೈಗಾರಿಕಾಭಿವೃದ್ಧಿ ಬಗ್ಗೆ

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೭೭ (೨೧೫) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರು ಕಳೆದ ಒಂದು ವರ್ಷದಿಂದ ಯಾವ ಯಾವ ದೇಶಗಳಿಗೆ ಭೇಟಿ ನೀಡಿ, ರಾಜ್ಯದ ಕೈಗಾರಿಕೆ ಅಭಿವೃದ್ಧಿ ಹೊಂದಲು ಶ್ರಮಿಸಿರುತ್ತಾರೆ ;

(ಆ) ಕಳೆದ ಒಂದು ವರ್ಷದಿಂದೀಚೇಗೆ ರಾಜ್ಯದಲ್ಲಿ ಎಷ್ಟು ಕೈಗಾರಿಕೆಗಳನ್ನು ಸ್ಥಾಪಿಸಲಾಗಿದೆ ಹಾಗೂ ಮುಂದೆ ಸ್ಥಾಪಿಸಲು ಯಾವ ಯಾವ ದೇಶದ ಬಂಡವಾಳ ಶಾಹಿಗಳು ಯಾವ ಯಾವ ರೀತಿಯ ಕೈಗಾರಿಕೆ ಸ್ಥಾಪಿಸಲು ಮುಂದೆ ಬಂದಿರುತ್ತಾರೆ ಹಾಗೂ ಯಾವ ಯಾವ ಕೈಗಾರಿಕೆಗಳಿಗೆ ಎಷ್ಟೆಷ್ಟು ಬಂಡವಾಳ ಹೂಡಲಾಗುವುದು ?

(ಇ) ಈ ಕೈಗಾರಿಕೆಗಳನ್ನು ಯಾವ ಯಾವ ಜಿಲ್ಲೆಗಳಲ್ಲಿ ಸ್ಥಾಪಿಸಲು ತೀರ್ಮಾನಿಸಲಾಗಿದೆ ;

(ಈ) ಕೇವಲ ಒಂದೇ ನಗರದಲ್ಲಿ ಕೈಗಾರಿಕೆ ಸ್ಥಾಪಿಸದೆ ಬೆಂಗಳೂರಿನಿಂದ ೧೦೦ ರಿಂದ ೧೫೦ ಕೀ. ಮೀಟರ್ ವ್ಯಾಪ್ತಿಯ ತಾಲ್ಲೂಕುಗಳಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು ?

## ಪಾರ್ಕ್ ನಿರ್ಮಾಣಕ್ಕೆ ಸಂಬಂಧಪಟ್ಟ ಬಗ್ಗೆ

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೭೮ (೨೫೬) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರಿನ ಸಾರ್ವಜನಿಕ ವಾಹನಗಳ ಹೆಚ್ಚಳ ಹಾಗೂ ಇತರೆ ಕಾರಣಗಳಿಂದ ಪರಿಸರ ಮಾಲಿನ್ಯ ಅತ್ಯಂತ ಕಳಪೆ ಗುಣಮಟ್ಟಕ್ಕೆ ಇಳಿದಿರುವುದು ನಿಜವಲ್ಲವೇ ;

(ಆ) ನಿಜವಿದ್ದಲ್ಲಿ, ಕಳೆದ ೭೫ ವರ್ಷಗಳಿಂದ ಆಡಳಿತ ನಡೆಸಿರುವ ಸರ್ಕಾರಗಳು ಬ್ರಿಟಿಷ್ ಕಾಲದ ಲಾಲ್‌ಬಾಗ್ ಮತ್ತು ಕಬ್ಬನ್ ಪಾರ್ಕ್ ಮಾದರಿಯ ಬೃಹತ್ ಪಾರ್ಕ್‌ಗಳನ್ನು ನಗರದ ನಾಲ್ಕು ದಿಕ್ಕುಗಳಲ್ಲಿ ನಿರ್ಮಿಸಲು ವಿಫಲವಾಗಿರುವುದು ಸಹ ಪರಿಸರ ಮಾಲಿನ್ಯಕ್ಕೆ ಕಾರಣವಲ್ಲವೇ ;

(ಇ) ಈ ಹಿಂದಿನ ಸಮ್ಮಿಶ್ರ ಸರ್ಕಾರದ ಮುಖ್ಯಮಂತ್ರಿಗಳು ಬೆಂಗಳೂರಿನ ಬೃಹತ್ ಪಾರ್ಕ್‌ಗಳನ್ನು ನಗರದ ನಾಲ್ಕು ದಿಕ್ಕುಗಳಲ್ಲೂ ಸಹ ನಿರ್ಮಿಸಿ ಪರಿಸರ ಮಾಲಿನ್ಯ ಕಡಿಮೆಗೊಳಿಸುವ ಜೊತೆಗೆ ನಗರದ ಹೊರವಲಯದ ಕೋಟ್ಯಾಂತರ ಜನರಿಗೆ ಉತ್ತಮ ಗಾಳಿ ದೊರೆಯುವಂತೆ ಮಾಡುವ ಯೋಜನೆ ರೂಪಿಸಿದ್ದು ನಿಜವಲ್ಲವೇ ; (ಪೂರ್ಣ ಮಾಹಿತಿ ಒದಗಿಸುವುದು)

(ಈ) ಕೇವಲ ಹೊಸ ಬಡಾವಣೆಗಳನ್ನು ಮಾತ್ರ ನಿರ್ಮಿಸಿ ಹೆಚ್ಚು ಹಣಸಂಗ್ರಹಕ್ಕೆ ಒತ್ತು ನೀಡುತ್ತಿರುವ ಸರ್ಕಾರ ಕೂಡಲೇ ಬೆಂಗಳೂರಿನ ನಾಲ್ಕು ದಿಕ್ಕುಗಳಲ್ಲೂ ಸಹ ಮೇಲ್ಕಂಡಂತೆ ಬೃಹತ್ ಪಾರ್ಕ್‌ಗಳನ್ನು ನಿರ್ಮಿಸಲು ಕೈಗೊಳ್ಳುವ ಕ್ರಮಗಳಾವುವು ?

## ತೋಟಗಾರಿಕೆ ಬೆಳೆಗಳನ್ನು ಬೆಳೆಯುವ ಪ್ರದೇಶ ಮತ್ತು ಪರಿಹಾರದ ಬಗ್ಗೆ

**ಶ್ರೀ ಕೆ.ಎಸ್. ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೭೯ (೨೦೬) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ತೋಟಗಾರಿಕೆ ಬೆಳೆಗಳ ಪ್ರದೇಶ ಎಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ತೋಟಗಾರಿಕೆ ಬೆಲೆಗಳನ್ನು ಸಂಸ್ಕರಣ ಮತ್ತು ಮೌಲ್ಯವರ್ಧನ ಮಾಡಲು ಇರುವ ಸರ್ಕಾರದ ಯೋಜನೆಗಳು ಯಾವುವು ; (ಜಿಲ್ಲಾವಾರು ಸಮಗ್ರ ವರದಿ ನೀಡುವುದು)

(ಇ) ಕಳೆದ ವರ್ಷ ಬರ ಸಂದರ್ಭದಲ್ಲಿ ತೋಟಗಾರಿಕೆ ಬೆಳೆ ಬೆಳೆಯುವ ರೈತರಿಗೆ ವಿತರಿಸಲಾಗಿರುವ ಪರಿಹಾರದ ಮೊತ್ತ ಎಷ್ಟು ? (ಜಿಲ್ಲಾವಾರು ವಿವರ ನೀಡುವುದು)

## ರಾಜ್ಯದಲ್ಲಿ ಅತಿ ಹೆಚ್ಚು ಗಣಿಗಾರಿಕೆ ಹೊಂದಿರುವ ಜಿಲ್ಲೆಯ ಬಗ್ಗೆ

**ಶ್ರೀ ಕೆ.ಎಸ್. ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೮೦ (೨೦೫) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಅತಿ ಹೆಚ್ಚು ಗಣಿಗಾರಿಕೆ ಹೊಂದಿರುವ ಜಿಲ್ಲೆ ಯಾವುದು ;

(ಆ) ಈ ಜಿಲ್ಲೆಯಿಂದ ರಾಜ್ಯ ಸರ್ಕಾರಕ್ಕೆ ಬರುತ್ತಿರುವ ರಾಜಸ್ವ ಎಷ್ಟು ;

(ಇ) ಡಿಎಂಎಫ್ ಅಡಿಯಲ್ಲಿ ಗಣಿಭಾದಿತ ಜಿಲ್ಲೆಗಳಲ್ಲಿ ಅಭಿವೃದ್ಧಿ ಪಡಿಸುವ ಕಾಮಗಾರಿಗಳು ಯಾವುವು ? (ಜಿಲ್ಲಾವಾರು ವಿವರದೊಂದಿಗೆ ಮಾಹಿತಿ ನೀಡುವುದು)

## ನೋಂದಣಿಯಾದ ಸಣ್ಣ ಕೈಗಾರಿಕೆಗಳ ಬಗ್ಗೆ

**ಶ್ರೀ ಕೆ.ಎಸ್. ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೮೧ (೨೦೩) ಮಾನ್ಯ ಸಣ್ಣ ಕೈಗಾರಿಕೆ ಹಾಗೂ ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ನೋಂದಣಿಯಾಗಿರುವ ಒಟ್ಟು ಸಣ್ಣ ಕೈಗಾರಿಕೆಗಳ ಸಂಖ್ಯೆ ಎಷ್ಟು ;

(ಆ) ಈ ನೋಂದಣಿಯಾದ ಸಣ್ಣ ಕೈಗಾರಿಕೆಗಳಲ್ಲಿ ಉದ್ಯೋಗ ಮಾಡುತ್ತಿರುವವರ ಸಂಖ್ಯೆ ಎಷ್ಟು ;

(ಇ) ಸಣ್ಣ ಕೈಗಾರಿಕೆಗಳಿಗೆ ಒಂದು ಯೂನಿಟ್‌ಗೆ ವಿದ್ಯುತ್ ದರವನ್ನು ಎಷ್ಟು ನಿಗದಿಪಡಿಸಲಾಗಿದೆ ಹಾಗೂ ಯಾವ ಯಾವ ಹಂತದಲ್ಲಿ ಯೂನಿಟ್‌ಗಳ ದರ ನಿಗದಿಪಡಿಸಲಾಗಿದೆ ? (ವಿವರ ಒದಗಿಸುವುದು)

## ಎ.ಪಿ.ಎಂ.ಸಿ. ಗಳಲ್ಲಿ ರೈತರಿಗೆ ನೀಡುವ ಯೋಜನೆಗಳ ಬಗ್ಗೆ

**ಶ್ರೀ ಕೆ.ಎಸ್. ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೮೨ (೨೦೪) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಇರುವ ಎ.ಪಿ.ಎಂ.ಸಿ ಗಳಲ್ಲಿ ರೈತರಿಗೆ ಯಾವ ಯಾವ ಅನುಕೂಲಗಳನ್ನು ಒದಗಿಸಲಾಗುತ್ತಿದೆ ; (ವಿವರ ಒದಗಿಸುವುದು)

(ಆ) ಎ.ಪಿ.ಎಂ.ಸಿ ಗಳಿಗೆ ರೈತರು ತಂದ ಉತ್ಪನ್ನಗಳನ್ನು ದಾಸ್ತಾನು ಮಾಡಲು ಮತ್ತು ಮೌಲ್ಯವರ್ಧನೆ ಮಾಡಲು ಯಾವ ವ್ಯವಸ್ಥೆಗಳನ್ನು ಮಾಡಲಾಗುತ್ತಿದೆ ;

(ಇ) ರಾಜ್ಯದಲ್ಲಿ ಒಟ್ಟು ಎಷ್ಟು ಎ.ಪಿ.ಎಂ.ಸಿ ಗಳಿವೆ; ಆ ಎ.ಪಿ.ಎಂ.ಸಿ ಗಳಿಂದ ಸರ್ಕಾರಕ್ಕೆ ವಾರ್ಷಿಕವಾಗಿ ಎಷ್ಟು ಹಣ ಸಂಗ್ರಹವಾಗುತ್ತಿದೆ ? (ಎ.ಪಿ.ಎಂ.ಸಿ ವಾರು ವಿವರ ಕೊಡುವುದು)

## ರಾಜ್ಯದಲ್ಲಿ ಗಣಿ ಮತ್ತು ಭೂ ವಿಜ್ಞಾನ ಇಲಾಖೆಯಿಂದ ಜಪ್ತಿ ಮಾಡಿರುವ ಅದಿರು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೧೮೩ (೧೫೬) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಗಣಿ ಮತ್ತು ಭೂ ವಿಜ್ಞಾನ ಇಲಾಖೆಯಿಂದ ಜಪ್ತಿ ಮಾಡಿರುವ ಕಬ್ಬಿಣದ ಅದಿರು ಎಷ್ಟು (ಟನ್‌ಗಳಲ್ಲಿ) ; ಕಳೆದ ೨೦ ವರ್ಷಗಳಲ್ಲಿ ಜಪ್ತಿ ಮಾಡಲಾಗಿರುವ ಕಬ್ಬಿಣದ ಅದಿರು ಎಷ್ಟು ; ಇದರಲ್ಲಿ ಸರ್ಕಾರದ ಹರಾಜು ಪ್ರಕ್ರಿಯೆಯಲ್ಲಿ ಮಾರಾಟವಾಗಿರುವ ಕಬ್ಬಿಣದ ಅದಿರು ಎಷ್ಟು ; (ಟನ್‌ಗಳಲ್ಲಿ ಮಾಹಿತಿ ನೀಡುವುದು)

(ಆ) ಸರ್ಕಾರದ ವತಿಯಿಂದ ಹರಾಜು ಪ್ರಕ್ರಿಯೆ ಕೈಗೊಳ್ಳದೆ ಉಳಿದ ಕಬ್ಬಿಣದ ಅದಿರು ಯಾವ ಸ್ಟಾಕ್ ಯಾರ್ಡ್ (Stock Yard) ನಲ್ಲಿ ಸಂಗ್ರಹಿಸಲಾಗಿದೆ ; ಎಷ್ಟು ವರ್ಷಗಳಿಂದ ಸಂಗ್ರಹಿಸಲಾಗಿರುತ್ತದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ೨೦೧೨ನೇ ಸಾಲಿನಲ್ಲಿ ಕಬ್ಬಿಣದ ಅದಿರು ರಫ್ತು ಮಾಡಲು ಗಣಿಗಾರಿಕೆ ಕಂಪನಿಗಳಿಗೆ ನಿಷೇಧ ಹೇರಲಾಗಿದ್ದು, ತದನಂತರ ಸರ್ವೋಚ್ಚ ನ್ಯಾಯಾಲಯವು ಮೇ, ೨೦೨೨ರಲ್ಲಿ ಸದರಿ ನಿಷೇಧವನ್ನು ತೆರವುಗೊಳಿಸಿ ಬಳ್ಳಾರಿ, ಚಿತ್ರದುರ್ಗ ಮತ್ತು ತುಮಕೂರು ಜಿಲ್ಲೆಗಳ ಗಣಿಗಾರಿಕೆ ಕಂಪನಿ ಮಾಲೀಕರಿಗೆ ಕಬ್ಬಿಣದ ಅದಿರು ರಫ್ತು ಮಾಡಲು ಅವಕಾಶ ಮಾಡಿದ್ದು, ಸರ್ವೋಚ್ಚ ನ್ಯಾಯಾಲಯದ ಆದೇಶದ ನಂತರವೂ ಅನೇಕ ವರ್ಷಗಳು ಕಳೆದರೂ ಈ ಅದಿರು ಹರಾಜು ಮಾಡದಿರುವುದು ಸರ್ಕಾರದ ನಷ್ಟಕ್ಕೆ ಕಾರಣವಲ್ಲವೇ ; ಈ ನಷ್ಟದಲ್ಲಿ ಭಾಗಿಯಾಗಿರುವ ಅಧಿಕಾರಿಗಳ ವಿರುದ್ಧ ಸರ್ಕಾರ ಏನು ಕ್ರಮ ಕೈಗೊಂಡಿದೆ ; (ಮಾಹಿತಿ ನೀಡುವುದು)

(ಈ) ರಾಜ್ಯದಲ್ಲಿ ಯಾವ ಯಾವ ಅದಿರುಗಳು ಲಭ್ಯವಿದೆ ? (ಮಾಹಿತಿ ನೀಡುವುದು)

## ಸಣ್ಣ ಕೈಗಾರಿಕೆಗಳಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸುವ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೮೪ (೧೫೫) ಮಾನ್ಯ ಸಣ್ಣ ಕೈಗಾರಿಕೆ ಹಾಗೂ ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರಿನ ಪೀಣ್ಯ ಕೈಗಾರಿಕಾ ಪ್ರದೇಶದಲ್ಲಿ ಮೂಲಭೂತ ಸೌಲಭ್ಯಗಳಿಲ್ಲದೆ, ಕೈಗಾರಿಕೆಗಳ ದೈನಂದಿನ ಕಾರ್ಯಚರಣೆಗೆ ಅಡಚಣೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಕೈಗಾರಿಕಾ ಪ್ರದೇಶದಲ್ಲಿ ಘನತ್ಯಾಜ್ಯ ವಿಲೇವಾರಿ (ಕೈಗಾರಿಕಾ ತ್ಯಾಜ್ಯ), ಸಾರ್ವಜನಿಕ ಸಂಪರ್ಕ (ಬಸ್ ಸಂಪರ್ಕ, ಮೆಟ್ರೋ ಸಂಪರ್ಕ, ಇತ್ಯಾದಿ)ಗಳನ್ನು ಸುವ್ಯವಸ್ಥಿತವಾಗಿ ಕೈಗೊಳ್ಳಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ;

(ಇ) ಸದರಿ ಕೈಗಾರಿಕಾ ಪ್ರದೇಶದಲ್ಲಿ ಮಾನವ ಮತ್ತು ಕೈಗಾರಿಕೆಗಳ ಸುರಕ್ಷತೆಗಾಗಿ ಸಿ.ಸಿ.ಟಿ.ವಿ. ಕ್ಯಾಮರಾಗಳನ್ನು ಅಳವಡಿಸಲಾಗಿದೆಯೇ ; ಹಾಗಿದ್ದಲ್ಲಿ, ಎಷ್ಟು ಕ್ಯಾಮರಾಗಳನ್ನು ಅಳವಡಿಸಲಾಗಿದೆ ಮತ್ತು ಎಷ್ಟು ಕಾರ್ಯನಿರ್ವಹಿಸುತ್ತಿವೆ ; ಪೀಣ್ಯ ಕೈಗಾರಿಕಾ ಪ್ರದೇಶದಲ್ಲಿ ಫುಟ್‌ಪಾತ್‌ಗಳ ನಿರ್ಮಾಣ ಮಾಡಲಾಗಿದೆಯೇ ಮತ್ತು ಸಾರ್ವಜನಿಕರ ಉಪಯೋಗಕ್ಕಾಗಿ ಸಾರ್ವಜನಿಕ ಶೌಚಾಲಯಗಳನ್ನು ನಿರ್ಮಿಸಲಾಗಿದೆಯೇ ; ನಿರ್ಮಿಸಿದ್ದಲ್ಲಿ, ಎಷ್ಟು ಶೌಚಾಲಯಗಳನ್ನು ನಿರ್ಮಿಸಲಾಗಿದೆ ;

(ಈ) ಸದರಿ ಕೈಗಾರಿಕಾ ಪ್ರದೇಶದ ಅಭಿವೃದ್ಧಿಯಲ್ಲಿ ಸರ್ಕಾರದ ಮತ್ತು ಖಾಸಗಿ ಕೈಗಾರಿಕೆ ವ್ಯಾಪಾರಸ್ಥರ ಪಾಲು ಎಷ್ಟು ಹಾಗೂ ಸರ್ಕಾರದ ವತಿಯಿಂದ ಈ ಖಾಸಗಿ ಕೈಗಾರಿಕೆಗಳನ್ನು ಹೇಗೆ ನಿಯಂತ್ರಿಸಲಾಗುತ್ತಿದೆ ಮತ್ತು ಈ ಖಾಸಗಿ ಕೈಗಾರಿಕೆಗಳು ಅನುಸರಿಸುತ್ತಿರುವ ಮಾನದಂಡಗಳೇನು ;

(ಉ) ಸರ್ಕಾರವು ೨೦೧೩ನೇ ಸಾಲಿನಲ್ಲಿ ಎಲೆಕ್ಟ್ರಾನಿಕ್ ಸಿಟಿ ಕೈಗಾರಿಕಾ ಪ್ರದೇಶಕ್ಕೆ "ELCITA" ಎಂಬ ಪ್ರಾಧಿಕಾರ ಸ್ಥಾಪಿಸಿದ್ದು, ಪೀಣ್ಯ ಕೈಗಾರಿಕಾ ಪ್ರದೇಶವನ್ನು ೧೯೭೦ನೇ ಸಾಲಿನಲ್ಲಿ ಸ್ಥಾಪಿಸಲಾಗಿದ್ದು, ಈವರೆವಿಗೂ ಈ ಪ್ರದೇಶಕ್ಕೆ ಪ್ರಾಧಿಕಾರ ರಚನೆ ಮಾಡದಿರಲು ಕಾರಣಗಳೇನು ?

## ಬೆಳಗಾವಿ ಕೈಗಾರಿಕಾ ಪ್ರದೇಶಾಭಿವೃದ್ಧಿ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೧೮೫ (೧೫೭) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಭಾರತದ "Hydraulic Capital of India" ಎಂದು ಪ್ರಖ್ಯಾತಿ ಪಡೆದಿರುವ ಬೆಳಗಾವಿ ನಗರದಲ್ಲಿ ಸ್ಥಾಪಿತವಾಗಿರುವ ಕೈಗಾರಿಕಾ ಪ್ರದೇಶಗಳಲ್ಲಿ ಒಂದಾದ ಉದ್ಯಮ್‌ಭಾಗ್ ಕೈಗಾರಿಕಾ ಪ್ರದೇಶದಲ್ಲಿ ಸುಮಾರು ವರ್ಷಗಳಿಂದ ಮೂಲಭೂತ ಸೌಕರ್ಯಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಜಿಲ್ಲೆಯು ಕರ್ನಾಟಕ ರಾಜ್ಯದ ನಾಲ್ಕನೇ ಅತಿ ದೊಡ್ಡ ನಗರ ಮತ್ತು ಎರಡನೇ ಅತೀ ದೊಡ್ಡ ರಫ್ತು ಜಿಲ್ಲೆಯಾಗಿದ್ದು, ಇಲ್ಲಿ ಸರಿಯಾದ ಒಳಚರಂಡಿ ವ್ಯವಸ್ಥೆ, ರಸ್ತೆಗಳು ಮತ್ತು ಇನ್ನಿತರೆ ಸಮಸ್ಯೆಗಳು ಇದ್ದು, ಹೆಚ್ಚಿನ ಸಂಖ್ಯೆಯಲ್ಲಿ ಕೈಗಾರಿಕೆಗಳು ಇರುವ ಈ ಪ್ರದೇಶಕ್ಕೆ ಉತ್ತಮವಾದ ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವುದು ಸರ್ಕಾರದ ಜವಾಬ್ದಾರಿಯಾಗಿರುವುದಿಲ್ಲವೇ ;

(ಇ) ಕಡಿಮೆ ವಿದ್ಯುತ್ ಸುಂಕಗಳು ಮತ್ತು ಸುಲಭ ಬ್ಯಾಂಕ್ ಸಾಲ ದೊರೆಯುತ್ತಿರುವುದರಿಂದ ಸುಮಾರು ೧೫೦೦ weaving units ಗಳು ಮಹಾರಾಷ್ಟ್ರ ರಾಜ್ಯಕ್ಕೆ ಈಗಾಗಲೇ ಹಸ್ತಾಂತರವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದನ್ನು ತಡೆಗಟ್ಟಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಈ) ಕಳೆದ ೧೦ ವರ್ಷಗಳಲ್ಲಿ ಕೆ.ಐ.ಎ.ಡಿ.ಬಿ. ಸಂಸ್ಥೆ ವತಿಯಿಂದ ಎಷ್ಟು ಕೈಗಾರಿಕಾ ಪ್ರದೇಶಗಳನ್ನು ಎಷ್ಟು ಎಕರೆ ಭೂಮಿಯಲ್ಲಿ ಅಭಿವೃದ್ಧಿ ಪಡಿಸಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಉ) ಈ ಕೈಗಾರಿಕಾ ಪ್ರದೇಶಗಳು ನೀರಿನ ಸಂಪನ್ಮೂಲಗಳನ್ನು ಹೊಂದಿವೆಯೇ ಹಾಗೂ ಈ ಕೈಗಾರಿಕಾ ಪ್ರದೇಶಗಳಲ್ಲಿ ಯಾವ ರೀತಿಯ ಘನತ್ಯಾಜ್ಯ, ಕೈಗಾರಿಕಾ ತ್ಯಾಜ್ಯ ವಿಲೇವಾರಿಯನ್ನು ಕೈಗೊಳ್ಳಲಾಗುತ್ತಿದೆ ? (ಮಾಹಿತಿ ನೀಡುವುದು)

## ಖಾನಾಪುರ ಪಟ್ಟಣ ಪಂಚಾಯಿತಿಯಿಂದ ಮೂಲಸೌಕರ್ಯಗಳನ್ನು ಒದಗಿಸುವ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೧೮೬ (೧೫೪) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ನಗರಾಭಿವೃದ್ಧಿ ಇಲಾಖೆ ವ್ಯಾಪ್ತಿಗೆ ಒಳಪಡುವ ಖಾನಾಪುರ ಪಟ್ಟಣ ಪಂಚಾಯತ್ ವ್ಯಾಪ್ತಿಯಲ್ಲಿ ಬರುವ ರಸ್ತೆಗಳು, ಒಳಚರಂಡಿ, ಬೀದಿ ದೀಪ, ಘನತ್ಯಾಜ್ಯ ವಿಲೇವಾರಿ ನಿರ್ವಹಣೆಯನ್ನು ಸರಿಯಾದ ರೀತಿಯಲ್ಲಿ ಕೈಗೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಕುರಿತು ಯಾವ ಕ್ರಮ ಕೈಗೊಳ್ಳಲಾಗಿದೆ ;

(ಆ) ಖಾನಾಪುರ ಪಟ್ಟಣ ಪಂಚಾಯತ್ ವ್ಯಾಪ್ತಿಯ ಒಳಚರಂಡಿ ನೀರನ್ನು ಮಲಪ್ರಭಾ ನದಿಗೆ ಹರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರವು ಮಲಪ್ರಭಾ ನದಿಯ ಸ್ವಚ್ಛತೆಯನ್ನು ಮತ್ತು ಮೀನು/ ಜಾನುವಾರುಗಳು ರೋಗಕ್ಕೆ ತುತ್ತಾಗದಂತೆ ಕಾಪಾಡುವಲ್ಲಿ ಯಾವ ಕ್ರಮ ಕೈಗೊಂಡಿದೆ ?

## ಬೆಳಗಾವಿ ನಗರದಲ್ಲಿ ಸ್ಮಾರ್ಟ್ ಸಿಟಿ ಯೋಜನೆ ಅನುಷ್ಠಾನದ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೧೮೭ (೧೫೩) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಳಗಾವಿ ನಗರದಲ್ಲಿ ದಿನಾಂಕ : ೧೨-೦೬-೨೦೨೪, ೧೩-೦೬-೨೦೨೪ ಮತ್ತು ೧೪-೦೬-೨೦೨೪ ರಂದು (೩ ದಿನಗಳು) ಸುರಿದ ಮಳೆಯಿಂದ ಬಹುತೇಕ ಪ್ರದೇಶಗಳಲ್ಲಿ ವಾಣಿಜ್ಯ ಸಂಕೀರ್ಣಗಳು ಮತ್ತು ಮನೆಗಳು ಜಲಾವೃತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸ್ಮಾರ್ಟ್ ಸಿಟಿಯ ಯೋಜನೆಯಲ್ಲಿ ೨೦೧೯ ರಿಂದ ೨೦೨೩ ರವರೆಗೆ ನಡೆದ ಕಾಮಗಾರಿಗಳು ಕಳಪೆ/ ಅವೈಜ್ಞಾನಿಕವಾಗಿರುವುದರಿಂದ ಈ ರೀತಿಯ ಅವಾಂತರಗಳು ಆಗುತ್ತಿರುವುದು ಅಧಿಕಾರಿಗಳ ನಿರ್ಲಕ್ಷ್ಯ ಮತ್ತು ಭ್ರಷ್ಟಾಚಾರದ ಕಾರಣದಿಂದಲ್ಲವೇ ;

(ಇ) ಹಾಗಿದ್ದಲ್ಲಿ, ಅಂತಹ ಅಧಿಕಾರಿಗಳ ವಿರುದ್ಧ ಕಾನೂನು ರೀತ್ಯಾ ಕ್ರಮ ಕೈಗೊಳ್ಳಲಾಗುವುದೇ ?

## ರಾಜ್ಯದಲ್ಲಿನ ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿ, ನಗರ ಸ್ಥಳೀಯ ಸಂಸ್ಥೆಗಳ ಅಧ್ಯಕ್ಷ, ಉಪಾಧ್ಯಕ್ಷ ಆಯ್ಕೆ ವಿಳಂಬವಾಗುತ್ತಿರುವ ಕುರಿತು

**ಶ್ರೀ ಪಿ.ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೮೮ (೧೫೮) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿ, ನಗರ ಸ್ಥಳೀಯ ಸಂಸ್ಥೆಗಳ ಅಧ್ಯಕ್ಷ, ಉಪಾಧ್ಯಕ್ಷ ಸ್ಥಾನದ ಮೀಸಲಾತಿ ನಿಗದಿ ಆಗದಿರಲು ಕಾರಣಗಳೇನು ;

(ಆ) ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿಗಳಲ್ಲಿ ಅಧಿಕಾರವಿಲ್ಲದೆ, ನಗರಗಳ ಅಭಿವೃದ್ಧಿ ಕಾರ್ಯಗಳಿಗೆ ಹಿನ್ನಡೆಯಾಗುತ್ತಿದ್ದು, ಮತದಾರರ ಸಮಸ್ಯೆಗೆ ಸ್ಪಂದಿಸಲು ಸಾಧ್ಯವಾಗದೆ ಚುನಾಯಿತ ಪ್ರತಿನಿಧಿಗಳು ಮುಜುಗರಕ್ಕೀಡಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಅಧ್ಯಕ್ಷ–ಉಪಾಧ್ಯಕ್ಷರಿಲ್ಲದ ಸಮಯದಲ್ಲಿ ಅನುದಾನ ಸದ್ಬಳಕೆ ಸರಿಯಾಗಿ ಮಾಡುವ ನಿಟ್ಟಿನಲ್ಲಿ ಮತ್ತು ನಗರ ಅಭಿವೃದ್ಧಿ ಮಾಡುವ ನಿಟ್ಟಿನಲ್ಲಿ ಸರ್ಕಾರ ಕೈಗೊಳ್ಳುವ ಕಾರ್ಯ ಯೋಜನೆಗಳೇನು ? (ಮಾಹಿತಿ ಒದಗಿಸುವುದು)

## ಗುಡಿ ಕೈಗಾರಿಕೆಗಳಲ್ಲಿ ಬರುವ ಕೈಮಗ್ಗ ನೇಕಾರರ ಕುರಿತು ಮಾಹಿತಿ ನೀಡುವ ಬಗ್ಗೆ

**ಶ್ರೀ ಪಿ.ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೯ (೧೫೯) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯವಷ್ಟೇ ಅಲ್ಲದೆ ಅಂತರರಾಷ್ಟ್ರೀಯ ಮಟ್ಟದಲ್ಲಿ ಕೈಮಗ್ಗ ನೇಯ್ಗೆಯು ಅತ್ಯಂತ ಶ್ರೇಷ್ಠತೆಯನ್ನು ಪಡೆದಿದ್ದು, ಪುರಾತನ ಪಾರಂಪರಿಕ ವೃತ್ತಿ ಕಣ್ಮರೆಯಾಗುತ್ತಿರುವ ಆತಂಕ ನೇಕಾರರಲ್ಲಿ ಹೆಚ್ಚಾಗಿದ್ದು, ನೇಕಾರರಿಗೆ ರಾಜ್ಯ ಸರ್ಕಾರ ಪ್ರಸ್ತುತ ನೀಡುತ್ತಿರುವ ಸೌಲಭ್ಯಗಳಾವುವು ; ಅವುಗಳನ್ನು ಕಟ್ಟಕಡೆಯ ನೇಕಾರರಿಗೆ ತಲುಪಿಸಲಾಗಿದೆಯೇ ;

(ಆ) ಸರ್ಕಾರದ ನಿರ್ಲಕ್ಷ್ಯದಿಂದ ಹೈಟೆಕ್ ಮಗ್ಗಗಳ ಭರಾಟೆಯಲ್ಲಿ ಅತ್ಯಂತ ಹಿಂದುಳಿದ ಹಾಗೂ ಅನ್ಯ ಉದ್ಯೋಗ ಅರಿಯದ ಕೈಮಗ್ಗ ನೇಕಾರರಿಗೆ ಸರ್ಕಾರ ಆದ್ಯತೆ ನೀಡದಿರುವುದರಿಂದ ಮತ್ತು ಕಚ್ಚಾ ವಸ್ತುಗಳು ರಿಯಾಯಿತಿ ದರದಲ್ಲಿ ಪೂರೈಕೆಯಾಗದ ಕಾರಣ ಕೈಮಗ್ಗದ ಉದ್ಯಮ ಹಿನ್ನಡೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ರಾಜ್ಯದಲ್ಲಿ ಗುಡಿ ಕೈಗಾರಿಕೆಗಳ ಪೈಕಿ ಬರುವ ಕೈಮಗ್ಗ ನೇಕಾರರನ್ನು ಹಾಗೂ ಅವರಿಗೆ ಸಹಾಯ ಮಾಡುವ ಉಪಕಸುಬುದಾರರನ್ನು ಕಾರ್ಮಿಕರೆಂದು ಪರಿಗಣಿಸಿ, ಕಟ್ಟಡ ಕಾರ್ಮಿಕ ಮಾದರಿಯ ಕಾರ್ಮಿಕ ಸೌಲಭ್ಯಗಳನ್ನು ಒದಗಿಸಬೇಕೆಂದು ನೇಕಾರರು ಹಲವಾರು ವರ್ಷಗಳಿಂದ ಬೇಡಿಕೆ ಸಲ್ಲಿಕೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಸರ್ಕಾರ ಈ ಬಗ್ಗೆ ಕೈಗೊಂಡ ಕ್ರಮಗಳೇನು ; (ಮಾಹಿತಿ ನೀಡುವುದು)

(ಈ) ಕೈಮಗ್ಗ ನೇಕಾರಿಕೆಯಲ್ಲಿ ತೊಡಗಿರುವ ವೃತ್ತಿ ಬಾಂಧವರು ನೂಲು, ಎಳೆನೇಯ್ಗೆಯಂಥ ಸೂಕ್ಷ್ಮ ಕೆಲಸದಿಂದಾಗಿ ವೃದ್ಧಾಪ್ಯದಲ್ಲಿ ಕಾಡುವ ಅನೇಕ ರೋಗಗಳಿಗೆ ಉಪಚರಿಸುವಂತಹ ಕಾರ್ಯಕ್ರಮಗಳನ್ನು ಸರ್ಕಾರ ಹಮ್ಮಿಕೊಂಡಿದೆಯೇ ; ಹಾಗಿದ್ದಲ್ಲಿ, ಅವು ಯಾವುವು ? (ಜಿಲ್ಲಾವಾರು ಮಾಹಿತಿ ನೀಡುವುದು)

## ರಾಜ್ಯಾದ್ಯಂತ ಹಾಲು ಉತ್ಪಾದಕರಿಗೆ ಹೆಚ್ಚುವರಿ ಹಣ ನೀಡುವ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೧೯೦ (೨೨೮) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯಾದ್ಯಂತ ಹಾಲು ಉತ್ಪಾದಕರಿಗೆ ಎಷ್ಟು ತಿಂಗಳಿಂದ ಹೆಚ್ಚುವರಿಯಾಗಿ ನೀಡುವ ಹಣವನ್ನು ಬಾಕಿ ಉಳಿಸಿಕೊಂಡಿದೆ ; (ವಿವರ ನೀಡುವುದು)

(ಆ) ಉತ್ಪಾದಕರಿಗೆ ನೀಡುವ ಹಣವನ್ನು ಬಾಕಿ ಉಳಿಸಿಕೊಳ್ಳಲು ಕಾರಣವೇನು ;

(ಇ) ಯಾವ ಕಾಲಮಿತಿಯೊಳಗಾಗಿ ಬಾಕಿ ಹಣವನ್ನು ಉತ್ಪಾದಕರಿಗೆ ನೀಡಲಾಗುವುದು ?

## ರಾಜ್ಯಾದ್ಯಂತ ಹೊಸ ಕಲ್ಲು ಗಣಿಗಾರಿಕೆ ಪ್ರಾರಂಭಿಸುವ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೧೯೧ (೨೨೯) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯಾದ್ಯಂತ ಹೊಸದಾಗಿ ಕಲ್ಲು ಗಣಿಗಾರಿಕೆ ಪ್ರಾರಂಭಿಸಲು ಎಷ್ಟು ಅರ್ಜಿಗಳು ಬಂದಿವೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಕಲ್ಲು ಗಣಿಗಾರಿಕೆ ಪ್ರಾರಂಭಿಸಲು ಅನುಸರಿಸುವ ಮಾನದಂಡಗಳಾವುವು; (ವಿವರ ನೀಡುವುದು)

(ಇ) ಪರವಾನಿಗೆ ಪಡೆದು ಗಣಿಗಾರಿಕೆ ನಡೆಸುತ್ತಿರುವವರು ಸರ್ಕಾರದ ನಿಯಮಗಳನ್ನು ಪಾಲಿಸುತ್ತಿದ್ದಾರೆಯೇ; ಇಲ್ಲವಾದ್ದಲ್ಲಿ, ಅಂತವರ ವಿರುದ್ಧ ಏನು ಕ್ರಮ ಕೈಗೊಳ್ಳಲಾಗಿದೆ ?

## ವಿಜಯಪುರ ನಗರ ವ್ಯಾಪ್ತಿಯಲ್ಲಿ ಗಾರ್ಮೆಂಟ್ಸ್ ಪ್ರಾರಂಭಿಸುವ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೧೯೨ (೨೩೦) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯಪುರ ನಗರದ ವ್ಯಾಪ್ತಿಯಲ್ಲಿ ಗಾರ್ಮೆಂಟ್ಸ್ ಕಾರ್ಖಾನೆ ಪ್ರಾರಂಭಿಸಲು ಸರ್ಕಾರ ತೀರ್ಮಾನಿಸಿದೆಯೇ ;

(ಆ) ಹಾಗಿದ್ದಲ್ಲಿ, ಪ್ರಸ್ತುತ ಈ ಸಾಲಿನಲ್ಲಿ ಪ್ರಾರಂಭ ಮಾಡಲು ಕ್ರಮ ಕೈಗೊಳ್ಳಲಾಗುವುದೇ ?

## ಕಬ್ಬು ಬೆಳೆಗಾರರಿಗೆ ನೀಡುವ ಅನುದಾನದ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :-**

೧೯೩ (೨೩೧) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯಾದ್ಯಂತ ಕಬ್ಬು ಬೆಳೆಗಾರರಿಗೆ ನೀಡುವ ಅನುದಾನ ಇನ್ನೂ ಎಷ್ಟು ಬಾಕಿ ಇವೆ ; (ವರ್ಷವಾರು ವಿವರ ನೀಡುವುದು)

(ಆ) ಬಾಕಿ ಇರುವ ಅನುದಾನವನ್ನು ಯಾವ ಕಾಲಮಿತಿಯೊಳಗೆ ಪಾವತಿಸಲು ಸರ್ಕಾರ ಕ್ರಮ ಕೈಗೊಳ್ಳುವುದು ?

## ದಕ್ಷಿಣ ಕನ್ನಡ ಜಿಲ್ಲೆಯ ಅಡಿಕೆ, ಕೋಕೋ ಮತ್ತು ಮೆಣಸು ಬೆಳೆಗಾರರಿಗೆ ಹವಾಮಾನ ಆಧಾರಿತ ಬೆಳೆ ವಿಮೆ ಸೌಲಭ್ಯ ಕಲ್ಪಿಸುವ ಕುರಿತು

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :-**

೧೯೪ (೧೫೦) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಕ್ಷಿಣ ಕನ್ನಡ ಜಿಲ್ಲೆಗೆ ಸಂಬಂಧಿಸಿದಂತೆ ಅಡಿಕೆ, ಕೋಕೋ ಮತ್ತು ಮೆಣಸು ಬೆಳೆಗಳಿಗೆ ನಿಗದಿಯಾದ ಬೆಳೆವಿಮೆ ಕಂತನ್ನು

ಬೆಳೆಗಾರರಿಂದ ಪಡೆದು ಅವರಿಗೆ ಹವಾಮಾನ ಆಧಾರಿತ ಬೆಳೆವಿಮೆ ಸೌಲಭ್ಯವನ್ನು ಕಲ್ಪಿಸಲು ಈಗಾಗಲೇ ಕ್ರಮ ವಹಿಸಲಾಗಿದೆಯೇ ; ಇಲ್ಲದಿದ್ದಲ್ಲಿ, ಹವಾಮಾನ ಆಧಾರಿತ ಬೆಳೆ ವಿಮೆ ಸೌಲಭ್ಯವನ್ನು ಕಲ್ಪಿಸಲು ಇದುವರೆಗೂ ಯಾವುದೇ ಕ್ರಮ ಪ್ರಾರಂಭವಾಗದಿರಲು ಕಾರಣಗಳೇನು ;

(ಆ) ಈ ಹಿಂದೆ ಒಮ್ಮೆ ಬೆಳೆ ವಿಮೆ ಪಡೆದರೆ ಅದು ಮೂರು ವರ್ಷದ ಅವಧಿಗೆ ಚಾಲ್ತಿಯಲ್ಲಿರುತ್ತಿದ್ದು, ಕಳೆದ ವರ್ಷದಿಂದ ಕೇವಲ ಒಂದು ವರ್ಷದ ಅವಧಿಗೆ ಮಾತ್ರ ಅದನ್ನು ಮಿತಿಗೊಳಿಸಲಾಗಿರುವುದರಿಂದ ಸಂಕಷ್ಟದಲ್ಲಿರುವ ಬೆಳೆಗಾರರಿಗೆ ನೆರವಾಗುವ ದೃಷ್ಟಿಯಿಂದ ಈ ಹಿಂದೆ ಇದ್ದಂತೆ ಬೆಳೆವಿಮೆ ಅವಧಿಯನ್ನು ೩ ವರ್ಷಗಳಿಗೆ ವಿಸ್ತರಿಸಲು ಸರ್ಕಾರ ಕೂಡಲೇ ಸೂಕ್ತ ಕ್ರಮವಹಿಸುವುದೇ ;

(ಇ) ಯಾವ ಕಾಲಮಿತಿಯೊಳಗೆ, ಬೆಳೆಗಾರರಿಂದ ನಿಗದಿಯಾದ ಬೆಳೆ ವಿಮೆ ಕಂತನ್ನು ಪಡೆದು ಅವರಿಗೆ ಹವಾಮಾನ ಆಧಾರಿತ ಬೆಳೆವಿಮೆ ಸೌಲಭ್ಯವನ್ನು ಕಲ್ಪಿಸಲಾಗುವುದೇ ?

## ಬೆಳ್ತಂಗಡಿ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ನಗರ ಪ್ರಾಧಿಕಾರದ ಮಹಾ ಯೋಜನೆ ಜಾರಿಯಿಂದ ಆಗಿರುವ ತೊಂದರೆ ಕುರಿತು

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :-**

೧೯೫ (೧೫೧) ಮಾನ್ಯ ಪೌರಾಡಳಿತ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಕ್ಷಿಣ ಕನ್ನಡ ಜಿಲ್ಲೆ, ಬೆಳ್ತಂಗಡಿ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ನಗರ ಪ್ರಾಧಿಕಾರದ ಮಹಾ ಯೋಜನೆಯನ್ನು ಜಾರಿಗೆ ತರುವ ಪ್ರಸ್ತಾವನೆಯಿಂದಾಗಿ ೨೦೧೭ರ ಪೂರ್ವದ ಭೂಪರಿವರ್ತಿತ

ಹಾಗೂ ನಮೂನೆ-೩ರಂತೆ ಗುರುತಿಸಿರುವ ನಿವೇಶನಗಳನ್ನು ಹೊಂದಿರುವ ಖಾತೆದಾರರಿಗೆ ಹೊಸ ಮನೆ ನಿರ್ಮಾಣಕ್ಕಾಗಿ ಕಟ್ಟಡ ಪರವಾನಗಿ ದೊರೆಯದೆ ಮತ್ತು ಈಗಾಗಲೇ ವಾಸವಿರುವ ಮನೆಗಳ ನವೀಕರಣ ಅಥವಾ ವಿಸ್ತರಣೆಗೆ ಕೂಡ ಪರವಾನಗಿ ದೊರೆಯದೆ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಬೆಳ್ತಂಗಡಿ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ವಿಶೇಷ ಪ್ರಕರಣವೆಂದು ಪರಿಗಣಿಸಿ ೨೦೧೭ರ ಪೂರ್ವದಲ್ಲಿ ಕೃಷಿಯೇತರ ಉದ್ದೇಶಕ್ಕಾಗಿ ಭೂಪರಿವರ್ತಿತ ಆಸ್ತಿಗಳನ್ನು ಹೊಂದಿರುವವರಿಗೆ ಮಹಾ ಯೋಜನೆಯ ನಿಯಮಗಳನ್ನು ಅನ್ವಯಿಸದೆ, ಈ ಹಿಂದಿನಂತೆ ನಿವೇಶನಗಳ ವಿನ್ಯಾಸ ನಕ್ಷೆಯನ್ನು ಅನುಮೋದಿಸಿ, ಅಧಿಕೃತ ನಿವೇಶನಗಳೆಂದು ಪರಿಗಣಿಸಿ, ಕಟ್ಟಡ ನಿರ್ಮಾಣಕ್ಕೆ ಅಗತ್ಯವಿರುವ ಕಟ್ಟಡ ಪರವಾನಗಿಯನ್ನು ನೀಡಲು ಸರ್ಕಾರ ಇದುವರೆಗೂ ಯಾವುದೇ ಕ್ರಮ ವಹಿಸದಿರಲು ಕಾರಣಗಳೇನು ;

(ಇ) ಯಾವ ಕಾಲಮಿತಿಯೊಳಗೆ ಸದರಿ ಸಮಸ್ಯೆಯನ್ನು ಪರಿಹರಿಸಿ, ದೀರ್ಘಕಾಲದಿಂದ ಸಮಸ್ಯೆ ಪರಿಹಾರಕ್ಕಾಗಿ ಕಾಯುತ್ತಿರುವ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಲಾಗುವುದು ?

## ತೆಂಗು ಬೆಳೆಗಾರರಿಗೆ ಸಿಗುತ್ತಿರುವ ಸೌಲಭ್ಯಗಳ ಕುರಿತು

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :-**

೧೯೬ (೧೫೨) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ತೆಂಗು ಬೆಳೆಯುವ ಭೂಮಿಯ ಒಟ್ಟು ವಿಸ್ತೀಣವೆಷ್ಟು; ಬೆಳೆ ವಿಸ್ತೀರ್ಣ ಹಾಗೂ ವಾರ್ಷಿಕ ಉತ್ಪನ್ನದ ಮಾಹಿತಿಯನ್ನು ಜಿಲ್ಲಾವಾರು ನೀಡುವುದು ;

(ಆ) 'ಕೇಂದ್ರ ತೆಂಗು ಅಭಿವೃದ್ಧಿ ಮಂಡಳಿ' ವತಿಯಿಂದ ರಾಜ್ಯದ ತೆಂಗು ಬೆಳೆಗಾರರಿಗೆ ದೊರೆಯುತ್ತಿರುವ ನೆರವು ಮತ್ತು ಸೌಲಭ್ಯಗಳು ಯಾವುವು ;

(ಇ) ಕಳೆದ ೩ ವರ್ಷಗಳಲ್ಲಿ 'ಕೇಂದ್ರ ತೆಂಗು ಅಭಿವೃದ್ಧಿ ಮಂಡಳಿ' ವತಿಯಿಂದ ರಾಜ್ಯದ ಎಷ್ಟು ಜನ ತೆಂಗು ಬೆಳೆಗಾರರು ನೆರವು ಮತ್ತು ಸೌಲಭ್ಯಗಳನ್ನು ಪಡೆದಿದ್ದಾರೆ ? ( ಪ್ರತಿ ಫಲಾನುಭವಿ ಪಡೆದಿರುವ ಸೌಲಭ್ಯಗಳ ಸಂಪೂರ್ಣ ವಿವರಗಳನ್ನು ಒದಗಿಸುವುದು)

## ಸಕ್ಕರೆ ಕಾರ್ಖಾನೆಗಳಿಂದ ರೈತರಿಗೆ ಬರಬೇಕಾದ ಬಾಕಿ ಹಣ ಪಾವತಿಗೆ ಕ್ರಮಕೈಗೊಳ್ಳುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೯೭ (೧೭೬) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಸಕ್ಕರೆ ಕಾರ್ಖಾನೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ಪೈಕಿ ಕಬ್ಬಿನ ಬಿಲ್ ಬಾಕಿ ಉಳಿಸಿಕೊಂಡಿರುವ ಸಕ್ಕರೆ ಕಾರ್ಖಾನೆಗಳು ಯಾವುವು ; ಬಾಕಿ ಉಳಿಸಿಕೊಂಡಿರುವ ಬಿಲ್ಲಿನ ಮೊತ್ತ ಎಷ್ಟು ; (ಕಾರ್ಖಾನೆವಾರು ವಿವರ ಒದಗಿಸುವುದು)

(ಇ) ಬಾಕಿ ಬಿಲ್ ಪಾವತಿಸಲು ಉಳಿಸಿಕೊಂಡಿರುವ ಸಕ್ಕರೆ ಕಾರ್ಖಾನೆಗಳ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಕಬ್ಬು ಬೆಳೆಗಾರರ ಬಾಕಿ ಬಿಲ್ ಪಾವತಿಯಾಗದೇ ಇರುವುದರಿಂದ ರೈತರು ಸಂಕಷ್ಟಕ್ಕೀಡಾಗಿರುವುದು ಸರ್ಕಾರದ ಗಮನಕ್ಕೆ ಬಂದಿದಯೇ ; ಬಂದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ರೈತರ ಬಾಕಿ ಬಿಲ್ಲಿನ ಮೊತ್ತ ಪಾವತಿಸಲಾಗುವುದು ; ಇದಕ್ಕಾಗಿ ಸರ್ಕಾರ ಕೈಗೊಂಡ ಕ್ರಮಗಳೇನು ?

## ಕೆ.ಸಿ.ವ್ಯಾಲಿ ಯೋಜನೆ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೯೮ (೧೭೭೮) ಮಾನ್ಯ ನಗರಾಭಿವೃದ್ಧಿ ಹಾಗೂ ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರಿನ ಕೊಳಚೆ ನೀರನ್ನು ಸಂಸ್ಕರಿಸಿ ಕೋಲಾರ ಜಿಲ್ಲೆಯ ಕೆರೆಗಳಿಗೆ ಹರಿಸುವ ಕೆ.ಸಿ.ವ್ಯಾಲಿ ಯೋಜನೆ ಯಾವ ಹಂತದಲ್ಲಿದೆ ; (ಯೋಜನೆ ಕುರಿತು ಸಂಪೂರ್ಣ ಮಾಹಿತಿ ನೀಡುವುದು)

(ಆ) ಈ ಯೋಜನೆಯ ಅಂದಾಜು ವೆಚ್ಚ ಎಷ್ಟು ; ಈ ಯೋಜನೆಗೆ ಈವರೆಗೆ ವೆಚ್ಚ ಮಾಡಿರುವ ಹಣ ಎಷ್ಟು ; ಯೋಜನೆ ಕಾಮಗಾರಿಯನ್ನು ಯಾವ ಸಂಸ್ಥೆಗೆ ಎಷ್ಟು ಮೊತ್ತಕ್ಕೆ ನೀಡಲಾಗಿದೆ ;

(ಇ) ಕೆ.ಸಿ.ವ್ಯಾಲಿ ಯೋಜನೆಯಡಿ ಎಷ್ಟು ಕಿ.ಮೀ ಉದ್ದದ ಕಾಲುವೆ ನಿರ್ಮಿಸಲಾಗಿದೆ ; ಕಾಲುವೆ ಉಕ್ಕಿದಾಗ ನೀರು ಊರಿನ ನಡುವೆ ಹರಿದು ಮನೆಗಳಿಗೆ ನುಗ್ಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಇದಕ್ಕೆ ಕಾರಣಗಳೇನು ;

(ಈ) ನೀರು ಹರಿಯುವ ಜಾಗದ ಸುತ್ತಮುತ್ತ ಗಿಡ-ಮರಗಳು ಒಣಗುತ್ತಿದ್ದು, ಕೆರೆ ಒಡಲಿಗೆ ಚರಂಡಿ ನೀರು ಹರಿಯುತ್ತಿರುವುದರಿಂದ ಮಕ್ಕಳು ಸೇರಿದಂತೆ ಜನಸಾಮಾನ್ಯರು

ಆರೋಗ್ಯದ ಮೇಲೆ ಪದೇ ಪದೇ ದುಷ್ಪರಿಣಾಮ ಬೀರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮವೇನು ?

## ರಾಜ್ಯದಲ್ಲಿ ಕೈಗಾರಿಕೆ ಚಟುವಟಿಕೆಗಳಿಗೆ ಭೂಮಿ ಸ್ವಾಧೀನಪಡಿಸಿಕೊಂಡಿರುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೯೯ (೧೭೭) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕೈಗಾರಿಕಾ ಚಟುವಟಿಕೆಗೆ ಸ್ವಾಧೀನಪಡಿಸಿಕೊಂಡಿರುವ ಮತ್ತು ಸ್ವಾಧೀನ ಪ್ರಕ್ರಿಯೆ ಹಂತದಲ್ಲಿರುವ ಭೂಮಿ ಎಷ್ಟು ; ಭೂ ಸ್ವಾಧೀನಕ್ಕೆ ಬಾಕಿ ಇರುವ ಪ್ರಕರಣಗಳೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ಪೈಕಿ ಅಭಿವೃದ್ಧಿಪಡಿಸಿರುವ ಮತ್ತು ಅಭಿವೃದ್ಧಿ ಪಡಿಸುತ್ತಿರುವ ಭೂಮಿ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ಸ್ವಾಧೀನಪಡಿಸಿಕೊಂಡಿರುವ ಭೂಮಿಗೆ ಭೂ ಪರಿಹಾರ ನೀಡಲಾಗಿದೆಯೇ ; ಭೂ ಪರಿಹಾರ ನೀಡಲು ಬಾಕಿ ಇರುವ ಪ್ರಕರಣಗಳೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಈ) ಅಗತ್ಯಕ್ಕಿಂತ ಹೆಚ್ಚು ಭೂ ಸ್ವಾಧೀನಪಡಿಸಿಕೊಂಡಿರುವ ಹಿನ್ನೆಲೆಯಲ್ಲಿ ಬೇಕಾಬಿಟ್ಟಿ ಭೂ ಸ್ವಾಧೀನಕ್ಕೆ ಕಡಿವಾಣ ಹಾಕಲು ಕೈಗೊಂಡಿರುವ ಕ್ರಮಗಳೇನು ?

## ನಗರ ಸ್ಥಳೀಯ ಸಂಸ್ಥೆಗಳ ಅಧ್ಯಕ್ಷರು ಮತ್ತು ಉಪಾಧ್ಯಕ್ಷರ ಮೀಸಲಾತಿ ನಿಗದಿ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೦೦ (೧೭೧) ಮಾನ್ಯ ಪೌರಾಡಳಿತ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ನಗರಸಭೆ/ಪುರಸಭೆ/ಪಟ್ಟಣ ಪಂಚಾಯಿತಿಗಳಿಗೆ ಚುನಾವಣೆ ನಡೆದು ಎರಡೂವರೆ ವರ್ಷ ಕಳೆದರೂ ಅಧ್ಯಕ್ಷ ಮತ್ತು ಉಪಾಧ್ಯಕ್ಷರ ಆಯ್ಕೆಗೆ ಮೀಸಲಾತಿಯನ್ನು ನಿಗದಿಪಡಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅಧ್ಯಕ್ಷರು ಮತ್ತು ಉಪಾಧ್ಯಕ್ಷರ ಆಯ್ಕೆಗೆ ಮೀಸಲಾತಿಯನ್ನು ನಿಗದಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ಸಂಪೂರ್ಣ ವಿವರ ನೀಡುವುದು)

(ಆ) ನಗರ ಸ್ಥಳೀಯ ಸಂಸ್ಥೆಗಳಿಗೆ ಚುನಾವಣೆ ನಡೆದು ಅಧ್ಯಕ್ಷರು ಮತ್ತು ಉಪಾಧ್ಯಕ್ಷರು ನೇಮಕವಾಗದಿರುವ ಸ್ಥಳೀಯ ಸಂಸ್ಥೆಗಳು ಯಾವ ದಿನಾಂಕದಿಂದ ಅಧ್ಯಕ್ಷರು ಮತ್ತು ಉಪಾಧ್ಯಕ್ಷರ ನೇಮಕ ಮಾಡದೇ ಖಾಲಿ ಉಳಿದಿವೆ ? (ಸಂಸ್ಥೆವಾರು ಸಂಪೂರ್ಣ ಮಾಹಿತಿ ನೀಡುವುದು)

## ನಗರಾಭಿವೃದ್ಧಿ ಇಲಾಖೆಯಿಂದ ಕೈಗೊಂಡಿರುವ ಅಭಿವೃದ್ಧಿ ಕಾಮಗಾರಿಗಳ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೦೧ (೧೭೨) ಮಾನ್ಯ ಪೌರಾಡಳಿತ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ನಗರಾಭಿವೃದ್ಧಿ ಇಲಾಖೆಯಿಂದ ರಾಮನಗರ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಗಳಿಗೆ ೨೦೧೮ ರಿಂದ ೨೦೨೨ನೇ ಸಾಲಿನವರೆಗೆ ವಿವಿಧ ಯೋಜನೆಗಳಡಿ ಮಂಜೂರಾದ ಅನುದಾನವೆಷ್ಟು ; (ವರ್ಷವಾರು ವಿವರ ನೀಡುವುದು)

(ಆ) ಈ ಅನುದಾನದಲ್ಲಿ ಕೈಗೊಂಡಿರುವ ಕಾಮಗಾರಿಗಳು ಯಾವುವು ; ಇದರಲ್ಲಿ ಪೂರ್ಣಗೊಂಡಿರುವ ಕಾಮಗಾರಿಗಳು ಯಾವುವು ; ಪೂರ್ಣಗೊಂಡ ಕಾಮಗಾರಿಗಳಿಗೆ ಬಿಡುಗಡೆಯಾಗಿರುವ ಅನುದಾನವೆಷ್ಟು ; (ಕಾಮಗಾರಿವಾರು ಮತ್ತು ವರ್ಷವಾರು ವಿವರ ನೀಡುವುದು)

(ಇ) ಈ ಅನುದಾನದಲ್ಲಿ ಅಪೂರ್ಣಗೊಂಡಿರುವ / ಪ್ರಗತಿಯಲ್ಲಿರುವ ಕಾಮಗಾರಿಗಳು ಯಾವುವು ; ಈ ಕಾಮಗಾರಿಗಳಿಗೆ ಬಿಡುಗಡೆಯಾಗಿರುವ ಅನುದಾನವೆಷ್ಟು ; (ಕಾಮಗಾರಿವಾರು ಮತ್ತು ವರ್ಷವಾರು ವಿವರ ನೀಡುವುದು)

(ಈ) ಈ ಅನುದಾನದಲ್ಲಿ ಬಳಕೆಯಾಗದೇ ಉಳಿದಿರುವ ಅನುದಾನವೆಷ್ಟು? (ವರ್ಷವಾರು ವಿವರ ನೀಡುವುದು)

## ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಭ್ರಷ್ಟಾಚಾರದ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೦೨ (೧೬೫೫) ಮಾನ್ಯ ನಗರಾಭಿವೃದ್ಧಿ ಹಾಗೂ ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ೪೦೦೦ ಕೋಟಿಗೂ ಹೆಚ್ಚಿನ ಮೊತ್ತದ ಭ್ರಷ್ಟಾಚಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಕುರಿತು ಸರ್ಕಾರದ ನಿಲುವೇನು ;

(ಆ) ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ೪೦೦೦ ಕೋಟಿಗೂ ಹೆಚ್ಚಿನ ಮೊತ್ತದ ಭ್ರಷ್ಟಾಚಾರ ನಡೆಸಿದ ಅಧಿಕಾರಿಗಳ ಮೇಲೆ ಸರ್ಕಾರ ಕೈಗೊಂಡ ಕ್ರಮಗಳೇನು ; ಎಷ್ಟು ಅಧಿಕಾರಿಗಳನ್ನು ಅಮಾನತ್ತು ಮಾಡಲಾಗಿದೆ ; (ವಿವರ ನೀಡುವುದು)

(ಇ) ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ಭ್ರಷ್ಟಾಚಾರ ನಡೆಸಿದ ಅಧಿಕಾರಿಗಳ ಮೇಲೆ ಕ್ರಿಮಿನಲ್ ಕೇಸು ದಾಖಲಿಸಲಾಗಿದೆಯೇ ; ಇಲ್ಲವಾದಲ್ಲಿ, ಯಾವಾಗ ಕೇಸು ದಾಖಲಿಸಲಾಗುವುದು ; ನಷ್ಟವಾದ ಮೊತ್ತವನ್ನು ಅಧಿಕಾರಿಗಳಿಂದ ವಸೂಲಿ ಮಾಡಲು ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಕೈಗಾರಿಕೆಗಳ ಅನುಮತಿ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೦೩ (೧೬೬) ಮಾನ್ಯ ನಗರಾಭಿವೃದ್ಧಿ ಹಾಗೂ ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ನವ ಮಂಗಳೂರು ಬಂದರಿನ ನಿರ್ವಸಿತರಿಗೆ ಆಶ್ರಯ ಕಲ್ಪಿಸುವ ನಿಟ್ಟಿನಲ್ಲಿ ದಕ್ಷಿಣ ಕನ್ನಡ ಜಿಲ್ಲೆಯ ಕೃಷ್ಣಾಪುರ ಮತ್ತು ಕಾಟಿಪಳ್ಳ ಗ್ರಾಮವನ್ನು ೭೦ರ ದಶಕದಲ್ಲೇ ಗುರುತಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಆ) ವಸತಿ ಪ್ರದೇಶದಲ್ಲಿ ಯಾವ ಯಾವ ಕೈಗಾರಿಕೆಗಳಿಗೆ ಅನುಮತಿ/ ನಿರಾಪೇಕ್ಷಣಾ ಪತ್ರ ನೀಡಲಾಗಿದೆ ; (ವಿವರ ನೀಡುವುದು)

(ಇ) ಕೃಷ್ಣಾಪುರದ ೫ನೇ ಬ್ಲಾಕಿನಲ್ಲಿರುವ ಆಶಾ ಮರದ ಮಿಲ್ಲು ವಸತಿ ಪ್ರದೇಶದಲ್ಲಿದ್ದರೂ ಯಾವ ಕಾರಣಕ್ಕೆ ನಿರಾಪೇಕ್ಷಣಾ ಪತ್ರ ನೀಡಲಾಗಿದೆ ; (ವಿವರ ನೀಡುವುದು)

(ಈ) ಮಹಾನಗರ ಪಾಲಿಕೆ ವತಿಯಿಂದ ಮಹಾನಗರ ಪಾಲಿಕೆಯ ಆಸ್ತಿಯಾಗಿರುವ ರಸ್ತೆಯ ಇಕ್ಕೆಲಗಳಲ್ಲಿ ಕೃಷ್ಣಾಪುರದ ೫ನೇ ಬ್ಲಾಕಿನಲ್ಲಿರುವ ಆಶಾ ಮರದ ಮಿಲ್ಲು ಮರದ ದಿಮ್ಮಿಗಳನ್ನು ಸಂಗ್ರಹಿಸಲು ಅನುಮತಿ ನೀಡಲಾಗಿದೆಯೇ ;

(ಉ) ರಸ್ತೆಯ ಇಕ್ಕೆಲಗಳಲ್ಲಿ ಮರದ ದಿಮ್ಮಿಗಳನ್ನು ಸಂಗ್ರಹಿಸಲು ಮಹಾನಗರ ಪಾಲಿಕೆಯು ಎಷ್ಟು ಮೊತ್ತದ ಶುಲ್ಕವನ್ನು ಸಂಗ್ರಹಿಸುತ್ತಿದೆ ; ಇಲ್ಲವಾದಲ್ಲಿ, ಈ ಅಕ್ರಮದ ಕುರಿತು ಕೈಗೊಂಡ ಕ್ರಮಗಳೇನು ?

## ಸಹಕಾರ ಇಲಾಖೆಯ ಅಕ್ರಮದ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೦೪ (೧೬೭) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಹಕಾರ ಇಲಾಖೆಯಲ್ಲಿ ೧೪೧.೭೮ ಕೋಟಿಗಳ ಅಕ್ರಮ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಯಾವ ಯಾವ ಪ್ರಕರಣಗಳಲ್ಲಿ ಈ ಅಕ್ರಮ ನಡೆದಿದೆ ; (ವಿವರ ನೀಡುವುದು)

(ಆ) ಅಕ್ರಮ ನಡೆಸಿದ ಅಧಿಕಾರಿಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ; ಎಷ್ಟು ಅಧಿಕಾರಿಗಳನ್ನು ಅಮಾನತ್ತು ಮಾಡಲಾಗಿದೆ ; (ವಿವರ ನೀಡುವುದು)

(ಇ) ಅಕ್ರಮಗಳ ಕುರಿತು ಕ್ರಿಮಿನಲ್ ಕೇಸ್ ದಾಖಲು ಮಾಡಲು ಯಾವ ಕ್ರಮ ಕೈಗೊಳ್ಳಲಾಗಿದೆ ? (ವಿವರ ನೀಡುವುದು)

## ಪೌರ ಕಾರ್ಮಿಕರ ಖಾಯಂಮಾತಿ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೦೫ (೧೬೮) ಮಾನ್ಯ ಪೌರಾಡಳಿತ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪೌರ ಕಾರ್ಮಿಕರ ಖಾಯಂಮಾತಿಗೆ ಸರ್ಕಾರ ಕೈಗೊಂಡ ಕ್ರಮಗಳೇನು ; ಕಳೆದ ಒಂದು ವರ್ಷದಲ್ಲಿ ಎಷ್ಟು ಪೌರ ಕಾರ್ಮಿಕರನ್ನು ಖಾಯಂಗೊಳಿಸಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಪ್ರಸ್ತುತ ಪೌರ ಕಾರ್ಮಿಕರನ್ನು ಯಾವ ರೀತಿಯಲ್ಲಿ ನೇಮಕ ಮಾಡಲಾಗುತ್ತದೆ ; ಅವರಿಗೆ ನೀಡುವ ವೇತನವೆಷ್ಟು ;

(ಇ) ಪೌರ ಕಾರ್ಮಿಕರನ್ನು ಗುತ್ತಿಗೆ, ಹೊರ ಗುತ್ತಿಗೆ ಆಧಾರದಲ್ಲಿ ನೇಮಕ ಮಾಡಿದಾಗ ಅವರ ಮೇಲೆ ಶೋಷಣೆ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಪೌರ ಕಾರ್ಮಿಕರ ಶೋಷಣೆ ತಪ್ಪಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಗಣಿ ಗುತ್ತಿಗೆ ನವೀಕರಣ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೦೬ (೧೬೯) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಗಣಿ ಗುತ್ತಿಗೆ ನವೀಕರಣ ಮತ್ತು ಹೊಸ ಗಣಿಗುತ್ತಿಗೆ ಪರವಾನಿಗೆಗಳಿಂದ ಸಂಗ್ರಹವಾದ ರಾಜಸ್ವದ ಮೊತ್ತವೆಷ್ಟು ;

(ಆ) ಗಣಿಗಾರಿಕೆಯಿಂದ ಕಳೆದ ಒಂದು ವರ್ಷದಲ್ಲಿ ಸಂಗ್ರಹವಾದ ರಾಜಧನವೆಷ್ಟು ; ಯಾವ ಯಾವ ಗಣಿಗಾರಿಕೆಯಿಂದ ಎಷ್ಟು ರಾಜಧನ ಸಂಗ್ರಹವಾಗಿದೆ ; (ಗಣಿಗಾರಿಕೆವಾರು, ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಮರಳು ಗಣಿಗಾರಿಕೆಗೆ ಸಂಬಂಧಿಸಿದಂತೆ, ೯ ತಿಂಗಳಿನಲ್ಲಿ ಎಷ್ಟು ಅರ್ಜಿಗಳನ್ನು ಸ್ವೀಕರಿಸಲಾಗಿದೆ ಹಾಗೂ ಎಷ್ಟು ಅರ್ಜಿಗಳನ್ನು ಪರಿಶೀಲಿಸಿ ಅನುಮತಿ ನೀಡಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಈ) ಅಕ್ರಮ ಮರಳು ಗಣಿಗಾರಿಕೆಯನ್ನು ತಡೆಯಲು ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ರಾಜ್ಯದ ಸಾರ್ವಜನಿಕ ಸ್ಥಳಗಳಲ್ಲಿ ಮಳೆನೀರಿನ ಇಂಗುಗುಂಡಿಗಳನ್ನು ನಿರ್ಮಿಸುವ ಬಗ್ಗೆ

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :-**

೨೦೭ (೧೭೩) ಮಾನ್ಯ ಪೌರಾಡಳಿತ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಎಲ್ಲಾ ನಗರಸಭೆ/ಪುರಸಭೆ/ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿನ ಸಾರ್ವಜನಿಕ ಸ್ಥಳಗಳಲ್ಲಿ ಮಳೆನೀರಿನ ಇಂಗುಗುಂಡಿಗಳನ್ನು ನಿರ್ಮಿಸಲಾಗಿದೆಯೇ ; ಇಲ್ಲವಾದಲ್ಲಿ, ಈ ಮಳೆನೀರಿನ ಇಂಗುಗುಂಡಿಗಳನ್ನು ಸಾರ್ವಜನಿಕ ಸ್ಥಳಗಳಲ್ಲಿ ನಿರ್ಮಾಣ ಮಾಡಲು ಸರ್ಕಾರದ ನಿರ್ಧಾರಗಳೇನು ; (ವಿವರ ನೀಡುವುದು)

(ಆ) ರಾಜ್ಯದ ನಗರಸಭೆ/ಪುರಸಭೆ/ಪಟ್ಟಣ ಪಂಚಾಯಿತಿ ವ್ಯಾಪ್ತಿಯ ಸಾರ್ವಜನಿಕ ಕಟ್ಟಡಗಳಲ್ಲಿ ಮಳೆನೀರಿನ ಕೊಯ್ಲು ಮಾಡಲು ಯಾವುದಾದರೂ ಆದೇಶವಿದೆಯೇ ; ಹಾಗಿದ್ದಲ್ಲಿ, ಅದನ್ನು ಅನುಷ್ಠಾನಕ್ಕೆ ತರಲಾಗಿದೆಯೇ ? (ಈ ಮಳೆ ನೀರು ಕೊಯ್ಲು ಅಳವಡಿಸಿಕೊಂಡಿರುವ ವಿವರಗಳ ಮಾಹಿತಿ ನೀಡುವುದು)

## ಬಳ್ಳಾರಿಯ ಜೀನ್ಸ್ ತಯಾರಿಕಾ ಘಟಕಗಳಿಗೆ ನೀರಿನ ಅಭಾವ ತಗ್ಗಿಸುವ ಬಗ್ಗೆ

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :-**

೨೦೮ (೧೭೪) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬಳ್ಳಾರಿ ಜಿಲ್ಲೆಯಲ್ಲಿ ಒಟ್ಟು ಎಷ್ಟು ಜೀನ್ಸ್ ಸಿದ್ಧ ಉಡುಪು ತಯಾರಿಕಾ ಘಟಕಗಳಿವೆ ; ಅವುಗಳು ಹೆಚ್ಚಾಗಿ ಎಲ್ಲಿ ಕೇಂದ್ರೀಕೃತವಾಗಿವೆ ; (ಅವುಗಳ ಹೆಸರುಗಳೊಂದಿಗೆ ಮಾಹಿತಿ ಒದಗಿಸುವುದು)

(ಆ) ಬಳ್ಳಾರಿಯ ಜೀನ್ಸ್ ಜವಳಿ ಉದ್ಯಮಕ್ಕೆ ಯಾವ ಮೂಲದಿಂದ ನೀರನ್ನು ನೀಡಲಾಗುತ್ತಿದೆ ; ದಿನಕ್ಕೆ ಎಷ್ಟು ನೀರಿನ ಅವಶ್ಯಕತೆ ಇದೆ ; (ಮಾಹಿತಿ ನೀಡುವುದು)

(ಇ) ಇತ್ತೀಚಿನ ದಿನಗಳಲ್ಲಿ ನೀರಿನ ಅಭಾವದಿಂದ ಜೀನ್ಸ್ ತಯಾರಿಕಾ ಘಟಕಗಳು ಮುಚ್ಚುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು ; (ಮಾಹಿತಿ ಒದಗಿಸುವುದು)

(ಈ) ಬಳ್ಳಾರಿ ನಗರಸಭೆಯಿಂದ ಉತ್ಪತ್ತಿಯಾಗುವ ನೀರನ್ನು ಸಂಸ್ಕರಣೆ ಮಾಡುವ ಮೂಲಕ ಈ ಜೀನ್ಸ್ ತಯಾರಿಕಾ ಘಟಕಗಳಿಗೆ ನೀಡಲು ತೆಗೆದುಕೊಂಡ ಕ್ರಮಗಳೇನು ;

(ಉ) ಬಳ್ಳಾರಿ ನಗರಸಭೆಯಿಂದ ಸಂಸ್ಕರಣೆ ಮಾಡಿದ ನೀರನ್ನು ಪಡೆಯಲು ನಗರ ಸಭೆ ಮತ್ತು ಜೀನ್ಸ್ ಘಟಕಗಳ ನಡುವೆ ಸಮನ್ವಯ ಸಾಧಿಸಿ ಪತ್ರ ವ್ಯವಹಾರ ನಡೆಸಲಾಗಿದೆಯೇ ? (ವಿವರ ನೀಡುವುದು)

## ಬಳ್ಳಾರಿ ನಗರ ಸಭೆಯಲ್ಲಿನ ಸಂಸ್ಕರಿಸಿದ ನೀರನ್ನು ಜೀನ್ಸ್ ಘಟಕಗಳಿಗೆ ನೀಡುವ ಬಗ್ಗೆ

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೦೯ (೧೭೫) ಮಾನ್ಯ ಪೌರಾಡಳಿತ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬಳ್ಳಾರಿ ನಗರಸಭೆಯಲ್ಲಿ ಉತ್ಪತ್ತಿಯಾಗುವ ಕೊಳಚೆ ನೀರನ್ನು ಸಂಸ್ಕರಣೆ ಮಾಡಲಾಗುತ್ತಿದೆಯೇ ; ಹಾಗಿದ್ದಲ್ಲಿ, ಎಲ್ಲಿ ಹಾಗೂ ಎಷ್ಟು ಪ್ರಮಾಣದಲ್ಲಿ ಸಂಸ್ಕರಿಸಲಾಗುತ್ತಿದೆ ; ನಗರ ಸಭೆಯ ಎಲ್ಲಾ ಕೊಳಚೆ ನೀರನ್ನು ಸಂಸ್ಕರಿಸಲಾಗುತ್ತಿದೆಯೇ ; (ಮಾಹಿತಿ ಒದಗಿಸುವುದು)

(ಆ) ಸಂಸ್ಕರಣೆ ಮಾಡಿದ ನೀರನ್ನು ಎಲ್ಲಿಗೆ ಹರಿಸಲಾಗುತ್ತಿದೆ ; ಈ ನೀರನ್ನು ಯಾವುದಕ್ಕೆ ಬಳಸಲಾಗುತ್ತಿದೆ ;

(ಇ) ಈ ಸಂಸ್ಕರಿಸಿದ ನೀರು ಕೈಗಾರಿಕೆಗಳಲ್ಲಿ ಬಳಸಲು ಯೋಗ್ಯವೇ ; ಹಾಗಿದ್ದಲ್ಲಿ, ಈ ಸಂಸ್ಕರಿಸಿದ ನೀರನ್ನು ಜೀನ್ಸ್ ಉದ್ಯಮದ ಘಟಕಗಳಿಗೆ ಪೂರೈಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಮಾಹಿತಿ ಒದಗಿಸುವುದು)

## ವಕ್ಫ್ ಬೋರ್ಡ್‌ನ ಸಾಲ ಸೌಲಭ್ಯದ ವಿಷಯದ ಬಗ್ಗೆ

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು):-**

೨೧೦ (೧೯೬) ಮಾನ್ಯ ಪೌರಾಡಳಿತ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ವಕ್ಫ್ ಬೋರ್ಡ್ ಸ್ಥಾಪನೆಯಾದ ದಿನಾಂಕ ಯಾವುದು ; ಈ ನಿಗಮಕ್ಕೆ ಕಳೆದ ೧೦ ವರ್ಷಗಳಲ್ಲಿ ನೀಡಲಾದ ಅನುದಾನ ಎಷ್ಟು ; (ಕಳೆದ ೧೦ ವರ್ಷಗಳ ಸಂಪೂರ್ಣ ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ವಕ್ಫ್ ಬೋರ್ಡ್‌ಗೆ ಸೇರಿದ ಆಸ್ತಿ ಎಷ್ಟು ; ಯಾವ ಯಾವ ಜಿಲ್ಲೆಯಲ್ಲಿ ಎಷ್ಟೆಷ್ಟು ಆಸ್ತಿ ಇದೆ ; ಸದರಿ ಆಸ್ತಿಯು ಯಾವ ಯಾವ ಉದ್ದೇಶಕ್ಕೆ ಬಳಕೆಯಾಗುತ್ತಿದೆ ; (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿ ಕಳೆದ ೧೦ ವರ್ಷಗಳಿಂದ ವಕ್ಫ್ ಬೋರ್ಡ್‌ನಿಂದ ಸಾಲ ಸೌಲಭ್ಯ ಹಾಗೂ ಇತರೆ ಸವಲತ್ತುಗಳನ್ನು ಪಡೆದ ಫಲಾನುಭವಿಗಳ ಸಂಖ್ಯೆ ಎಷ್ಟು ; ಇದಕ್ಕಾಗಿ ಖರ್ಚು ಮಾಡಲಾದ ಅನುದಾನ ಎಷ್ಟು ; (ಕಳೆದ ೧೦ ವರ್ಷಗಳ ಸಂಪೂರ್ಣ ಮಾಹಿತಿಯನ್ನು ವರ್ಷವಾರು ಪ್ರತ್ಯೇಕ ನೀಡುವುದು)

(ಈ) ಕಳೆದ ಮೂರು ವರ್ಷಗಳಲ್ಲಿ ಮಸೀದಿ/ಖಬರಸ್ಥಾನಗಳಿಗೆ ಒದಗಿಸಲಾದ ಅನುದಾನದಲ್ಲಿ ಬಿಡುಗಡೆಯಾದ ಅನುದಾನ ಎಷ್ಟು; ಬಾಕಿ ಇರುವ ಅನುದಾನವನ್ನು ಯಾವಾಗ ಬಿಡುಗಡೆ ಮಾಡಲಾಗುವುದು ; (ಮತಕ್ಷೇತ್ರವಾರು ಸಂಪೂರ್ಣ ಮಾಹಿತಿ ನೀಡುವುದು)

(ಉ) ಪ್ರಸ್ತುತ ವರ್ಷದಲ್ಲಿ ಕಲ್ಯಾಣ ಕರ್ನಾಟಕದ ಯಾವ ಯಾವ ಜಿಲ್ಲೆಗಳಲ್ಲಿ ಮಸೀದಿ/ಖಬರಸ್ಥಾನಗಳನ್ನು ಅಭಿವೃದ್ಧಿ ಮಾಡಲಾಗುವುದು ? (ಮಾಹಿತಿ ನೀಡುವುದು)

## ಸಾರ್ವಜನಿಕರು ಮರಳನ್ನು ಪಡೆಯುವ ವಿಷಯದ ಬಗ್ಗೆ

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೧೧ (೧೯೫) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರಗಿ ಜಿಲ್ಲೆಯಲ್ಲಿ ಎಷ್ಟು ಮರಳು ನಿಕ್ಷೇಪಗಳನ್ನು ಗುರುತಿಸಲಾಗಿದೆ ; ಅವು ಯಾವುವು ;

(ಆ) ಸಾರ್ವಜನಿಕರು ಮರಳನ್ನು ಪಡೆಯಲು ಸರ್ಕಾರ ನಿಗದಿಪಡಿಸಿರುವ ಮೊತ್ತವೆಷ್ಟು ; ಇದರಲ್ಲಿ ಕಳೆದ ಮೂರು ವರ್ಷಗಳಲ್ಲಿ ಎಷ್ಟು ಮರಳು ನಿಕ್ಷೇಪಗಳಲ್ಲಿ ಸಾರ್ವಜನಿಕರಿಗೆ ಮರಳು ವಿತರಿಸಲಾಗಿದೆ ; ಇದರಿಂದ ಸರ್ಕಾರಕ್ಕೆ ಬಂದ ಆದಾಯವೆಷ್ಟು ; ಮರಳು ಪಡೆಯಲು ಇರುವ ಮಾನದಂಡಗಳೇನು ; (ಮರಳು ನೀತಿಯ ಸಂಪೂರ್ಣ ವಿವರ ನೀಡುವುದು)

(ಇ) ಕಲಬುರಗಿ ಜಿಲ್ಲೆಯಲ್ಲಿ ಯಾವ ಯಾವ ಕಲ್ಲುಗಣಿಗಾರಿಕೆ ಕ್ರಷರ್‌ಗಳಿಂದ ಸರ್ಕಾರಕ್ಕೆ ಎಷ್ಟು ರಾಜಧನ ಸಂದಾಯವಾಗಿದೆ ; (ಕಳೆದ ಮೂರು ವರ್ಷಗಳ ಮಾಹಿತಿ ನೀಡುವುದು)

(ಈ) ಈ ಕಲ್ಲು ಗಣಿಗಾರಿಕೆಗೆ ಓಡಾಡುವ ಭಾರಿ ವಾಹನಗಳಿಂದ ರಸ್ತೆಗಳು ಹಾಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ; (ಮಾಹಿತಿ ನೀಡುವುದು)

(ಉ) ಕಲಬುರಗಿ ಜಿಲ್ಲೆಯಲ್ಲಿ ಬರುವ ಸಿಮೆಂಟ್ ಕಾರ್ಖಾನೆಗಳಿಂದ ಸರ್ಕಾರಕ್ಕೆ ಬರುವ ರಾಜಧನ ಎಷ್ಟು ; ಈ ಕಾರ್ಖಾನೆಗಳಿಂದ ಓಡಾಡುವ ವಾಹನಗಳಿಂದ ಹಾಳಾದ ರಸ್ತೆ ಎಷ್ಟು ಮತ್ತು ಈ ಸಿಮೆಂಟ್ ಕಾರ್ಖಾನೆಗಳ ದೂಳಿನಿಂದ ರೈತರ ಬೆಳೆ ಹಾನಿಯಾಗುತ್ತಿರುವ ಮತ್ತು ಈ ಕಾರ್ಖಾನೆಗಳ ಸುತ್ತಮುತ್ತ ವಾಸಿಸುತ್ತಿರುವ ಜನರ ಆರೋಗ್ಯ ಕೂಡಾ ಹಾಳಾಗುತ್ತಿದ್ದು, ಈ ಕುರಿತು ಸರ್ಕಾರ ಗಮನ ಹರಿಸಿದೆಯೇ ; ಹಾಗಿದ್ದಲ್ಲಿ, ಈ ಕುರಿತು ತೆಗೆದುಕೊಂಡ ಕ್ರಮಗಳೇನು ? (ಮಾಹಿತಿ ನೀಡುವುದು)

## ಅಮೃತ್ ಯೋಜನೆಯಡಿ ಕಳೆದ ೫ ವರ್ಷಗಳ ವಿಷಯದ ಬಗ್ಗೆ

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೧೨ (೧೯೩) ಮಾನ್ಯ ನಗರಾಭಿವೃದ್ಧಿ ಹಾಗೂ ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅಮೃತ್ ಯೋಜನೆಯಡಿ ಆಯ್ಕೆಯಾದ ಕಲ್ಯಾಣ ಕರ್ನಾಟಕದ ನಗರಗಳು ಯಾವುವು ; ಈ ನಗರಗಳಲ್ಲಿ ಕಳೆದ ಐದು ವರ್ಷಗಳಲ್ಲಿ ಕೈಗೊಂಡ ಕಾಮಗಾರಿಗಳು ಯಾವುವು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಅಮೃತ್ ಯೋಜನೆಯಡಿ ಕಳೆದ ಐದು ವರ್ಷಗಳಲ್ಲಿ ಬಿಡುಗಡೆಯಾದ ಹಾಗೂ ಖರ್ಚಾದ ಅನುದಾನ ಎಷ್ಟು; ಪೂರ್ಣಗೊಂಡ ಕಾಮಗಾರಿಗಳು ಎಷ್ಟು ; ನಿರ್ಮಾಣ ಹಂತದಲ್ಲಿರುವ ಕಾಮಗಾರಿಗಳು ಎಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಅಮೃತ್ ಯೋಜನೆಯಡಿ ಕಲಬುರಗಿ ಮಹಾನಗರದಲ್ಲಿ ಎಷ್ಟು ಮನೆಗಳಿಗೆ ನೀರು ಸರಬರಾಜು ಮತ್ತು ಒಳಚರಂಡಿ ವ್ಯವಸ್ಥೆ ಕಲ್ಪಿಸಲಾಗಿದೆ ;

(ಈ) ಕಲಬುರಗಿ ಮಹಾನಗರಕ್ಕೆ ಹೊಂದಿಕೊಂಡಿರುವ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ ಬಡಾವಣೆಗಳಲ್ಲಿ ಈ ಯೋಜನೆಯಡಿ ಮೂಲ ಸೌಕರ್ಯಗಳನ್ನು ಕಲ್ಪಿಸಲಾಗಿದೆಯೇ ; ಇಲ್ಲದಿದ್ದಲ್ಲಿ, ಮುಂಬರುವ ದಿನಗಳಲ್ಲಿ ಸದರಿ (ಖಾಸಗಿ) ಬಡಾವಣೆಗಳನ್ನು ಈ ಯೋಜನೆ ವ್ಯಾಪ್ತಿಗೆ ತರಲಾಗುವುದೇ ? (ಮಾಹಿತಿ ನೀಡುವುದು)

(ಉ) ಕಲಬುರಗಿ ಮಹಾನಗರ ಜನಸಂಖ್ಯೆಗೆ ತಕ್ಕಂತೆ ಉತ್ತಮ ಗುಣಮಟ್ಟದ ರಸ್ತೆ ಇಲ್ಲದಿರುವುದು ಸರ್ಕಾರದ ಗಮನಕ್ಕೆ

ಬಂದಿದೆಯೇ ; ವಾಹನಗಳ ಓಡಾಟಕ್ಕೆ ತಕ್ಕಂತೆ ರಸ್ತೆಗಳು ವಿಸ್ತಾರವಿಲ್ಲದಿರುವುದರಿಂದ ನಗರದಲ್ಲಿ ಸಂಚಾರ ದಟ್ಟಣೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸಂಚಾರ ದಟ್ಟಣೆ ನಿಯಂತ್ರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ? (ಮಾಹಿತಿ ನೀಡುವುದು)

## ರಾಜ್ಯದ ಪಟ್ಟಣ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಅಕ್ರಮವಾಗಿ ಇ-ಖಾತೆ ವಿತರಿಸಿರುವ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೧೩ (೧೯೭) ಮಾನ್ಯ ಪೌರಾಡಳಿತ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಅಕ್ರಮವಾಗಿ ನಿರ್ಮಿಸಿರುವ ಬಡಾವಣೆಗಳೆಷ್ಟು ; ಈ ಬಡಾವಣೆಗಳಲ್ಲಿ ಎಷ್ಟು ಆಸ್ತಿಗಳಿಗೆ ನಕಲು ದಾಖಲೆ ಸೃಷ್ಟಿಸಿ ಇ-ಖಾತೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ನಕಲಿ ದಾಖಲೆ ನೀಡಿ ಸೃಷ್ಟಿಸಿ ಸೃಜಿಸಿದ ಆಸ್ತಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ನಕಲಿ ದಾಖಲೆ ನೀಡಿ ಇ-ಖಾತೆ ಸೃಷ್ಟಿಯಿಂದ ಸರ್ಕಾರದ ಬೊಕ್ಕಸಕ್ಕೆ ಉಂಟಾದ ನಷ್ಟವೆಷ್ಟು ; ನಕಲಿ ದಾಖಲೆ ಸೃಷ್ಟಿಗೆ ಕಾರಣರಾದ ಅಧಿಕಾರಿಗಳು ಯಾರು (ಹೆಸರು ಮತ್ತು ಹುದ್ದೆಯೊಂದಿಗೆ ಮಾಹಿತಿ ನೀಡುವುದು) ಮತ್ತು ಈ ಅಧಿಕಾರಿಗಳ ಮೇಲೆ ಸರ್ಕಾರ ಕೈಗೊಂಡ ಕ್ರಮವೇನು ; (ವಿವರ ನೀಡುವುದು)

(ಇ) ರಾಜ್ಯದ ಪಟ್ಟಣ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಅನಧಿಕೃತವಾಗಿ ನಿರ್ಮಾಣಗೊಳ್ಳುತ್ತಿರುವ ಅಕ್ರಮ ಬಡಾವಣೆ ನಿವೇಶನ/ಮನೆಗಳಿಗೆ ನೀಡುವ ಇ-ಖಾತೆಗಳ ವಿತರಣೆ ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## KIADB ವತಿಯಿಂದ ಪಂಜಾಬ್ ನ್ಯಾಷನಲ್ ಬ್ಯಾಂಕಿನಲ್ಲಿ ಇರಿಸಿದ ಠೇವಣಿ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೧೪ (೧೯೮) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) KIADB ಯು ೨೦೧೦ ರಿಂದ ೨೦೨೩ ಡಿಸೆಂಬರ್ ಅಂತ್ಯದವರೆಗೆ ವಿವಿಧ ಬ್ಯಾಂಕುಗಳಲ್ಲಿ ಇರಿಸಿದ ಠೇವಣಿ ಮೊತ್ತ ಎಷ್ಟು ; ಯಾವ ಉದ್ದೇಶಕ್ಕಾಗಿ ಠೇವಣಿ ಇರಿಸಲಾಗಿದೆ ; (ವಿವರ ನೀಡುವುದು)

(ಆ) KIADB ಯು ಯಾವುದಾದರೊಂದು ಬ್ಯಾಂಕಿನಲ್ಲಿ ಠೇವಣಿ ಇಡುವಾಗ ಅನುಸರಿಸುವ ಕಾರ್ಯ ವಿಧಾನಗಳೇನು ; (ಸಂಪೂರ್ಣ ವಿವರ ನೀಡುವುದು)

(ಇ) ದಿನಾಂಕ:೧೪.೦೯.೨೦೧೧ ರಂದು ಪಂಜಾಬ್ ನ್ಯಾಷನಲ್ ಬ್ಯಾಂಕ್‌ನಲ್ಲಿ ಠೇವಣಿ ಇರಿಸಿದ ಮೊತ್ತ ಎಷ್ಟು ; ಯಾವ ಉದ್ದೇಶಕ್ಕಾಗಿ ಠೇವಣಿ ಇಡಲಾಗಿತ್ತು ಮತ್ತು ಹಿಂಪಡೆದ ಠೇವಣಿ ಮೊತ್ತ ಎಷ್ಟು ; (ಸಂಪೂರ್ಣ ವಿವರ ನೀಡುವುದು)

(ಈ) ಠೇವಣಿ ಮೊತ್ತ ಸಂಪೂರ್ಣ ಹಿಂಪಡೆಯದಿದ್ದಲ್ಲಿ ಕಾರಣಗಳೇನು ?

## ರಾಜ್ಯದಲ್ಲಿನ ಘನತ್ಯಾಜ್ಯ ನಿರ್ವಹಣ ಘಟಕಗಳ ಮತ್ತು ಯೋಜನೆ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :-**

೨೧೫ (೨೨೨) ಮಾನ್ಯ ನಗರಾಭಿವೃದ್ಧಿ ಹಾಗೂ ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಘನತ್ಯಾಜ್ಯ ನಿರ್ವಹಣೆಗೆ ಸರ್ಕಾರ ಕೈಗೊಂಡಿರುವ ಯೋಜನೆಗಳು ಯಾವುವು ;

(ಆ) ರಾಜ್ಯದಲ್ಲಿರುವ ಘನತ್ಯಾಜ್ಯ ನಿರ್ವಹಣ ಘಟಕಗಳು ಯಾವುವು ? (ಕಳೆದ ೨ ವರ್ಷಗಳಲ್ಲಿ ವ್ಯಯಿಸಿರುವ ಘಟಕವಾರು ಅನುದಾನದ ಮಾಹಿತಿ ನೀಡುವುದು)

## ಸಣ್ಣ ಕೈಗಾರಿಕೆಗಳ ಸ್ಥಾಪನೆಗೆ ಸಿಗುವ ಸಾಲಸೌಲಭ್ಯ ಮತ್ತು ಮಹಿಳೆಯರಿಗೆ ಸೌಲಭ್ಯ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :–**

೨೧೬ (೨೨೩) ಮಾನ್ಯ ಸಣ್ಣ ಕೈಗಾರಿಕೆ ಹಾಗೂ ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಣ್ಣ ಕೈಗಾರಿಕೆಗಳ ಸ್ಥಾಪನೆಗೆ ಸರ್ಕಾರದಿಂದ ದೊರೆಯವ ಸಾಲ, ಸಹಾಯಧನ ಮತ್ತು ಇತರೆ ಸೌಲಭ್ಯಗಳು ಯಾವುವು ;

(ಆ) ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸುವ ಮಹಿಳಾ ಉದ್ದಿಮೆದಾರರಿಗೆ ಸರ್ಕಾರದಿಂದ ದೊರೆಯುವ ಹೆಚ್ಚುವರಿ ಮತ್ತು ಇತರೆ ವಿಶೇಷ ಸವಲತ್ತುಗಳು ಯಾವುವು ?

## ಸಣ್ಣ ಕೈಗಾರಿಕೆ ವ್ಯಾಪ್ತಿಯಲ್ಲಿ ಬರುವ ಉದ್ದಿಮೆಗಳು ಮತ್ತು ಮಾನದಂಡಗಳು

**ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :–**

೨೧೭ (೨೨೪) ಮಾನ್ಯ ಸಣ್ಣ ಕೈಗಾರಿಕೆ ಹಾಗೂ ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಸ್ತುತ ಸಣ್ಣ ಕೈಗಾರಿಕೆ ವ್ಯಾಪ್ತಿಗೆ ಬರುವ ಉದ್ದಿಮೆಗಳು ಯಾವುವು ; (ಮಾಹಿತಿ ನೀಡುವುದು)

(ಆ) ಸಣ್ಣ ಕೈಗಾರಿಕೆ ಅಧೀನಕ್ಕೆ ಬರುವ ಸಾರ್ವಜನಿಕ ನಿಗಮ/ಕಂಪನಿಗಳು, ಉದ್ದಿಮೆಗಳು, ಸೊಸೈಟಿಗಳು ಹಾಗೂ ಇತರೆ ಅಂಗಸಂಸ್ಥೆಗಳು ಯಾವುವು ? (ಮಾನದಂಡಗಳೊಂದಿಗೆ ಮಾಹಿತಿ ನೀಡುವುದು)

## ಉತ್ತರ ಕನ್ನಡ ಜಿಲ್ಲೆಯ ತ್ಯಾಜ್ಯದ ಪ್ರಮಾಣ ಮತ್ತು ವಿಲೇವಾರಿ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :-**

೨೧೮ (೨೨೫) ಮಾನ್ಯ ಪೌರಾಡಳಿತ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಉತ್ತರ ಕನ್ನಡ ಜಿಲ್ಲೆಯ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಪ್ರತಿ ದಿನ ಉತ್ಪಾದನೆಯಾಗುತ್ತಿರುವ ತ್ಯಾಜ್ಯದ ಪ್ರಮಾಣ ಎಷ್ಟು ;

(ಆ) ಸದರಿ ತ್ಯಾಜ್ಯವನ್ನು ಪ್ರತಿಯೊಂದು ಪುರಸಭೆ/ನಗರಸಭೆ/ಪಟ್ಟಣ ಪಂಚಾಯಿತಿಗಳು ವೈಜ್ಞಾನಿಕವಾಗಿ ವಿಲೇವಾರಿ ಮಾಡಲು ಯಾವ ಕ್ರಮಗಳನ್ನು ಕೈಗೊಂಡಿದೆ ?

## ಕಲಬುರಗಿ ನಗರದ ಕೇಂದ್ರ ಬಸ್ ನಿಲ್ದಾಣದ ಎದುರುಗಡೆ ವಾಹನಗಳ ದಟ್ಟಣೆ ಹಾಗೂ ಫ್ಲೈ ಓವರ್ ನಿರ್ಮಾಣದ ಕುರಿತು

**ಡಾ॥ ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) :-**

೨೧೯ (೧೬೦) ಮಾನ್ಯ ನಗರಾಭಿವೃದ್ಧಿ ಹಾಗೂ ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲ್ಯಾಣ ಕರ್ನಾಟಕದ ಕೇಂದ್ರವಾದ ಕಲಬುರಗಿ ನಗರವು ಬೃಹತ್ ಪ್ರಮಾಣದಲ್ಲಿ ಬೆಳೆದಿದ್ದು, ಇದಕ್ಕೆ ಬೇಕಾದ ಯಾವ ಮೂಲಭೂತ ಸೌಲಭ್ಯಗಳನ್ನು ಒದಗಿಸಲಾಗಿದೆ ;

(ಆ) ಕಲಬುರಗಿ ನಗರದ ಕೇಂದ್ರ ಬಸ್ ನಿಲ್ದಾಣದ ಎದುರಿನ ರಸ್ತೆಯಲ್ಲಿ ಪ್ರತಿದಿನ ಸಾವಿರಾರು ಬಸ್ಸುಗಳು/ಆಟೋಗಳು/ಇನ್ನಿತರ ವಾಹನಗಳು ಓಡಾಡುವುದರಿಂದ ಜನರಿಗೆ ಮತ್ತು ವಾಹನ ಚಾಲಕರಿಗೆ ತೊಂದರೆ ಆಗುತ್ತಿರುವುದನ್ನು ತಡೆಯಲು ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ;

(ಇ) ನಗರದ ವಲ್ಲಭಭಾಯಿ ಪಟೇಲ್ ಸರ್ಕಲ್‌ನಿಂದ (ತಿಮ್ಮಾಪುರ ಸರ್ಕಲ್ ಎಂದು ಕರೆಯುತ್ತಾರೆ) ಎಂ.ಎಸ್.ಕೆ. ಮಿಲ್ ಸರ್ಕಲ್‌ವರೆಗೆ ಫ್ಲೈ ಓವರ್ ರಸ್ತೆಯನ್ನು ನಿರ್ಮಾಣ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಈ ಫ್ಲೈ ಓವರ್ ರಸ್ತೆಯನ್ನು ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿಗೆ (ಕೆಕೆಆರ್‌ಡಿಬಿ) ಒದಗಿಸಿದ ಹಣದ ಸಹಾಯದಿಂದ ನಿರ್ಮಾಣ ಮಾಡಲು ಕಾರ್ಯ ಯೋಜನೆ ಸಿದ್ಧಪಡಿಸಲಾಗಿದೆಯೇ ? (ವಿವರ ನೀಡುವುದು)

## ಕಲಬುರಗಿಯಲ್ಲಿ ದೊಡ್ಡ ಕೈಗಾರಿಕೆಗಳ ಬಗ್ಗೆ

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು):-**

೨೨೦ (೧೮೮೮) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರಗಿ ನಗರದ ಸುತ್ತಮುತ್ತಲಿನ ಪ್ರದೇಶದಲ್ಲಿ ದೊಡ್ಡ ಕೈಗಾರಿಕೆ ಸ್ಥಾಪಿಸಲು ಯಾವುದಾದರು ಯೋಜನೆ ರೂಪಿಸಲಾಗಿದೆಯೇ ; (ವಿವರ ಒದಗಿಸುವುದು)

(ಆ) ಈ ಯೋಜನೆಯಿಂದ ಕಲಬುರಗಿ ಎಷ್ಟು ಸ್ಥಳೀಯರಿಗೆ ಉದ್ಯೋಗಾವಕಾಶ ಲಭಿಸುತ್ತದೆ ; ಬೃಹತ್ ಕೈಗಾರಿಕೆಗಳನ್ನು

ಸ್ಥಾಪಿಸಲು ಮತ್ತು ಇಲ್ಲಿಯ ವಿದ್ಯಾವಂತರು ಉದ್ಯೋಗಕ್ಕಾಗಿ ಬೆಂಗಳೂರಿನಂತಹ ನಗರಕ್ಕೆ ಹೋಗುವುದನ್ನು ತಪ್ಪಿಸಲು ಸರ್ಕಾರದ ಮುಂದಿರುವ ಕಾರ್ಯಕ್ರಮಗಳೇನು ;

(ಇ) ಎಷ್ಟು ಬೃಹತ್ ಕೈಗಾರಿಕೆಗಳು ಕಲಬುರಗಿಯಲ್ಲಿ ಎಂದಿನಿಂದ ಕಾರ್ಯಾರಂಭ ಮಾಡಲಿವೆ ? (ವಿವರ ಒದಗಿಸುವುದು)

## ಕರ್ನಾಟಕ ರಾಜ್ಯ ಮಾವು ಅಭಿವೃದ್ಧಿ ಮತ್ತು ಮಾರುಕಟ್ಟೆ ನಿಗಮದ ಬಗ್ಗೆ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-**

೨೨೧ (೧೭೯) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಮಾವು ಅಭಿವೃದ್ಧಿ ಮತ್ತು ಮಾರುಕಟ್ಟೆ ನಿಗಮವನ್ನು ಯಾವಾಗ ಸ್ಥಾಪಿಸಲಾಗಿದೆ ಹಾಗೂ ಈ ನಿಗಮದ ಉದ್ದೇಶಗಳು ಯಾವುವು ; (ಪೂರ್ಣ ವಿವರ ನೀಡುವುದು)

(ಆ) ರಾಜ್ಯದಲ್ಲಿ ಮಾವು ಬೆಳೆಗೆ ಗುರುತಿಸಿರುವ ಪ್ರದೇಶಗಳು ಯಾವುವು ಮತ್ತು ರಾಜ್ಯದಲ್ಲಿ ಪ್ರತಿವರ್ಷ ಬರುವ ಮಾವಿನ ಉತ್ಪಾದನೆ ಎಷ್ಟು ;

(ಇ) ರಾಜ್ಯದಲ್ಲಿನ ಮಾವು ಬೆಳೆಗಾರರಿಗೆ ಈ ನಿಗಮದಿಂದ ನೀಡುವ ಸೇವೆಗಳು ಮತ್ತು ಯೋಜನೆಗಳು ಯಾವುವು ; ಇವುಗಳ ಅನುಷ್ಠಾನ ಯಾವ ಹಂತದಲ್ಲಿದೆ ;

(ಈ) ರಾಜ್ಯ ಮತ್ತು ಕೇಂದ್ರ ಸರ್ಕಾರ ಈ ನಿಗಮಕ್ಕೆ ಕಳೆದ ೩ ವರ್ಷಗಳಿಂದ ನೀಡಿರುವ ಅನುದಾನ ಎಷ್ಟು ಹಾಗೂ ಈ ಅನುದಾನವನ್ನು ಯಾವ ರೀತಿ ಬಳಸಲಾಗಿದೆ ; (ಪೂರ್ಣ ಮಾಹಿತಿ ನೀಡುವುದು)

(ಉ) ರಾಜ್ಯದಲ್ಲಿ ಈ ನಿಗಮದಿಂದ ನಿರ್ವಹಿಸಲಾಗಿರುವ ಮಾವು ಸಂಸ್ಕರಣ ಘಟಕಗಳು ಯಾವುವು ; ಅವುಗಳು ನಿರ್ವಹಿಸುತ್ತಿರುವ ಕಾರ್ಯಗಳು ಯಾವುವು ; ರಾಜ್ಯದಲ್ಲಿ ಮಾವಿನ ಉತ್ಪಾದನೆಗೆ ಅನುಗುಣವಾಗಿ ಮಾವು ಸಂಸ್ಕರಣ ಘಟಕಗಳನ್ನು ಬೆಳೆಗಾರರ ಒತ್ತಾಯದಂತೆ ಮಾಡಲಾಗಿದೆಯೇ ; ಇಲ್ಲದಿದ್ದಲ್ಲಿ, ಕಾರಣಗಳೇನು ? (ಪೂರ್ಣ ವಿವರ ನೀಡುವುದು)

## ಸಣ್ಣ ಕೈಗಾರಿಕೆ ಅಭಿವೃದ್ಧಿ ನಿಗಮದ ಕೈಗಾರಿಕಾ ಶೆಡ್ ಮತ್ತು ನಿವೇಶನಗಳ ಬಗ್ಗೆ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-**

೨೨೨ (೧೮೦) ಮಾನ್ಯ ಸಣ್ಣ ಕೈಗಾರಿಕೆ ಹಾಗೂ ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಸೂಕ್ಷ್ಮ, ಸಣ್ಣ, ಮಧ್ಯಮ ಕೈಗಾರಿಕೆಗಳನ್ನು ಪ್ರಾರಂಭಿಸಲು ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆ ಅಭಿವೃದ್ಧಿ ನಿಗಮದಿಂದ ಕೈಗಾರಿಕಾ ಶೆಡ್ ಮತ್ತು ನಿವೇಶನಗಳನ್ನು ಮಂಜೂರು ಮಾಡಲು ಅನುಸರಿಸುತ್ತಿರುವ ಮಾನದಂಡಗಳೇನು ; ಸದರಿ ನಿಗಮದಿಂದ ಈ ಉದ್ಯಮಗಳಿಗೆ ಇದುವರೆಗೂ ಹಂಚಿಕೆಯಾಗಿರುವ ಕೈಗಾರಿಕಾ ಶೆಡ್ ಮತ್ತು ನಿವೇಶನಗಳು ಎಷ್ಟು ; (ಜಿಲ್ಲಾವಾರು, ವರ್ಷವಾರು ಪೂರ್ಣ ಮಾಹಿತಿ ನೀಡುವುದು)

(ಆ) ಈ ರೀತಿ ಮಂಜೂರು ಮಾಡಿದ ನಿವೇಶನ ಮತ್ತು ಕೈಗಾರಿಕೆ ಶೆಡ್‌ಗಳಲ್ಲಿ ನಿರುದ್ಯೋಗಿ ಯುವಕರಿಗೆ ಮಂಜೂರು ಮಾಡಿರುವ ಸಂಖ್ಯೆ ಎಷ್ಟು ಪ್ರಮಾಣದಲ್ಲಿ ರಿಯಾಯಿತಿ ನೀಡಲಾಗಿದೆ ; (ಪೂರ್ಣ ವಿವರ ನೀಡುವುದು)

(ಇ) ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯಿಂದ ಸಣ್ಣ ಕೈಗಾರಿಕೆ ಸ್ಥಾಪನೆ ಮಾಡುವವರಿಗೆ ಶೇಕಡಾ ೫೦ ರ ರಿಯಾಯಿತಿ ದರದಲ್ಲಿ ನಿವೇಶನ ಮತ್ತು ಶೆಡ್‌ಗಳನ್ನು ನೀಡಲು ಸರ್ಕಾರಕ್ಕಿರುವ ತೊಂದರೆಗಳೇನು ; ಈ ಬಗ್ಗೆ ಸರ್ಕಾರ ಕೈಗೊಳ್ಳಲಿರುವ ಕ್ರಮವೇನು ; (ಪೂರ್ಣ ವಿವರ ನೀಡುವುದು)

(ಈ) ಸೂಕ್ಷ್ಮ ಸಣ್ಣ ಮತ್ತು ಮಧ್ಯಮ ಉದ್ಯಮಗಳಿಗೆ (ಎಂ.ಎಸ್.ಎಂ.ಇ) ಇ-ಕಾಮರ್ಸ್ ಮಾರ್ಕೆಟಿಂಗ್ ವೇದಿಕೆಯನ್ನು ಪ್ರಾರಂಭಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳು ಯಾವುವು ; ಈ ಬಗ್ಗೆ ಕೇಂದ್ರ ಸರ್ಕಾರದಿಂದ ದೊರೆತಿರುವ ನೆರವು ಮತ್ತು ಸೌಲಭ್ಯಗಳು ಯಾವುವು ? (ಪೂರ್ಣ ವಿವರ ನೀಡುವುದು)

## ಯಶಸ್ವಿನಿ ಆರೋಗ್ಯ ವಿಮಾ ಯೋಜನೆ ಅನುಷ್ಠಾನದ ಬಗ್ಗೆ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-**

೨೨೩ (೧೮೧) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಪುನರ್ ಪ್ರಾರಂಭಿಸಿರುವ ಯಶಸ್ವಿನಿ ಆರೋಗ್ಯ ವಿಮಾ ಯೋಜನೆಯ ರೂಪುರೇಷೆಗಳೇನು ; ಈ ಯೋಜನೆಯಡಿ ಸದಸ್ಯತ್ವ ನೊಂದಾವಣೆಗೆ ಇರುವ ಮಾನದಂಡಗಳೇನು ; (ಪೂರ್ಣ ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ಪುನರ್ ಆರಂಭಿಸಿರುವ ಯಶಸ್ವಿನಿ ಆರೋಗ್ಯ ವಿಮಾ ಯೋಜನೆಯಲ್ಲಿ ಹಲವಾರು ಲೋಪದೋಷಗಳು ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಈ ಲೋಪದೋಷಗಳನ್ನು ಸರಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳು ಯಾವುವು ; (ಪೂರ್ಣ ವಿವರಗಳೊಂದಿಗೆ ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿ ಈ ಯೋಜನೆಯಡಿಯಲ್ಲಿ ನೋಂದಾಯಿತ ಸದಸ್ಯರ ಸಂಖ್ಯೆ ಗ್ರಾಮೀಣ/ನಗರ, ಸರ್ಕಾರಿ/ಖಾಸಗಿ ಆಸ್ಪತ್ರೆಗಳ ಸಂಖ್ಯೆ ಎಷ್ಟು ಮತ್ತು ಅವು ಯಾವುವು ; (ಜಿಲ್ಲಾವಾರು ಪೂರ್ಣ ಮಾಹಿತಿ ನೀಡುವುದು)

(ಈ) ರಾಜ್ಯದಲ್ಲಿ ಇತ್ತೀಚೆಗೆ ಜಾರಿಯಾದ ಈ ಯೋಜನೆ ಅಡಿಯಲ್ಲಿ ಸೌಲಭ್ಯ/ ಪ್ರಯೋಜನ ಪಡೆದ ಫಲಾನುಭವಿಗಳ ಸಂಖ್ಯೆ ಎಷ್ಟು; (ಪೂರ್ಣ ವಿವರ ನೀಡುವುದು)

(ಊ) ಈ ಯೋಜನೆಯನ್ನು ಹೆಚ್ಚು ಪರಿಣಾಮಕಾರಿಯಾಗಿ ವಿಸ್ತರಿಸಲು ಸರ್ಕಾರ ಚಿಂತಿಸುವುದೇ ; ಹಾಗಿದ್ದಲ್ಲಿ, ವಿಸ್ತರಣೆಯ ರೂಪುರೇಷೆಗಳೇನು ?

## ರಾಜ್ಯದಲ್ಲಿ ಅಮೃತ ಭಾರತ ಸ್ಟೇಷನ್ ಯೋಜನೆಯಡಿ ಸ್ಟೇಷನ್‌ಗಳ ಉನ್ನತೀಕರಣದ ಬಗ್ಗೆ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-**

೨೨೪ (೧೮೨) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕೇಂದ್ರ ಸರ್ಕಾರದ ಭಾರತೀಯ ರೈಲ್ವೆ ಅಮೃತ ಭಾರತ ಸ್ಟೇಷನ್ ಯೋಜನೆಯನ್ನು ಜಾರಿಗೊಳಿಸಲಾಗುತ್ತಿದೆಯೇ ; ಹಾಗಿದ್ದಲ್ಲಿ, ಈ ಯೋಜನೆಯ ರೂಪು-ರೇಷೆಗಳು ಯಾವುವು ಮತ್ತು ಯೋಜನೆಯ ಕಾರ್ಯವ್ಯಾಪ್ತಿಗಳು ಎಷ್ಟು ; (ಪೂರ್ಣ ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ಅಮೃತ ಭಾರತ ಸ್ಟೇಷನ್ ಯೋಜನೆಯಡಿ ಸ್ಟೇಷನ್‌ಗಳ ಉನ್ನತೀಕರಣ ಮತ್ತು ಆಧುನೀಕರಣಕ್ಕೆ ಆಯ್ಕೆಯಾಗಿರುವ ಸ್ಟೇಷನ್‌ಗಳು ಯಾವುವು ; ಈ ಸ್ಟೇಷನ್‌ಗಳ ಉನ್ನತೀಕರಣ ಯಾವ ಹಂತಗಳಲ್ಲಿವೆ ; (ಪೂರ್ಣ ವಿವರ ನೀಡುವುದು)

(ಇ) ಅಮೃತ ಭಾರತ ಸ್ಟೇಷನ್ ಯೋಜನೆಯಡಿ ಸ್ಟೇಷನ್‌ಗಳ ಉನ್ನತೀಕರಣದ ಬಗ್ಗೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ನಡುವೆ ಒಡಂಬಡಿಕೆ ಆಗಿದೆಯೇ ಮತ್ತು ಸ್ಟೇಷನ್‌ಗಳ ಉನ್ನತೀಕರಣದ ಬಗ್ಗೆ ಕೇಂದ್ರ ಸರ್ಕಾರ, ರಾಜ್ಯ ಸರ್ಕಾರದೊಂದಿಗೆ ಸಮಾಲೋಚನೆ ಮತ್ತು ಅಭಿಪ್ರಾಯ ಸಂಗ್ರಹಿಸಿದೆಯೇ ? (ಪೂರ್ಣ ವಿವರ ನೀಡುವುದು)

## ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ವಿವಿಧ ಯೋಜನೆಗಳ ಬಗ್ಗೆ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–**

೨೨೫ (೧೮೩) ಮಾನ್ಯ ಪೌರಾಡಳಿತ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ವಿವಿಧ ಯೋಜನೆಗಳ ಅಡಿಯುಲ್ಲಿ ವಿವಿಧ ನಗರ ಸ್ಥಳೀಯು ಸಂಸ್ಥೆಗಳಲ್ಲಿ ಅನುಷ್ಠಾನಗೊಳಿಸುತ್ತಿರುವ ಕುಡಿಯುವ ನೀರಿನ ಯೋಜನೆಗಳು ಯಾವುವು ; (ನಗರ ಸ್ಥಳೀಯ ಸಂಸ್ಥೆವಾರು, ಯೋಜನೆವಾರು ಮತ್ತು ವರ್ಷವಾರು ಪೂರ್ಣ ಮಾಹಿತಿ ನೀಡುವುದು)

(ಆ) ರಾಜ್ಯ ಮತ್ತು ಕೇಂದ್ರ ಸರ್ಕಾರಗಳಿಂದ ಈ ಯೋಜನೆಗಳ ಅನುಷ್ಠಾನಕ್ಕೆ ವಿವಿಧ ಯೋಜನೆ ಅಡಿ ಬಿಡುಗಡೆಯಾಗಿರುವ ಅನುದಾನ ಎಷ್ಟು ಮತ್ತು ಈ ಅನುದಾನ ಬಿಡುಗಡೆ ಮತ್ತು ಖರ್ಚು-ವೆಚ್ಚ ಸೇರಿದಂತೆ ನಗರ ಸ್ಥಳೀಯ ಸಂಸ್ಥೆವಾರು, ಯೋಜನಾವಾರು ಮತ್ತು ವರ್ಷವಾರು ಪೂರ್ಣ ಮಾಹಿತಿ ನೀಡುವುದು ;

(ಇ) ರಾಜ್ಯವು ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಪ್ರತಿ ವರ್ಷ ಗ್ರಾಮಾಂತರ ಜನರ ವಲಸೆಯಿಂದ ಜನಸಂಖ್ಯೆ ಹೆಚ್ಚಳವಾಗುತ್ತಿದ್ದು, ಪಟ್ಟಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ತ್ರೀವ್ರ ಸಮಸ್ಯೆ ಉಂಟಾಗುವುದರಿಂದ, ರಾಜ್ಯ ಸರ್ಕಾರ ಕುಡಿಯುವ ನೀರಿನ ಯೋಜನೆಗಳ ಅನುಷ್ಠಾನವನ್ನು ಪುನರ್ ಅವಲೋಕಿಸಿ ಕುಡಿಯುವ ನೀರಿನ ಸಮಸ್ಯೆ ಬಗೆಹರಿಸಲು ಕ್ರಮ ಜರುಗಿಸುವುದೇ ? (ಪೂರ್ಣ ಮಾಹಿತಿ ನೀಡುವುದು)

## ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ಯೋಜನೆಗಳ ಅನುಷ್ಠಾನದ ಬಗ್ಗೆ

**ಶ್ರೀ ಎಂ.ಎಲ್. ಅನಿಲ್ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೨೬ (೨೦೭) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ 3 ವರ್ಷಗಳಿಂದ ತೋಟಗಾರಿಕಾ ಇಲಾಖೆಯಿಂದ ವಿವಿಧ ಲೆಕ್ಕ ಶೀರ್ಷಿಕೆಗಳ ಅಡಿಯಲ್ಲಿ ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಕೈಗೊಂಡ ಕಾಮಗಾರಿಗಳು ಯಾವುವು ; (ವಾರ್ಷಿಕವಾರು, ಲೆಕ್ಕ ಶೀರ್ಷಿಕೆವಾರು ಅನುದಾನದ ವಿವರ ನೀಡುವುದು)

(ಆ) ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಯ ವ್ಯಾಪ್ತಿಯಲ್ಲಿ ತೋಟಗಾರಿಕಾ ಇಲಾಖೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ತೋಟಗಾರಿಕಾ ಕ್ಷೇತ್ರಗಳು/ನರ್ಸರಿಗಳು ಯಾವುವು ;

(ಇ) ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಯ ನರ್ಸರಿಗಳ ಅಭಿವೃದ್ಧಿ ನಿರ್ವಹಣೆಗೆ ವಿವಿಧ ಲೆಕ್ಕ ಶೀರ್ಷಿಕೆಯಡಿ ಬಿಡುಗಡೆಗೊಂಡ ಅನುದಾನದವೆಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ರೈತರಿಗೆ ಸಹಾಯಧನ ನೀಡಿ ತೋಟಗಾರಿಕಾ ಕ್ಷೇತ್ರವನ್ನು ಉತ್ತೇಜಿಸಲು ಸರ್ಕಾರ ರೂಪಿಸಿರುವ ಕಾರ್ಯಕ್ರಮಗಳು ಯಾವುವು ?

## ಪಟ್ಟಣ ಪಂಚಾಯತಿಯಲ್ಲಿ ನಡೆಸಿರುವ ಕಾಮಗಾರಿಗಳ ಬಗ್ಗೆ

**ಶ್ರೀ ಎಂ.ಎಲ್. ಅನಿಲ್ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)**

೨೨೭ (೨೦೮) ಮಾನ್ಯ ಪೌರಾಡಳಿತ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಶೃಂಗೇರಿ ಪಟ್ಟಣ ಪಂಚಾಯಿತಿಯಲ್ಲಿ ಕಳೆದ 5 ವರ್ಷಗಳಿಂದ ಈವರೆಗಿರುವ ಅಧ್ಯಕ್ಷರ ಸಮಯದಲ್ಲಿ ಅನುಮೋದನೆಗೊಂಡಿರುವ ಮತ್ತು ಪೂರ್ಣಗೊಂಡಿರುವ ಕಾಮಗಾರಿಗಳು ಯಾವುವು ; ಅಪೂರ್ಣಗೊಂಡಿರುವ ಕಾಮಗಾರಿಗಳು ಯಾವುವು ; (ವರ್ಷವಾರು, ಅಧ್ಯಕ್ಷರ ಹಾಗೂ ಕಾಮಗಾರಿ ಮತ್ತು ಕಾಮಗಾರಿ ಮಾಡಿರುವ ಗುತ್ತಿಗೆದಾರರ ಸಂಪೂರ್ಣ ಮಾಹಿತಿ ನೀಡುವುದು)

(ಆ) ಕಳೆದ 3 ವರ್ಷಗಳಲ್ಲಿ ಶೃಂಗೇರಿ ಪಟ್ಟಣ ಪಂಚಾಯಿತಿಗೆ ಸರ್ಕಾರದಿಂದ ಬಿಡುಗಡೆಯಾಗಿರುವ ಅನುದಾನವೆಷ್ಟು ; ಈ ಅನುದಾನವನ್ನು ಯಾವ ಯಾವ ಉದ್ದೇಶಕ್ಕಾಗಿ ಬಳಸಿಕೊಳ್ಳಲಾಗಿದೆ ; ಪೂರ್ಣಗೊಂಡಿರುವ ಕಾಮಗಾರಿಗಳು ಯಾವುವು ; ಅಪೂರ್ಣಗೊಂಡಿರುವ ಕಾಮಗಾರಿಗಳು ಯಾವುವು ; (ವರ್ಷವಾರು, ಕಾಮಗಾರಿವಾರು ಮತ್ತು ಕಾಮಗಾರಿ ಮಾಡಿರುವ ಗುತ್ತಿಗೆದಾರರ ಸಂಪೂರ್ಣ ಮಾಹಿತಿ ನೀಡುವುದು)

(ಇ) ಶೃಂಗೇರಿ ಪಟ್ಟಣ ಪಂಚಾಯಿತಿ ವ್ಯಾಪ್ತಿಗೆ ಬರುವಂತಹ ಸರ್ಕಾರದ ಆಸ್ತಿಗಳು ಯಾವುವು ; ಸದರಿ ಆಸ್ತಿಗಳನ್ನು ಯಾವ ಯಾವ ಉದ್ದೇಶಕ್ಕಾಗಿ ಬಳಸಿಕೊಳ್ಳಲಾಗಿದೆ ; ಶೃಂಗೇರಿ ಪಟ್ಟಣ ಪಂಚಾಯಿತಿಯಲ್ಲಿ ಸಿಬ್ಬಂದಿ ವರ್ಗದ ಕೊರತೆ ಹಾಗೂ ಇಲಾಖೆ

ಕಾರ್ಯಾಚರಣೆಗೆ ಬೇಕಾಗಿರುವ ಮೂಲಸೌಲಭ್ಯ / ಸೌಕರ್ಯಗಳನ್ನು ಸುವ್ಯವಸ್ಥಿತವಾಗಿ ಒದಗಿಸಿಲ್ಲದ ಕಾರಣ ಯೋಜನಾನುಷ್ಠಾನದಲ್ಲಿ ಎದುರಿಸುತ್ತಿರುವ ಅನಾನುಕೂಲಗಳನ್ನು ಪರಿಹರಿಸುವಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳು ಯಾವುವು ? (ಸಂಪೂರ್ಣವಾದ ಮಾಹಿತಿ ನೀಡುವುದು)

## ನಗರೋತ್ಥಾನ ಯೋಜನೆ ಬಗ್ಗೆ

**ಶ್ರೀ. ಎಂ.ಎಲ್. ಅನಿಲ್ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೨೮ (೨೦೯) ಮಾನ್ಯ ಪೌರಾಡಳಿತ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ 5 ವರ್ಷಗಳಿಂದ ಇಲ್ಲಿಯವರೆಗೆ ನಗರೋತ್ಥಾನ ಯೋಜನೆಯಡಿ ಶೃಂಗೇರಿ ತಾಲ್ಲೂಕಿಗೆ ಬಿಡುಗಡೆಯಾಗಿರುವ ಅನುದಾನವೆಷ್ಟು ; (ವರ್ಷವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಕಳೆದ 5 ವರ್ಷಗಳಿಂದ ಇಲ್ಲಿಯವರೆಗೆ ನಗರೋತ್ಥಾನ ಯೋಜನೆಯಡಿ ಬಿಡುಗಡೆಯಾದ ಅನುದಾನದಲ್ಲಿ ಯಾವ ಯಾವ ಕಾಮಗಾರಿ ಕೈಗೊಳ್ಳಲಾಗಿದೆ ; (ವರ್ಷವಾರು, ಕಾಮಗಾರಿವಾರು ಹಾಗೂ ಟೆಂಡರ್‌ದಾರರ ಸಂಪೂರ್ಣವಾದ ಮಾಹಿತಿ ನೀಡುವುದು)

(ಇ) ನಗರೋತ್ಥಾನ ಯೋಜನೆಯಡಿ ಕಳಪೆ ಕಾಮಗಾರಿ ಮಾಡಿರುವವರ ವಿರುದ್ಧ ಸರ್ಕಾರದಿಂದ ಯಾವ ಕ್ರಮ ಕೈಗೊಳ್ಳಲಾಗುವುದು ; ಚಿಕ್ಕಮಗಳೂರು ಜಿಲ್ಲೆಯಲ್ಲಿ ಕಳೆದ ೩ ವರ್ಷಗಳಿಂದ ಇಲ್ಲಿಯವರೆಗೆ ಕಳಪೆ ಕಾಮಗಾರಿ ಮಾಡಿರುವವರ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ? (ಸಂಪೂರ್ಣ ಮಾಹಿತಿ ನೀಡುವುದು)

## ನೆಲಮಂಗಲ ಸಮೀಪದ ದಾಬಸ್‌ಪೇಟೆ

## ಭೂ ಸ್ವಾಧೀನದಲ್ಲಿನ ಅವ್ಯವಹಾರದ ಬಗ್ಗೆ

**ಶ್ರೀ ಚಿದಾನಂದ್ ಎಂ.ಗೌಡ (ಪದವೀಧರರ ಕ್ಷೇತ್ರ) :-**

೨೨೯ (೨೬೭) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ಐದು ವರ್ಷದಲ್ಲಿ ಕೆ.ಐ.ಎ.ಡಿ.ಬಿ ವತಿಯಿಂದ ಬೆಂಗಳೂರು ಗ್ರಾಮಾಂತರ ಜಿಲ್ಲೆ ನೆಲಮಂಗಲ ತಾಲ್ಲೂಕಿನ ದಾಬಸ್‌ಪೇಟೆಯ ಸುತ್ತಮುತ್ತ ಕೈಗಾರಿಕೆ ಮತ್ತು ಇತರ ಅಭಿವೃದ್ಧಿ ಕಾಮಗಾರಿಗಳ ಸಲುವಾಗಿ ಎಷ್ಟು ಎಕರೆ ಭೂಮಿಯನ್ನು ಸ್ವಾಧೀನ ಪಡಿಸಿಕೊಳ್ಳಲು ಉದ್ದೇಶಿಸಿದೆ ; (ಗ್ರಾಮವಾರು ಸರ್ವೆ ನಂಬರ್‌ವಾರು ಸಂಪೂರ್ಣ ವಿವರ ನೀಡುವುದು)

(ಆ) ಸದರಿ ಭೂಮಿಯ ಪ್ರಸ್ತುತ ಮಾರುಕಟ್ಟೆ ಬೆಲೆಯ ಎಷ್ಟು ಪಟ್ಟು ಹಣವನ್ನು ರೈತರಿಗೆ/ಭೂ ಮಾಲೀಕರಿಗೆ ನೀಡಲಾಗುವುದು ;

(ಇ) ಭೂ ಸ್ವಾಧೀನ ಮಾಡಿದ ಭೂಮಿಯಲ್ಲಿ ಬೆಳೆದಿರುವ ಮರಗಳಿಗೆ ನೀಡುವ ಪರಿಹಾರದ ಮೊತ್ತವೆಷ್ಟು ;

(ಈ) ಭೂ ಸ್ವಾಧೀನ ಮಾಡಿಕೊಂಡ ಭೂಮಿಯಲ್ಲಿ ಹಿಂದಿನ ಐದು ವರ್ಷಗಳಲ್ಲಿ ಅರ್.ಟಿ.ಸಿ ಯಲ್ಲಿ ದಾಖಲಾದ ಬೆಳೆಗಳ ವಿವರ ನೀಡುವುದು ; (ಗ್ರಾಮ, ವರ್ಷವಾರು ಸರ್ವೆ ನಂಬರ್‌ವಾರು ಮತ್ತು ಮರ/ಗಿಡಕ್ಕೆ ಪರಿಹಾರಕ್ಕೆ ಶಿಫಾರಸ್ಸು ಮಾಡಿದ/ಪಡೆದ ವಿವರ ನೀಡುವುದು)

(ಉ) ಭೂ ಸ್ವಾಧೀನ ಮಾಡಿದ ನಂತರ ದಲ್ಲಾಳಿಗಳು, ಅಧಿಕಾರಿಗಳು ರಾತ್ರೋರಾತ್ರಿ ಸಾವಿರಾರು ಸಸಿಗಳನ್ನು ನೆಟ್ಟು ಕೋಟ್ಯಾಂತರ ರೂಗಳನ್ನು ವಂಚಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು ?

## ಆಸ್ತಿಗಳನ್ನು ಬೇಡಿಕೆವಹಿಗೆ ಸೇರ್ಪಡೆ ಮಾಡುವ ಬಗ್ಗೆ

**ಶ್ರೀ ಚಿದಾನಂದ್ ಎಂ.ಗೌಡ (ಪದವೀಧರರ ಕ್ಷೇತ್ರ) :-**

೨೩೦ (೨೬೮) ಮಾನ್ಯ ಪೌರಾಡಳಿತ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪಟ್ಟಣ ಪಂಚಾಯತಿ, ಪುರಸಭೆ ಮತ್ತು ನಗರ ಸಭೆಗಳ ವ್ಯಾಪ್ತಿಯಲ್ಲಿ ಇರುವ ಎಲ್ಲಾ ಆಸ್ತಿಗಳನ್ನು ಸಮೀಕ್ಷೆ ಮಾಡಿ ಬೇಡಿಕೆವಹಿಗೆ ಸೇರ್ಪಡೆ ಮಾಡಲು ಆದೇಶಿಸಲಾಗಿದೆಯೇ ; ಆದೇಶಿಸದ್ದಲ್ಲಿ, ಆದೇಶದ ಪ್ರತಿಯನ್ನು ನೀಡುವುದು ;

(ಆ) ಆಸ್ತಿ ವಹಿಗೆ ಸೇರ್ಪಡೆ ಮಾಡಲು ಮಾಲೀಕರಿಂದ ಪಡೆಯುವ ದಾಖಲಾತಿಗಳು ಯಾವುವು ;

(ಇ) ಸದರಿ ಆಸ್ತಿಗಳನ್ನು ಎ ಖಾತಾ ಮತ್ತು ಬಿ ಖಾತಾ ಎಂದು ಹೇಗೆ ವರ್ಗೀಕರಿಸಲಾಗುವುದು ; ಅದರ ಮಾರ್ಗಸೂಚಿಗಳನ್ನು ನೀಡುವುದು ;

(ಈ) ಶಿರಾ ನಗರಸಭೆ ವ್ಯಾಪ್ತಿಯ ಎಷ್ಟು ಆಸ್ತಿಗಳನ್ನು ಹೊಸದಾಗಿ ಸೇರ್ಪಡೆ ಮಾಡಲಾಗಿದೆ ;

(ಉ) ಈ ಹಿಂದೆ ನಿರ್ಮಾಣವಾಗಿದ್ದ ಕಟ್ಟಡಗಳಿಗೆ ಯಾವ ವರ್ಷದಿಂದ ತೆರಿಗೆ ವಿಧಿಸಲಾಗುವುದು ; (ನಿರ್ಮಾಣವಾದ ವರ್ಷದಿಂದ ಅಥವಾ ಬೇಡಿಕೆ ವಹಿಗೆ ಸೇರ್ಪಡೆಯಾದ ವರ್ಷದಿಂದ ವಿವರ ನೀಡುವುದು)

(ಊ) ಕಂದಾಯ ಭೂಮಿಯಲ್ಲಿ ನಿರ್ಮಾಣವಾಗಿರುವ ಆಸ್ತಿಗಳಿಗೆ ಖಾತಾ ಪ್ರಮಾಣ ಪತ್ರವನ್ನು ನೀಡಲಾಗುವುದೇ ; ನೀಡಲಾಗುವುದಿದ್ದರೆ, ಯಾವ ಪ್ರಕಾರದ ಖಾತಾ ಪತ್ರವನ್ನು ನೀಡಲಾಗುವುದು ? (ಎ ಅಥವಾ ಬಿ ಖಾತಾ ವಿವರ ನೀಡುವುದು)

## ಯಶಸ್ವಿನಿ ಯೋಜನೆಯ ಸದಸ್ಯತ್ವದ ಬಗ್ಗೆ

**ಶ್ರೀ ಚಿದಾನಂದ್ ಎಂ.ಗೌಡ (ಪದವೀಧರರ ಕ್ಷೇತ್ರ) :-**

೨೩೧ (೨೬೯) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಯಶಸ್ವಿನಿ ಯೋಜನೆಯಲ್ಲಿ ನೋಂದಣಿಗೆ ನಿಗದಿಪಡಿಸಲಾದ ಗುರಿ ಎಷ್ಟು ಮತ್ತು ಇದರಲ್ಲಿ ಎಷ್ಟು ಸದಸ್ಯರು ಸೇರ್ಪಡೆಯಾಗಿದ್ದಾರೆ ;

(ಆ) ೨೦೨೨-೨೩ ಹಾಗೂ ೨೦೨೩-೨೪ನೇ ಸಾಲಿನಲ್ಲಿ ನೋಂದಣಿ ಮಾಡಿಕೊಂಡ ಸದಸ್ಯರ ಸಂಖ್ಯೆ ಎಷ್ಟು;

(ಇ) ೨೦೨೩-೨೪ರಲ್ಲಿ ಸದಸ್ಯರ ನೊಂದಣಿ ಕಡಿಮೆಯಾಗಲು ಕಾರಣಗಳೇನು ;

(ಈ) ೨೦೨೩-೨೪ರಲ್ಲಿ ನೋಂದಣಿಗೆ ನೀಡಿದ್ದ ಕಾಲಾವಕಾಶ ಎಷ್ಟು;

(ಉ) ಪ್ರಮುಖ ಆಸ್ಪತ್ರೆಗಳನ್ನು ಯಶಸ್ವಿ ಯೋಜನೆಯ ವ್ಯಾಪ್ತಿಗೆ ಸೇರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಹೊಸಕೋಟೆ ನಗರಸಭೆಗೆ ಅನುದಾನದ ಬಗ್ಗೆ

**ಶ್ರೀ ಎನ್. ನಾಗರಾಜು (ಎಂ.ಟಿ.ಬಿ) (ವಿಧಾನಸಭೆಯಿಂದ ಚುನಾಯಿತರಾದವರು) :-**

೨೩೨ (೨೧೧) ಮಾನ್ಯ ಪೌರಾಡಳಿತ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ಒಂದು ವರ್ಷದಲ್ಲಿ ಪೌರಾಡಳಿತ ಇಲಾಖೆಯಿಂದ ಹೊಸಕೋಟೆ ವಿಧಾನಸಭಾ ಕ್ಷೇತ್ರದ ಹೊಸಕೋಟೆ ನಗರಸಭೆಗೆ ಮಂಜೂರಾಗಿರುವ ಅನುದಾನವೆಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಹಾಗಿದ್ದಲ್ಲಿ, ಈ ಅನುದಾನದಲ್ಲಿ ಯಾವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ ? (ಸಂಪೂರ್ಣ ಮಾಹಿತಿ ನೀಡುವುದು)

## ಹೊಸಕೋಟೆ ತಾಲ್ಲೂಕಿನಲ್ಲಿ ಸರ್ಕಾರಿ ಗೋಮಾಳದಲ್ಲಿ ಅಕ್ರಮ ಮರಳು ಗಣಿಗಾರಿಕೆ ನಡೆಸುತ್ತಿರುವ ಬಗ್ಗೆ

**ಶ್ರೀ ಎನ್. ನಾಗರಾಜು (ಎಂ.ಟಿ.ಬಿ) (ವಿಧಾನಸಭೆಯಿಂದ ಚುನಾಯಿತರಾದವರು) :-**

೨೩೩ (೨೧೦) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊಸಕೋಟೆ ತಾಲ್ಲೂಕಿನಲ್ಲಿ ಬರುವ ಸರ್ಕಾರಿ ಗೋಮಾಳ, ಕುಂಟೆ, ಕೆರೆಗಳಲ್ಲಿ ಅಕ್ರಮವಾಗಿ ಮರಳು ತೆಗೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದಯೇ ;

(ಆ) ಹಾಗಿದ್ದಲ್ಲಿ, ಅಂತವರ ಮೇಲೆ ಕೈಗೊಂಡಿರುವ ಕ್ರಮಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಅಕ್ರಮ ಮರಳುಗಾರಿಕೆಯನ್ನು ತಡೆಗಟ್ಟಲು ಕೈಗೊಂಡಿರುವ ಕ್ರಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ನೀಡಿರುವ ಕೃಷಿ ಸಾಲಗಳ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೩೪ (೧೮೭) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಸಹಕಾರ ಸಂಸ್ಥೆಗಳ ಮೂಲಕ ಮಧ್ಯಮಾವಧಿ ಮತ್ತು ದೀರ್ಘಾವಧಿ ಕೃಷಿ ಸಂಬಂಧಿತ ಸಾಲ ಪಡೆದುಕೊಂಡಿರುವ ರೈತರ ಸಂಖ್ಯೆ ಹಾಗೂ ನೀಡಲಾಗಿರುವ ಸಾಲದ ಮೊತ್ತ ಎಷ್ಟು ; (ವಿವರ ನೀಡುವುದು)

(ಆ) ಕೃಷಿ ಮತ್ತು ಕೃಷಿ ಸಂಬಂಧಿತ ಸಾಲಗಳ ಅಸಲು ಪಾವತಿಸಿ, ಸಾಲದ ಮೇಲಿನ ಬಡ್ಡಿ ಮನ್ನಾ ಪ್ರಯೋಜನ ಪಡೆದುಕೊಂಡಿರುವ ರೈತರ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಇ) ಸಾಲ ಮರು ಪಾವತಿಸಲು ರೈತರು ಆರ್ಥಿಕ ಸಂಕಷ್ಟ ಎದುರಿಸುತ್ತಿರುವ ಹಿನ್ನಲೆಯಲ್ಲಿ ರೈತರಿಗೆ ಸಹಕಾರ ಸಂಸ್ಥೆಗಳಿಂದ ಶೂನ್ಯ ಬಡ್ಡಿ ದರದಲ್ಲಿ ನೀಡಲಾಗಿರುವ ಅಲ್ಪಾವಧಿ ಸಾಲವನ್ನು ಮನ್ನಾ ಮಾಡಲಾಗಿದೆಯೇ ; ಎಷ್ಟು ರೈತರ ಸಾಲ ಮನ್ನಾ ಮಾಡಲಾಗಿದೆ ? (ವಿವರ ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ ಕೃಷಿ ಉತ್ಪನ್ನ ಮಾರುಕಟ್ಟೆಗಳ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೩೫ (೧೮೬) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ ಕೃಷಿ ಮಾರುಕಟ್ಟೆ ಸಮಿತಿಗಳೆಷ್ಟು ; ಈ ಸಮಿತಿಗಳ ವಾರ್ಷಿಕ ವಹಿವಾಟು ಎಷ್ಟು ; ಇವುಗಳಿಂದ ಸರ್ಕಾರಕ್ಕೆ ಬರುತ್ತಿರುವ ಆದಾಯವೆಷ್ಟು ; (ವಿವರ ನೀಡುವುದು)

(ಆ) ಕಾಯ್ದೆ ಪ್ರಕಾರ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳಿಗೆ ಎಷ್ಟು ವರ್ಷಗಳಿಗೊಮ್ಮೆ ಚುನಾವಣೆ ನಡೆಸಲಾಗುತ್ತದೆ ; ಈ ಸಂಬಂಧ ಇರುವ ನಿಯಮಗಳೇನು ; (ವಿವರ ನೀಡುವುದು)

(ಇ) ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಪ್ರಾಂಗಣಗಳಲ್ಲಿ ಸ್ವಚ್ಛತೆಯ ಮೇಲುಸ್ತುವಾರಿ ಮಾಡುವವರು ಯಾರು ; ನಿರ್ವಹಣೆಗಾಗಿ ವ್ಯಯಿಸಲಾಗುತ್ತಿರುವ ಮೊತ್ತವೆಷ್ಟು ; (ವಿವರ ನೀಡುವುದು)

(ಈ) ಗ್ರಾಮಾಂತರ ಪ್ರದೇಶಗಳಲ್ಲಿ ಬಹಳಷ್ಟು ಕೃಷಿ ಉತ್ಪನ್ನ ಮಾರುಕಟ್ಟೆಗಳು ಉಪಯೋಗವಾಗದೆ ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು ?

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಕೈಗಾರಿಕೆಗೆ ಕೆ.ಐ.ಎ.ಡಿ.ಬಿ.ಯವರು ಸ್ವಾಧೀನ ಪಡಿಸಿಕೊಂಡಿರುವ ಜಮೀನಿನ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೩೬ (೧೮೫) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಕಳೆದ ೫ ವರ್ಷಗಳಲ್ಲಿ ಕೈಗಾರಿಕೆ ಸ್ಥಾಪನೆ ಉದ್ದೇಶಕ್ಕಾಗಿ ಕೆ.ಐ.ಎ.ಡಿ.ಬಿ ಯು ಎಷ್ಟು ಎಕರೆ ಜಮೀನನ್ನು ಸ್ವಾಧೀನಪಡಿಸಿಕೊಂಡಿದೆ ; (ವಿವರ ನೀಡುವುದು)

(ಆ) ಕೆ.ಐ.ಎ.ಡಿ.ಬಿ ವತಿಯಿಂದ ಖಾಸಗಿ ಸಂಸ್ಥೆಗೆ ಮತ್ತು ಉದ್ಯಮಗಳಿಗೆ ಜಮೀನುಗಳನ್ನು ಹಂಚಿಕೆ ಮಾಡುವಾಗ ಅನುಸರಿಸುತ್ತಿರುವ ಮಾನದಂಡಗಳೇನು ;

(ಇ) ಸದರಿ ಜಿಲ್ಲೆಗಳಲ್ಲಿ ೫ ವರ್ಷಗಳಲ್ಲಿ ಕೆ.ಐ.ಎ.ಡಿ.ಬಿ ಯು ಹಣ ಪಾವತಿಸಿಕೊಂಡು ಎಷ್ಟು ಖಾಸಗಿ ಸಂಸ್ಥೆಗಳಿಗೆ ಜಮೀನು ಹಂಚಿಕೆ ಮಾಡಲಾಗಿದೆ ; (ವಿವರ ನೀಡುವುದು)

(ಈ) ಕಳೆದ ೫ ವರ್ಷಗಳಲ್ಲಿ ಕೆ.ಐ.ಎ.ಡಿ.ಬಿ ಯು ಎಷ್ಟು ಎಕರೆ ಜಮೀನನ್ನು ಸ್ವಾಧೀನಪಡಿಸಿಕೊಂಡಿದೆ ಹಾಗೂ ಭೂಮಿಯನ್ನು ಕಳೆದುಕೊಂಡ ರೈತರಿಗೆ ಯಾವ ರೀತಿಯ ಪರಿಹಾರ ನೀಡಲಾಗಿದೆ ? (ವಿವರ ನೀಡುವುದು)

**ಕೆ. ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು-59/ಕಾ.ಸೂ. 038/400 ಪ್ರತಿಗಳು/10-07-2024